ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೧

**ಪಟ್ಟಿ – ೧೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಮುಂದುವರೆದ ಅಧಿವೇಶನ**

**ಮಂಗಳವಾರ, ದಿನಾಂಕ : ೧೭ನೇ ಮಾರ್ಚ್, ೨೦೨೬**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

## ಹೊಸ ರೈಲ್ವೆ ಮಾರ್ಗಗಳ ಕಾಮಗಾರಿಗಳನ್ನು ತ್ವರಿತಗೊಳಿಸುವ ಬಗ್ಗೆ

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೨೯೫ (೧೪೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಡೂರು–ಚಿಕ್ಕಮಗಳೂರು –ಬೇಲೂರು ಹೊಸ ರೈಲ್ವೆ ಮಾರ್ಗದ (೬೮ ಕಿ.ಮೀ) ಭಾಗವಾಗಿ ೫೬ಕಿ.ಮೀ ಮಾರ್ಗವು ಕಾರ್ಯಾರಂಭ ಮಾಡಿದ್ದು, ಉಳಿದ ಮಾರ್ಗದ ಕಾಮಗಾರಿಗಳನ್ನು ರೈಲ್ವೆ ಇಲಾಖೆ ಯಾವಾಗ ಪೂರ್ಣಗೊಳಿಸಬಹುದೆಂಬ ಮಾಹಿತಿ ರಾಜ್ಯ ಸರ್ಕಾರದ ಗಮನದಲ್ಲಿದೆಯೇ ; (ಮಾಹಿತಿ ಒದಗಿಸುವುದು)

(ಆ) ಹಾಸನ– ಬೇಲೂರು ಹೊಸ ರೈಲು ಮಾರ್ಗಕ್ಕೆ ಭೂಮಿ ಹಸ್ತಾಂತರವಾಗಿದೆಯೇ; ಆಗಿಲ್ಲದಿದ್ದರೆ, ಇನ್ನೂ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ?

## ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೬ (೧೫೦೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಜನಸಂಖ್ಯಾವಾರು ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯ ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆಯೇ ? (ವಿವರ ನೀಡುವುದು)

## ಸಿಂಧನೂರು ತಾಲ್ಲೂಕಿನಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೭ (೧೫೧೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೆಚ್ಚು ಸಂಖ್ಯೆಯ ಯುವಕ/ಯುವತಿಯರು ಶಿಕ್ಷಣ ಪಡೆದು ನಿರುದ್ಯೋಗ ಸಮಸ್ಯೆಯಿಂದಾಗಿ ಉದ್ಯೋಗಕ್ಕಾಗಿ ನೆರೆಯ ನಗರ/ಮಹಾನಗರ/ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರವು ಸಿಂಧನೂರು ತಾಲ್ಲೂಕಿನಲ್ಲಿ ಜಮೀನನ್ನು ಖರೀದಿಸಿ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುವುದೇ ;

(ಇ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರವು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸುವ ಹಿತದೃಷ್ಟಿಯಿಂದ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸುತ್ತದೆ ?

## ಸಿಂಧನೂರು ನಗರದ 'ಮಾಸ್ಟರ್ ಪ್ಲಾನ್' ತಯಾರಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೮ (೧೫೨೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಯಾವ ವರ್ಷದಲ್ಲಿ ಸಿಂಧನೂರು ನಗರದ "ಮಾಸ್ಟರ್ ಪ್ಲಾನ್" ಅನ್ನು ತಯಾರಿಸಲಾಗಿದೆ ;

(ಆ) ಸರ್ಕಾರದ ನಿಯಮಾವಳಿಗಳ ಪ್ರಕಾರ ಎಷ್ಟು ವರ್ಷಗಳಿಗೆ ಒಮ್ಮೆ ನಗರದ "ಮಾಸ್ಟರ್ ಪ್ಲಾನ್ ಅನ್ನು ತಯಾರಿಸಲಾಗುವುದು ;

(ಇ) ಪ್ರಸ್ತುತ ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಸಿಂಧನೂರು ನಗರದ ನೂತನ ಮಾಸ್ಟರ್ ಪ್ಲಾನ್ ತಯಾರಿಸುವ ಪ್ರಸ್ತಾವನೆ ಇದೆಯೇ ;

(ಈ) ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸಿಂಧನೂರು ನಗರದ "ಮಾಸ್ಟರ್ ಪ್ಲಾನ್" ಅನ್ನು ತಯಾರಿಸಲಾಗುವುದು ?

## ಸಿಂಧನೂರು ತಾಲ್ಲೂಕಿನ ವಿವಿಧ ಗ್ರಾಮಗಳನ್ನು ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೯ (೧೫೨೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ವ್ಯಾಪ್ತಿಯ ಜವಳಗೇರಾ, ಬಾದರ್ಲಿ, ಗಾಂಧಿನಗರ, ಸಾಲಗುಂದಾ ಹಾಗೂ ರೌಡಕುಂದಾ ಗ್ರಾಮಗಳನ್ನು ಪ್ರಸ್ತುತ ಇರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಆ) ಮೇಲ್ಕಂಡ ಗ್ರಾಮಗಳ ಜನಸಂಖ್ಯೆ ಕೃಷಿಯೇತರ ಉದ್ಯೋಗದ ಪ್ರಮಾಣ ಹಾಗೂ ಆದಾಯ ಸಾಮರ್ಥ್ಯದ ಆಧಾರದ ಮೇಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಸದರಿ ಗ್ರಾಮಗಳನ್ನು ಪ್ರಸ್ತುತ ಇರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಮೇಲ್ದರ್ಜೆಗೇರಿಸಲಾಗುವುದು ?

## ಹಟ್ಟಿ ಚಿನ್ನದ ಗಣಿ ಕಂಪನಿಯ ಸಿ.ಎಸ್.ಆರ್ ಹಣ ಬಳಕೆಯ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೦ (೧೫೨೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಟ್ಟಿ ಚಿನ್ನದ ಗಣಿ ಕಂಪನಿಯ ೨೦೨೪–೨೫ನೇ ಆರ್ಥಿಕ ವರ್ಷದ ಲಾಭದ ಮೇಲಿನ ಒಟ್ಟು ಸಿ.ಎಸ್.ಆರ್ ಹಣವೆಷ್ಟು ;

(ಆ) ಸದರಿ ಸಿ.ಎಸ್.ಆರ್. ಹಣದ ಬಳಕೆಗೆ ಇರುವ ಮಾನದಂಡಗಳೇನು ;

(ಇ) ನಿಯಮಗಳ ಪ್ರಕಾರ ಸ್ಥಳೀಯವಾಗಿ ಬಳಸಬೇಕಿರುವ ಸಿ.ಎಸ್.ಆರ್. ಅನುದಾನದ ಪಾಲೆಷ್ಟು ;

(ಈ) ೨೦೨೪–೨೫ನೇ ಸಾಲಿನ ಹಟ್ಟಿ ಚಿನ್ನದ ಗಣಿ ಕಂಪನಿಯ ಸಿ.ಎಸ್.ಆರ್ ಹಣದಲ್ಲಿ ಸ್ಥಳೀಯವಾಗಿ ಯಾವ ಯಾವ ಕಾರ್ಯಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಹಜ್ ಯಾತ್ರಿಕರಿಗೆ ರಾಜ್ಯ ಸರ್ಕಾರದಿಂದ ನೀಡಲಾಗುವ ಸೌಲಭ್ಯಗಳ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೧ (೧೫೨೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಿಂದ ಕಳೆದ ಬಾರಿ ಹಜ್ ಯಾತ್ರೆಗೆ ಆಯ್ಕೆಗೊಂಡ ಯಾತ್ರಿಗಳ ಸಂಖ್ಯೆ ಎಷ್ಟು ;

(ಆ) ಯಾತ್ರಿಕರನ್ನು ಆಯ್ಕೆ ಮಾಡಲು ಸರ್ಕಾರ ನಿರ್ಧರಿಸಿರುವ ಮಾನದಂಡಗಳೇನು ;

(ಇ) ರಾಜ್ಯದಿಂದ ತೆರಳುವ ಹಜ್ ಯಾತ್ರಿಕರಿಗೆ ಸರ್ಕಾರದಿಂದ ಒದಗಿಸಲಾಗುವ ಸೌಲಭ್ಯಗಳೇನು ?

## ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೦೨ (೧೫೨೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಬೆಂಗಳೂರು ನಗರವನ್ನು ಹೊರತುಪಡಿಸಿ ರಾಜ್ಯದ ನಗರ ಪ್ರದೇಶಗಳಲ್ಲಿ ಕಳೆದ ೫ ವರ್ಷದಿಂದ ಈವರೆಗೆ ಯಾವ ಯಾವ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿ/ ಯೋಜನೆಗಳನ್ನು ರೂಪಿಸಲಾಗಿದೆ ; ಇಲ್ಲಿಯುವರೆಗೂ ಮುಕ್ತಾಯವಾಗಿರುವ ಕಾಮಗಾರಿ/ ಯೋಜನೆಗಳು ಯಾವುವು ; ಮುಕ್ತಾಯವಾಗದೇ ಬಾಕಿಯಿರುವ ಕಾಮಗಾರಿ/ಯೋಜನೆಗಳು ಯಾವುವು ; ಯಾವ ಕಾರಣಕ್ಕಾಗಿ ಬಾಕಿ ಇವೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷದಿಂದ ಈ ಯೋಜನೆಗಳಿಗೆ ಈವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಕಾಮಗಾರಿ/ಯೋಜನೆವಾರು ಅನುದಾನದ ಸಂಪೂರ್ಣವಾದ ಮಾಹಿತಿ ನೀಡುವುದು ;

(ಇ) ಕೆಲವು ಕಾಮಗಾರಿಗಳಿಗೆ ಸರ್ಕಾರದ ಸ್ಪಷ್ಟ ಸೂಚನೆ ಹಾಗೂ ಆದೇಶಗಳಿದ್ದರೂ ಸಹ ಇಲಾಖೆಯಿಂದ ಪಾಲನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪಾಲನೆ ಮಾಡದಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ನಗರ ಸಭೆಯ ಸ್ವತ್ತುಗಳ ಸಂರಕ್ಷಣೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೩೦೩ (೧೫೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾವ ಸ್ವತ್ತುಗಳನ್ನು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯ ಸ್ವತ್ತು ಎಂದು ಕರೆಯಲಾಗುತ್ತದೆ ; ಇವುಗಳಿಗೆ ಇರಬೇಕಾದ/ನಿರ್ವಹಿಸಬೇಕಾದ ದಾಖಲೆಗಳು ಯಾವುವು ;

(ಆ) ಶಿರಾ ನಗರಸಭೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಸ್ವತ್ತುಗಳು ಯಾವುವು ; (ಸಿ.ಎ ನಿವೇಶನಗಳೂ ಸೇರಿದಂತೆ ಸಂಪೂರ್ಣ ವಿವರ ನೀಡುವುದು)

(ಇ) ಶಿರಾ ನಗರಸಭೆಯು ಸರ್ಕಾರಿ ಸ್ವತ್ತನ್ನು ರಕ್ಷಿಸಲು ಎಷ್ಟು ಆಸ್ತಿಗಳಿಗೆ ಕಾಂಪೌಂಡ್ ನಿರ್ಮಿಸಿದೆ ಅಥವಾ ಸರ್ಕಾರಿ ಸ್ವತ್ತುಗಳ ಕಬಳಿಕೆಯನ್ನು ತಡೆಯಲು ಕೈಗೊಂಡ ಕ್ರಮಗಳೇನು ;

(ಈ) ಶಿರಾ–ಅಮರಾಪುರ ರಸ್ತೆ, ಕೊಲ್ಲಾಪುರದಮ್ಮ ದೇವಾಸ್ಥಾನದ ಹತ್ತಿರ ಕಲ್ಲುಕೋಟೆ ಸ.ನಂ ೩೮ರಲ್ಲಿ ಸಾರ್ವಜನಿಕ ಉದ್ಯಾನದ ಉದ್ದೇಶಕ್ಕೆ ಮೀಸಲಿರಿಸಿದ ಪ್ರದೇಶವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡಲು ನಗರಸಭೆ ಉದ್ದೇಶಿಸಿದೆಯೇ; ಉದ್ದೇಶಿಸಿದ್ದರೆ ಯಾವ ಉದ್ದೇಶಕ್ಕೆ ಬಳಕೆ ಮಾಡಲು ಉದ್ದೇಶಿಸಿದೆ ?

## ಹುಣಸೆ ಕೃಷಿಯಿಂದ ರೈತರು ವಿಮುಖರಾಗುತ್ತಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೩೦೪ (೧೫೫೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಯಾವ ಜಿಲ್ಲೆಗಳಲ್ಲಿ ಹುಣಸೆ ಕೃಷಿಯನ್ನು ಮಾಡಲಾಗುತ್ತಿದೆ ; ವಾರ್ಷಿಕವಾಗಿ ರಾಜ್ಯದಲ್ಲಿ ಉತ್ಪಾದನೆಯಾಗುವ ಹುಣಸೆ ಹಣ್ಣಿನ ಪ್ರಮಾಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹುಣಸೆ ಕೃಷಿ ಮಾಡುವ ವಿಧಾನ ಏನು ; (ವಿವರವಾಗಿ ತಿಳಿಸುವುದು)

(ಇ) ಹುಣಸೆ ಕೊಯ್ಲು ಮತ್ತು ಸಂಸ್ಕರಣೆ ಸಮಯದಲ್ಲಿ ರೈತರು ಕಾರ್ಮಿಕರ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದರ ಯಾಂತ್ರೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಹುಣಸೆ ಕೊಯ್ಲು ಮಾಡುವ ಸಮಯದಲ್ಲಿ ರೈತರು ಅಥವಾ ಕೂಲಿ ಕಾರ್ಮಿಕರು ಮೃತಪಟ್ಟರೆ ಅಥವಾ ಗಾಯಗೊಂಡರೆ ಸರ್ಕಾರ ನೀಡುವ ಪರಿಹಾರದ ಮೊತ್ತವೆಷ್ಟು ; ಸದರಿ ಪರಿಹಾರ ಮೊತ್ತ ಬಹಳ ಕಡಿಮೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಸದರಿ ಮೊತ್ತವನ್ನು ಹೆಚ್ಚಿಸಲು ಕೈಗೊಂಡ ಕ್ರಮವೇನು ;

(ಉ) ಹುಣಸೆ ಕೃಷಿಯು ಬಹಳ ಕಷ್ಟಕರವಾದ ರೈತರು ಹುಣಸೆ ಕೃಷಿಯಿಂದ ವಿಮುಖರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹುಣಸೆ ಕೃಷಿಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಾಗಿ ಭೂಸ್ವಾಧೀನ ಪಡೆಯುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೫ (೧೫೨೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಬೃಹತ್ ಕೈಗಾರಿಕೆಗಳಿಗಾಗಿ ಎಷ್ಟು ಭೂಮಿಯನ್ನು ಸಾರ್ವಜನಿಕರಿಂದ ಪಡೆದುಕೊಳ್ಳಲು ತೀರ್ಮಾನಿಸಲಾಗಿದೆ ; ಯಾವ ಯಾವ ಯೋಜನೆಗಳಿಗಾಗಿ ಭೂಸ್ವಾಧೀನ ಮಾಡಲಾಗಿದೆ ;

(ಆ) ಕೆ.ಐ.ಎ.ಡಿ.ಬಿ ನಿಂದ ಕೈಗಾರಿಕೆಗಾಗಿ ವಶಪಡಿಸಿಕೊಂಡಿರುವ ಭೂಮಿಯನ್ನು ಅದರ ಉದ್ದೇಶಕ್ಕಾಗಿ ಬಳಕೆ ಮಾಡದೇ ಇದ್ದಾಗ ಅದನ್ನು ಮತ್ತೆ ಜಮೀನುದಾರರಿಗೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಇ) ಬೃಹತ್ ಕೈಗಾರಿಕೆಗಾಗಿ ಪ್ರಸ್ತುತ ಯಾವ ಯಾವ ಯೋಜನೆಗಾಗಿ ಭೂಸ್ವಾಧೀನ ಪ್ರಕ್ರಿಯೇ ಚಾಲ್ತಿಯಲ್ಲಿದೆ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಈವರೆಗೂ ಕೆ.ಐ.ಎ.ಡಿ.ಬಿ ಯಿಂದ ಭೂ ಸ್ವಾಧೀನಗೊಂಡಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೬ (೧೫೨೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ ಯಿಂದ ಎಷ್ಟು ಎಕರೆ ಭೂಮಿಯನ್ನು ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಎಷ್ಟು ಎಕರೆಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದೆ ಮತ್ತು ಅಂತಿಮ ಅಧಿಸೂಚನೆಯಲ್ಲಿ ಎಷ್ಟು ಎಕರೆ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ;

(ಇ) ಪ್ರಸ್ತುತ ಬೆಂಗಳೂರು ಜಿಲ್ಲೆಯ ಸುತ್ತಮುತ್ತಲಿನ ಯಾವ ಯಾವ ಜಾಗಗಳಲ್ಲಿ ಎಷ್ಟು ಎಕರೆ ಭೂ ಸ್ವಾಧೀನ ಮಾಡಲು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಭೂಮಿಯ ಪ್ರಸ್ತುತ ಮಾರುಕಟ್ಟೆಯ ಬೆಲೆಯು ಎಷ್ಟು ಪಟ್ಟು ಹಣವನ್ನು ರೈತರಿಗೆ ಭೂ ಮಾಲೀಕರಿಗೆ ನೀಡಲಾಗಿದೆ ? (ವಿವರ ನೀಡುವುದು)

## ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೭ (೧೫೨೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ ಹಾಗೂ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಬೆಂಗಳೂರು ನಗರ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಯಾವುದಾದರೂ ಯೋಜನೆಯನ್ನು ಕೈಗೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಯೋಜನೆಗಳನ್ನು ಕೈಗೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಈಗಾಗಲೇ ಕಳೆದ ೩ ವರ್ಷಗಳಲ್ಲಿ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಎಷ್ಟು ಸಹಾಯಧನ ನೀಡಲಾಗಿದೆ ? (ವಿವರ ನೀಡುವುದು)

## ರಾಜ್ಯದ ಮಹಾನಗರ ಪಾಲಿಕೆ ನಗರಸಭೆ, ಪುರಸಭೆಗಳ ಮಾಹಿತಿ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೮ (೧೫೨೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಮಹಾನಗರ ಪಾಲಿಕೆಗಳು, ನಗರ ಸಭೆಗಳು. ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಈ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು : (ವೃಂದವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳಿಗೆ ಸರ್ಕಾರದಿಂದ ಬಿ–ಖಾತೆಯನ್ನು ನೀಡಲು ನಿಗದಿಪಡಿಸಿರುವ ದಾಖಲೆಗಳು ಯಾವುವು ;

(ಈ) ಪ್ರಸ್ತುತ ಸರ್ಕಾರ ಹೇಳಿರುವ ದಾಖಲೆಗಳಿಗಿಂತ ಹೆಚ್ಚು ದಾಖಲಾತಿಗಳನ್ನು ನೀಡುವಂತೆ ಆಸ್ತಿ ಮಾಲೀಕರಿಗೆ ಅಧಿಕಾರಿಗಳು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಉ) ಸರ್ಕಾರದಿಂದ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳಿಗೆ ಬಿ–ಖಾತೆಯನ್ನು ವಿತರಿಸಿದ ನಂತರ ಆಸ್ತಿಗಳ ಮಾಲೀಕರಿಗೆ ಸರ್ಕಾರದ ಮೂಲ ಭೂತ ಸೌಲಭ್ಯಗಳು ದೊರೆಯುತ್ತಿದೆಯೇ ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೌಸ್‌ಲೆಸ್ ಹಾಗೂ ಸೈಟ್‌ಲೆಸ್ ಕುಟುಂಬಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೯ (೧೫೪೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೌಸ್‌ಲೆಸ್ ಹಾಗೂ ಸೈಟ್‌ಲೆಸ್ ಕುಟುಂಬಗಳ ಗುರುತಿಸುವಿಕೆಗಾಗಿ ಸರ್ವೆ ಕಾರ್ಯ ನಡೆಸಲಾಗಿದೆಯೇ ; ನಡೆಸಿದ್ದರೆ, ಯಾವ ವರ್ಷದಲ್ಲಿ ನಡೆಸಲಾಗಿದೆ ; ನಗರಸಭೆ/ನಗರ ಸ್ಥಳೀಯ ಸಂಸ್ಥೆವಾರು ಹೌಸ್‌ಲೆಸ್ ಮತ್ತು ಸೈಟ್‌ಲೆಸ್ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು : (ಜಿಲ್ಲಾವಾರು ಹಾಗೂ ಸಂಸ್ಥೆವಾರು ವಿವರ ಒದಗಿಸುವುದು)

(ಆ) ನಗರ ವಸತಿ ಯೋಜನೆ ಅಡಿಯಲ್ಲಿ ಸೈಟ್‌ಲೆಸ್ ಕುಟುಂಬಗಳಿಗೆ ಇದುವರೆಗೆ ಎಷ್ಟು ಜನರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; ಇನ್ನೂ ಎಷ್ಟು ಜನರಿಗೆ ನಿವೇಶನ ಹಂಚಿಕೆ ಮಾಡುವುದು ಬಾಕಿ ಇದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಮನೆ ಇಲ್ಲದ ಕುಟುಂಬಗಳಿಗೆ ವಸತಿ ಯೋಜನೆ ಅಡಿಯಲ್ಲಿ ಎಷ್ಟು ಜನರಿಗೆ ಮನೆ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಲಾಗಿದೆ; ಅವುಗಳಲ್ಲಿ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ

ಎಷ್ಟು ನಿರ್ಮಾಣ ಹಂತದಲ್ಲಿರುವ ಹಾಗೂ ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು ; ಇನ್ನೂ ಎಷ್ಟು ಅರ್ಜಿದಾರರಿಗೆ ಮನೆ ಮಂಜೂರು ಮಾಡುವುದು ಬಾಕಿ ಇದೆ ;

(ಈ) ಹೌಸ್‌ಲೆಸ್ ಮತ್ತು ಸೈಟ್‌ಲೆಸ್ ಕುಟುಂಬಗಳಿಗೆ ಮನೆ ಮತ್ತು ನಿವೇಶನ ಮಂಜೂರು ಮಾಡುವ ಪ್ರಕ್ರಿಯೆಯನ್ನು ವೇಗಗೊಳಿಸಲು ಸರ್ಕಾರ ಯಾವ ತುರ್ತು ಕ್ರಮ ಕೈಗೊಂಡಿದೆ ; ಬಾಕಿ ಇರುವ ಅರ್ಹ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ನಿವೇಶನ ಮತ್ತು ಮನೆ ಮಂಜೂರು ಮಾಡಲಾಗುವುದು ?

## ಕರಾವಳಿ ಭಾಗದಲ್ಲಿ ಕೈಗಾರಿಕಾ ಅಭಿವೃದ್ಧಿ ಹೂಡಿಕೆದಾರರ ಬೇಡಿಕೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೦ (೧೪೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಭಾಗದಲ್ಲಿ ಕೈಗಾರಿಕೆಗಳ ಅಭಿವೃದ್ಧಿಗೆ ಹೂಡಿಕೆದಾರರ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಸರ್ಕಾರದ ಮುಂದೆ ಇರುವ ತೊಂದರೆಗಳೇನು ;

(ಆ) ೨೦೨೫–೨೬ರಲ್ಲಿ ನಡೆದ ಉದ್ದಿಮೆದಾರರ ಹೂಡಿಕೆ ಸಮಾವೇಶದಲ್ಲಿ ಕರಾವಳಿ ಭಾಗಕ್ಕೆ ಯಾವುದೇ ಹೆಚ್ಚಿನ ಉದ್ದಿಮೆದಾರರು ಹೂಡಿಕೆ ಮಾಡಲು ಇಚ್ಚಿಸದೇ ಇರಲು ಕಾರಣವೇನು ;

(ಇ) ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಅತ್ಯಂತ ಹೆಚ್ಚಿನ ಅವಕಾಶ ಇರುವ ಹಾಗೂ ಮೂಲಭೂತ ಸೌಕರ್ಯ ಇರುವ ಕರಾವಳಿ ಭಾಗಕ್ಕೆ ಉದ್ದಿಮೆದಾರರ ಜೊತೆಗೆ ಉದ್ಯೋಗವಕಾಶ ಒದಗಿಸಿಕೊಡಲು ಸರ್ಕಾರ ಸಮಗ್ರ ವರದಿ ತಯಾರಿಸಿ ಕ್ರಮಕೈಗೊಳ್ಳುವುದೇ ;

(ಈ) ಈಗಾಗಲೇ ಸ್ಥಾಪನೆಗೊಂಡ ಬೃಹತ್ ಉದ್ದಿಮೆಗಳ ಮತ್ತು ಅವರು ವಶಪಡಿಸಿಕೊಂಡ ಭೂಮಿಗೆ ಪರಿಹಾರ ನೀಡಲು ಮತ್ತು ಉದ್ಯೋಗ ನೀಡದೇ ಸ್ಥಳೀಯರಿಗೆ ವಂಚನೆ ಮಾಡಿದ್ದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಕರಾವಳಿ ಭಾಗದ ೩ ಜಿಲ್ಲೆಗಳಲ್ಲಿ ಪ್ರಸ್ತುತ ಸ್ಥಾಪಿಸಲು ಉದ್ದೇಶಿಸಿರುವ ಖಾಸಗಿ ಮತ್ತು ಸರ್ಕಾರಿ ಉದ್ದಿಮೆಗಳಾವುವು ? (ವಿವರ ನೀಡುವುದು)

## ನಗರ ಹಾಗೂ ಪಟ್ಟಣಗಳಲ್ಲಿ ಯೋಜನಾ ಪ್ರಾಧಿಕಾರ ರಚಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೧ (೧೪೬೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ಮತ್ತು ಯೋಜನಾ ಕಾಯ್ದೆಯಡಿ ಎಷ್ಟು ನಗರ ಹಾಗೂ ಪಟ್ಟಣಗಳಲ್ಲಿ ಯೋಜನಾ ಪ್ರಾಧಿಕಾರ ರಚಿಸಲಾಗಿದೆ ;

(ಆ) ಉಳಿದಿರುವ ಯಾವ ನಗರ ಹಾಗೂ ಪಟ್ಟಣ ಪಂಚಾಯತ್‌ಗಳನ್ನು ಯೋಜನಾ ಪ್ರಾಧಿಕಾರ ಮಾಡಿರುವುದಿಲ್ಲ ; (ವಿವರ ನೀಡುವುದು)

(ಇ) ಯೋಜನಾ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಮಹಾಯೋಜನೆಗಳೇಷ್ಟು : ಹಾಗೂ ಎಷ್ಟು ಯೋಜನೆಗಳು ಪ್ರಗತಿಯಲ್ಲಿವೆ ; (ವಿವರ ನೀಡುವುದು)

(ಈ) ಯೋಜನಾ ಪ್ರಾಧಿಕಾರವಿಲ್ಲದ ಸ್ಥಳಗಳಲ್ಲಿ ಯೋಜನೆ ಪ್ರಾಧಿಕಾರವಾಗಿ ಯಾವ ಯಾವ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಸಾಗಣಿಕೆ ಮಾಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೨ (೧೪೬೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಮರಳು ಸಾಗಣಿಕೆ ಪ್ರಕರಣಗಳು ದಾಖಲಾಗಿದೆ ; ಸರ್ಕಾರದಿಂದ ಎಷ್ಟು ದಂಡ ವಸೂಲಿ ಮಾಡಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಸಾಗಣಿಕೆಯಲ್ಲಿ ಎಷ್ಟು ಪ್ರಕರಣಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಅಕ್ರಮ ಮರಳು ಸಾಗಾಣಿಕೆಯಲ್ಲಿ ಅಧಿಕಾರಿಗಳು ಶಾಮೀಲಾಗಿರುವ ವರದಿಯ ಪ್ರಕರಣಗಳೆಷ್ಟು ; ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಡಿಕೆ ಬೆಳೆಗಾರರು ಆರ್ಥಿಕ ಸಂಕಷ್ಟದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೩ (೧೪೬೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಅಡಿಕೆ ಮರಗಳು ಅಧಿಕ ಪ್ರಮಾಣದಲ್ಲಿ ನಾಶವಾಗಿದ್ದು, ಅಡಿಕೆ ಬೆಳೆಗಾರರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಅಡಿಕೆಗೆ ಕೊಳೆರೋಗ ಹರಡಿ ಅತೀ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಬಗ್ಗೆ ಸರ್ಕಾರ ಸರ್ವೆ ಮಾಡಿದೆಯೇ ; ಅಡಿಕೆ ಬೆಳೆಗಾರರಿಗೆ ಸೂಕ್ತ ಪರಿಹಾರ ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಅಡಿಕೆ ಮರ ನಾಶವಾಗಿರುವ ಎಷ್ಟು ರೈತರಿಗೆ ಪರಿಹಾರ ಧನ ನೀಡಲಾಗಿದೆ ; ಹಾಳಾಗಿರುವ ಅಡಿಕೆ ತೋಟಗಳ ಬಗ್ಗೆ ಸರ್ಕಾರದ ಮುಂದಿರುವ ಯೋಜನೆಗಳಾವುವು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಸ್ಥಾಪಿಸಲಾದ ಸಣ್ಣ ಕೈಗಾರಿಕಾ ಪಾರ್ಕ್‌ಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೪ (೧೪೬೪) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಸ್ಥಾಪಿಸಲಾದ ಸಣ್ಣ ಕೈಗಾರಿಕಾ ಪಾರ್ಕ್‌ಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಮೀಸಲಿಟ್ಟ ಅನುದಾನ ಎಷ್ಟು ; ಎಷ್ಟು ವಿನಿಯೋಗಿಸಲಾಗಿದೆ ; ಬಾಕಿ ಇರುವ ಹಣ ಎಷ್ಟು ? (ವಿವರ ನೀಡುವುದು)

## ಬೆಳಗಾವಿ ನಗರದ ಕೋಟೆ ಕೆರೆಯ ಮಧ್ಯದಲ್ಲಿ ಬುದ್ದ ಮೂರ್ತಿ ಪ್ರತಿಷ್ಠಾಪನೆಯ ಯೋಜನೆ ವಿಳಂಬದ ಕುರಿತು

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೧೩೧೫ (೧೪೮೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಕೋಟೆ ಕೆರೆಯ ಮಧ್ಯದಲ್ಲಿ ೧೦೦ ಅಡಿ ಎತ್ತರದ ಬುದ್ದ ಮೂರ್ತಿ ಪ್ರತಿಷ್ಠಾಪಿಸುವ ಯೋಜನೆಗೆ ೨೦೧೫ ರಲ್ಲೇ ಬೆಳಗಾವಿ ಮಹಾನಗರ ಪಾಲಿಕೆಯು ನಿರ್ಣಯ ಕೈಗೊಂಡು ಅನುದಾನ ಮೀಸಲಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿಂದೆ ನಡೆದ ಅಧಿವೇಶನದಲ್ಲಿ ಸದರಿ ವಿಷಯವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿದ್ದು, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ–೨೦೧೮ರ ಅಡಿಯಲ್ಲಿ ನಿರ್ಬಂಧವಿರುವುದಾಗಿ ಸರ್ಕಾರ ತಿಳಿಸಿದೆ ; ಆದರೆ ಈ ಯೋಜನೆ ಘೋಷಣೆಯಾದದ್ದು. ೨೦೧೫ ರಲ್ಲಿ (ಕಾಯ್ದೆ ಜಾರಿಗೆ ಬರುವ ೩ ವರ್ಷಗಳ ಮೊದಲು) ೨೦೧೫ ರಿಂದ ೨೦೧೮ರ ಅವಧಿಯವರೆಗೆ ಅಂದರೆ ಮೂರು ವರ್ಷಗಳ ಕಾಲ ಈ ಯೋಜನೆಯನ್ನು ಅನುಷ್ಠಾನಗೊಳಿಸದೆ ವಿಳಂಬ ಮಾಡಲು ಕಾರಣಗಳೇನು ;

(ಇ) ೨೦೧೮ರ ಕಾಯ್ದೆಯು ಜಾರಿಗೆ ಬರುವ ಮೊದಲೇ ಮಂಜೂರಾದ ಮತ್ತು ಅನುದಾನ ಮೀಸಲಿಟ್ಟ ಯೋಜನೆಗಳಿಗೆ ಈ ಕಾಯ್ದೆಯನ್ನು ಅನ್ವಯಿಸಿ ತಡೆಹಿಡಿಯುವುದು ಸರಿಯಾದ ಕ್ರಮವೇ ; ಆ ಸಮಯದಲ್ಲಿ ಯೋಜನೆಯನ್ನು ಕಾರ್ಯಗತಗೊಳಿಸುವಲ್ಲಿ ವಿಫಲವಾದ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು ;

(ಈ) ಸಾರ್ವಜನಿಕರ ಭಾವನೆ ಹಾಗೂ ಈ ಯೋಜನೆಯ ಐತಿಹಾಸಿಕ ಮಹತ್ವವನ್ನು ಪರಿಗಣಿಸಿ ಕೆರೆ ಸಂರಕ್ಷಣೆ ಕಾಯ್ದೆಯಡಿ ವಿಶೇಷ ವಿನಾಯಿತಿ ಪಡೆದು ಅಥವಾ ಪರ್ಯಾಯ ತಾಂತ್ರಿಕ ಕ್ರಮಗಳ ಮೂಲಕ ಈ ಬುದ್ಧ ಮೂರ್ತಿಯನ್ನು ಪ್ರತಿಷ್ಠಾಪಿಸಲು ಸರ್ಕಾರವು ಸಿದ್ಧವಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಯೋಜನೆ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಸ್ಥಳೀಯ ಸಂಸ್ಥೆಗಳಲ್ಲಿ ಕಾವೇರಿ ತಂತ್ರಾಂಶದ ಸಮಸ್ಯೆ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೬ (೧೪೬೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ನಗರ ಸಭೆ ಮತ್ತು ಪುರಸಭೆಗಳಲ್ಲಿ ಕಾವೇರಿ ತಂತ್ರಾಂಶ ಸಮಸ್ಯೆಯಿಂದ ಇ–ಖಾತಾ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ೨೦೨೫ರ ಡಿಸೆಂಬರ್‌ನಲ್ಲಿ ಆರಂಭಿಸಿರುವ ಈ ಯೋಜನೆಯು, ೨–೩ ತಿಂಗಳಲ್ಲಿ ತಂತ್ರಾಂಶದ ಸಮಸ್ಯೆ ಎಂದು ಹೇಳುತ್ತಿರುವುದು ನಿಜವೆ; ಹಾಗಿದ್ದಲ್ಲಿ, ಇ–ಖಾತಾ ನಿರ್ವಹಿಸುವ ಸಲುವಾಗಿ ಯಾವ ಸಾಫ್ಟ್ ವೇರ್ ಕಂಪನಿಗೆ ಈ ಯೋಜನೆಯನ್ನು ವಹಿಸಲಾಗಿತ್ತು; ಆ ಕಂಪನಿಯ ಗುಣಮಟ್ಟವೇನು; ವಿವರವಾದ ಮಾಹಿತಿ ಒದಗಿಸುವುದು ;

(ಈ) ಈ ತಂತ್ರಾಂಶದ ಸಮಸ್ಯೆಯಿಂದ ಆನ್ ಲೈನ್ ಬಿಲಿಂಗ್ ಲೈಸೆನ್ಸ್ ಪಡೆಯುವುದು, ಆಸ್ತಿ ವಹಿವಾಟು, ಪೌತಿ ಖಾತೆ ವರ್ಗಾವಣೆಗೆ ತೊಂದರೆ ಆಗಿರುವುದು ಹಾಗೂ ಇದರಿಂದ ಸರ್ಕಾರಕ್ಕೆ ಸಾವಿರಾರು ಕೋಟಿ ಆದಾಯ ನಷ್ಟವಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ೨.೦ ತಂತ್ರಾಂಶ ಸರಿ ಹೋಗುವವರೆಗೆ ಹಳೆಯ ಪದ್ಧತಿಯನ್ನು ಮುಂದುರೆಸಲು ಸರ್ಕಾರ ಆದೇಶ ಹೊರಡಿಸುವುದೇ ?

## ಸ್ಮಾರ್ಟ್ ಸಿಟಿ ನಗರಗಳ ವಿವರ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೭ (೧೪೬೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ನಗರಗಳನ್ನು ಸ್ಮಾರ್ಟ್ ಸಿಟಿ ಯೋಜನೆಗೆ ಆಯ್ಕೆ ಮಾಡಲಾಗಿತ್ತು ;

(ಆ) ಈ ಯೋಜನೆಯಡಿಯಲ್ಲಿ ಪ್ರತಿ ಸ್ಮಾರ್ಟ್ ಸಿಟಿ ನಗರಕ್ಕೆ ಕೇಂದ್ರ ಸರ್ಕಾರದಿಂದ ಕೊಟ್ಟಿರುವ ಅನುದಾನವೆಷ್ಟು ; ಹಾಗೂ ರಾಜ್ಯ ಸರ್ಕಾರದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಇ) ಆಯ್ಕೆಂಯಾದ ಪ್ರತಿ ಸ್ಮಾಟ್ ಸಿಟಿ ನಗರಕ್ಕೆ ನೀಡಿರುವ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗಿದೆಯೇ ; ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳದಿದ್ದಲ್ಲಿ ಉಳಿದಿರುವ ಅನುದಾನವೆಷ್ಟು ; ಈ ಅನುದಾನವನ್ನು ಎಷ್ಟು ದಿನಗಳಲ್ಲಿ ಬಳಕೆ ಮಾಡಿಕೊಳ್ಳಲಾಗುವುದು ;

(ಈ) ಪ್ರತಿ ಸ್ಮಾರ್ಟ್ ಸಿಟಿ ನಗರಕ್ಕೆ ನಿಗದಿಪಡಿಸಿದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಆ ಕಾಮಗಾರಿಗಳಿಗೆ ಖರ್ಚು ಮಾಡಿರುವ ಮೊತ್ತವೆಷ್ಟು ? (ಆಯ್ಕೆಯಾಗಿರುವ ಎಲ್ಲಾ ಸ್ಮಾರ್ಟ್ ಸಿಟಿ ನಗರಗಳ ವಿವರವಾದ ಮಾಹಿತಿ ಒದಗಿಸುವುದು)

## ರಾಜ್ಯದ ನದಿಗಳಲ್ಲಿರುವ ಮರಳಿನ ಪ್ರಮಾಣದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೮ (೧೪೬೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನದಿಗಳಿಂದ ಎಷ್ಟು ಪ್ರಮಾಣದಲ್ಲಿ ಮರಳು ಸಂಗ್ರಹವಾಗುತ್ತಿದೆ, ಪ್ರತಿಯೊಂದು ನದಿಗಳಲ್ಲಿ ಸಂಗ್ರಹವಾಗುವ ಮರಳಿನ ಪ್ರಮಾಣದ ವಿವರವಾದ ಮಾಹಿತಿಯನ್ನು ಒದಗಿಸುವುದು ;

(ಆ) ರಾಜ್ಯದ ಹಳ್ಳ ಕೊಳ್ಳಗಳಲ್ಲಿ ದೊರಕುವ ಒಟ್ಟು ಮರಳಿನ ಪ್ರಮಾಣವೆಷ್ಟು ; (ಮಾಹಿತಿ ನೀಡುವುದು)

(ಇ) ನದಿಗಳಲ್ಲಿ ಸಂಗ್ರಹವಾಗಿರುವ ಮರಳನ್ನು ಟೆಂಡರ್ ಮೂಲಕ ತೀರುವಳಿ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಕಳೆದ ೩

ವರ್ಷಗಳಲ್ಲಿ ಎಷ್ಟು ನದಿಗಳಲ್ಲಿ ಸಂಗ್ರಹವಾಗಿರುವ ಮರಳು ದಿಣ್ಣೆಗಳನ್ನು ಟೆಂಡರ್ ಮೂಲಕ ಹರಾಜು ಹಾಕಲಾಗಿದೆ ಮತ್ತು ಇದರಿಂದ ರಾಜ್ಯ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ; (ವಿವರವಾದ ಮಾಹಿತಿಯನ್ನು ಒದಗಿಸುವುದು)

(ಈ) ಮರಳು ಸಾಗಾಣಿಕೆ ಮಾಡುವ ಪ್ರದೇಶದಲ್ಲಿ ರಸ್ತೆ ಹಾಗೂ ಇತರೆ ಮೂಲಭೂತ ಸೌಕರ್ಯವನ್ನು ಒದಗಿಸಲು ಬಂದ ರಾಜಧನದಿಂದ ಕೈಗೊಂಡಿರುವ ಕಾಮಗಾರಿಗಳ ವಿವರಗಳನ್ನು ಒದಗಿಸುವುದು ; ಈ ಕಾಮಗಾರಿಗಳಿಗೆ ಖರ್ಚು ಮಾಡಿರುವ ಮೊತ್ತವೆಷ್ಟು ? (ಮಾಹಿತಿ ನೀಡುವುದು)

## ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಒದಗಿಸಿರುವ ಅನುದಾನ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೯ (೧೪೬೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಸರ್ಕಾರದಿಂದ ನೀಡಿರುವ ಅನುದಾನವೆಷ್ಟು ; ಸದರಿ ಮಂಡಳಿಯಲ್ಲಿರುವ ಒಟ್ಟು ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಆ) ಸದರಿ ಮಂಡಳಿಯಲ್ಲಿರುವ ಒಟ್ಟು ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ನಿಯೋಜನೆ ಹುದ್ದೆಗಳು ಸೇರಿದಂತೆ) ದಿನಗೂಲಿ/ ಗುತ್ತಿಗೆ ಆಧಾರದ ಮೇರೆಗೆ/ಹೊರಗುತ್ತಿಗೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಈ ನೌಕರರು ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ಮಂಡಳಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ? (ಕಾಮಗಾರಿವಾರು ಖರ್ಚು ಮಾಡಿರುವ ಮೊತ್ತವೆಷ್ಟು)

## ವಿಜಯಪುರ ಮಹಾನಗರ ಸಂಚಾರ ದಟ್ಟಣೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೦ (೧೪೭೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮಹಾನಗರವು ಸಂಚಾರ ದಟ್ಟಣೆಯಿಂದ ತೊಂದರೆಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಜಯಪುರ ಮಹಾನಗರದ ಸಂಚಾರ ದಟ್ಟಣೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಪರ್ಯಾಯ ಮಾರ್ಗಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿಜಯಪುರ ಮಹಾನಗರಕ್ಕೆ ಮೆಟ್ರೋ ರೈಲು ಯೋಜನೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವಿಜಯಪುರ ಮಹಾನಗರದ ಮುಂದಿನ ೨೫ ವರ್ಷಗಳ ಬೆಳವಣಿಗೆಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಹಾಗೂ ಸಂಚಾರದ ದಟ್ಟಣೆಯನ್ನು ತಪ್ಪಿಸಲು ಮಹಾನಗರದ ರೈಲು ನಿಲ್ದಾಣದಿಂದ ಅಕ್ಕಮಹಾದೇವಿ ವಿಶ್ವವಿದ್ಯಾನಿಲಯ ಹಾಗೂ ಗಣೇಶ್ ನಗರದಿಂದ

ಆಶ್ರಮದವರೆಗೂ ಮೆಟ್ರೋ ರೈಲು ಯೋಜನೆ ಪ್ರಾರಂಭಿಸಲು ಸರ್ಕಾರ ಯೋಜನೆಯನ್ನು ರೂಪಿಸಿದೆಯೇ ; ರೂಪಿಸಿದ್ದರೆ, ಯೋಜನೆ ಯಾವ ಹಂತದಲ್ಲಿ ಇದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೧ (೧೪೭೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರಾಜ್ಯದ ಅತೀ ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ದೀರ್ಘಾವಧಿ ಹಣದ ಅಗತ್ಯತೆಗಳನ್ನು ಪೂರೈಸಲು ನೆರವು ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೦೩ ವರ್ಷಗಳಲ್ಲಿ ಎಷ್ಟು ಕೈಗಾರಿಕೆಗಳಿಗೆ ನೆರವು ಒದಗಿಸಲಾಗಿದೆ ; (ವಿಜಯಪುರ ಜಿಲ್ಲೆಯನ್ನು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲಾವಾರು ವಿವರ ನೀಡುವುದು)

(ಇ) ಈ ಸಂಸ್ಥೆಯ ಮೂಲಕ ಸಮಾಜದ ದುರ್ಬಲ ವರ್ಗಗಳ ಉದ್ಯಮಿಗಳಿಗೆ/ಮೊದಲು ಪೀಳಿಗೆ ಉದ್ಯಮಿಗಳಿಗೆ ಸಹಾಯ ಮಾಡಲು ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ಆದೇಶ ಸಹಿತ ಯೋಜನಾವಾರು ಸಂಪೂರ್ಣ ವಿವರ ನೀಡುವುದು)

(ಈ) ಸಂಸ್ಥೆಯ ಯೋಜನೆಗಳು ಹಾಗೂ ಸವಲತ್ತುಗಳ ಬಗ್ಗೆ ಗ್ರಾಮೀಣ ಭಾಗದಲ್ಲಿ ಸರಿಯಾದ ಮಾಹಿತಿ ಇಲ್ಲದೇ ಅತೀ ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ದಿಮೆದಾರರು ಸೌಲಭ್ಯ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಸ್ಥೆಯಿಂದ ದೊರೆಯುವ ಸವಲತ್ತುಗಳ ಬಗ್ಗೆ ಪ್ರಚಾರ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ರಾಜ್ಯದಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಕಛೇರಿಗಳ ವಿಳಾಸ ಹಾಗೂ ಅಧಿಕಾರಿಗಳ ಪದನಾಮ ಸಹಿತ ಸಂಪರ್ಕದ ಸಂಖ್ಯೆಯನ್ನು ಒದಗಿಸುವುದು ?

## ಖಾಲಿ ಹುದ್ದೆಗಳ ಭರ್ತಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೨ (೧೪೭೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಟ್ಟಣ ಪಂಚಾಯತ್‌ಗಳು, ಪುರಸಭೆಗಳು ಹಾಗೂ ನಗರಸಭೆಗಳಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳ ಕೊರತೆಯಿಂದಾಗಿ ಸಾರ್ವಜನಿಕರಿಗೆ ವಿವಿಧ ಸೇವೆಗಳನ್ನು ವಿತರಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ ರಾಜ್ಯದಾದ್ಯಂತ ಎಷ್ಟು ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರಸಭೆಗಳು ಕಾರ್ಯನಿರ್ವಹಿಸುತ್ತಿವೆ ; ಅವುಗಳಿಗೆ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿಯಾಗಿರುವ ಹುದ್ದೆಗಳು ಎಷ್ಟು ; ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ವಿವರವನ್ನು ನೀಡುವುದು ;

(ಇ) ಒಬ್ಬ ಸಿಬ್ಬಂದಿಯೇ ಎರಡು ಅಥವಾ ಮೂರು ಸ್ಥಳಗಳಲ್ಲಿ ಹೆಚ್ಚುವರಿ ಹೊಣೆಗಾರಿಕೆ ವಹಿಸಿಕೊಂಡಿರುವ ಪ್ರಕರಣಗಳು ಎಷ್ಟು ;

(ಈ) ಕಳೆದ ಮೂರು ವರ್ಷಗಳಲ್ಲಿ ಪೌರಾಡಳಿತ ಇಲಾಖೆಯಲ್ಲಿ ಹೊಸ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ನೇಮಕಾತಿ ಪ್ರಕ್ರಿಯೆ ಆರಂಭಿಸಿದ್ದರೆ ಅದರ ಪ್ರಗತಿ ಹಂತದ ವಿವರಗಳನ್ನು ನೀಡುವುದು ; ಖಾಲಿ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ವಿಶೇಷ ನೇಮಕಾತಿ ನಡೆಸುವ ಯೋಚನೆ ಸರ್ಕಾರಕ್ಕಿದೆಯೇ ; ಇಲ್ಲದಿದ್ದರೆ, ಅದರ ಕಾರಣವೇನು ;

(ಉ) ಅನ್ಯ ಇಲಾಖೆಯಲ್ಲಿ ನಿಯೋಜನೆ ಮೇಲೆ ಇರುವ ಇಲಾಖಾ ಅಧಿಕಾರಿ ಮತ್ತು ಸಿಬ್ಬಂದಿಗಳು ಎಷ್ಟು ಮತ್ತು ಇಲಾಖೆಯಲ್ಲಿ ನಿಯೋಜನೆ ಮೇಲಿರುವ ಅನ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಎಷ್ಟು ; ಹುದ್ದೆ ಮತ್ತು ಮಾತೃ ಇಲಾಖೆಯ ಹೆಸರು ಸ್ಥಳೀಯ ಸಂಸ್ಥೆವಾರು ನೀಡುವುದು ?

## ನಮಸ್ತೆ ಯೋಜನೆಯಡಿ ಸರ್ವೇ ಕಾರ್ಯ ನಿರೀಕ್ಷಿತ ಪ್ರಗತಿ ಆಗದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೨೩ (೧೫೦೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ನಮಸ್ತೆ' [NAMASTE-National Action for Mechanised Sanitation Ecosytem) ಯೋಜನೆಯಡಿ ಚಿಂದಿ ಆಯುವವರು ಮತ್ತು ನೈರ್ಮಲ್ಯ ಕಾರ್ಮಿಕರ ಸರ್ವೆಯ ಪ್ರಮುಖ ಅಂಶಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ 'ನಮಸ್ತೆ' ಯೋಜನೆಯಡಿ ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಯಾವ ಯಾವ ಸ್ಥಳೀಯ ಸಂಸ್ಥೆಗಳಲ್ಲಿ ಸರ್ವೆ ಕಾರ್ಯ ಕೈಗೊಳ್ಳಲಾಗಿದೆ ಹಾಗೂ ಬಾಕಿ ಇದೆ; ಪ್ರೋಫೈಲಿಂಗ್ ಮಾಡಲಾಗಿದೆ ; (ಸ್ಥಳೀಯ ಸಂಸ್ಥೆವಾರು ಸಂಪೂರ್ಣ ವಿವರ ನೀಡುವುದು)

(ಇ) ಈಗಾಗಲೇ ಸರ್ವೆ ಪೂರ್ಣಗೊಳಿಸಿರುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಯಾವ ಯಾವ ಸಮುದಾಯಗಳಿಗೆ [SC/ST/ OBC/General ಮತ್ತು ಇತರೆ] ಸೇರಿದ ಜನರಿರುವುದು ಕಂಡುಬಂದಿದೆ ; (ಸಮುದಾಯವಾರು ಸಂಖ್ಯೆ ಮತ್ತು ಶೇಕಡವಾರು ಮಾಹಿತಿ ನೀಡುವುದು)

(ಈ) ಇವರಲ್ಲಿ ಪುರುಷರು ಮತ್ತು ಮಹಿಳೆಯರ ಸಂಖ್ಯೆ ಎಷ್ಟು ; ತೃತೀಯ ಲಿಂಗಿಗಳು ಇದ್ದಲ್ಲಿ ಅವರ ಸಂಖ್ಯೆ ಕುರಿತು ಮಾಹಿತಿ ನೀಡುವುದು ; (ಸಮುದಾಯವಾರು ಸಂಖ್ಯೆ ಮತ್ತು ಶೇಕಡವಾರು ಮಾಹಿತಿ ನೀಡುವುದು)

(ಉ) ಈ ಯೋಜನೆಯಡಿ ಇದುವರೆಗೆ ಎಷ್ಟು ಸಂಖ್ಯೆಯ ಒಳಚರಂಡಿ ಮತ್ತು ಸೆಪ್ಟಿಕ್ ಟ್ಯಾಂಕ್ ಕಾರ್ಮಿಕರನ್ನು [SC/ST/OBC/ General ಮತ್ತು ಇತರೆ] ಎಣಿಸಲಾಗಿದೆ ; (ವಿವರ ನೀಡುವುದು)

(ಊ) ಸರ್ವೆ ಬಾಕಿಯಿರುವ ಸ್ಥಳೀಯ ಸಂಸ್ಥೆಗಳಲ್ಲಿ ಸರ್ವೆ ಪೂರ್ಣಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು ; ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ತೋಟಗಾರಿಕೆ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಜಮೆ ಆಗದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೨೪ (೧೫೦೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ ಹವಾಮಾನ ಆಧಾರಿತ ಬೆಳೆ ವಿಮೆ ಪರಿಹಾರ ಮೊತ್ತವು ಕೆಲವು ಜಿಲ್ಲೆಗಳಲ್ಲಿ ಪಾವತಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೆಲವು ರೈತರಿಗೆ ಪ್ರೀಮಿಯಂ ಮೊತ್ತವು ಸಹ ಬಂದಿರುವುದಿಲ್ಲ ಎನ್ನುವ ಆರೋಪಗಳು ರೈತ ಸಮೂಹದಿಂದ ಕೇಳಿಬಂದಿವೆ ; ಇದಕ್ಕೆ ಸರ್ಕಾರದ ಕ್ರಮವೇನು ;

(ಇ) ಅಡಿಕೆ, ಮಾವು, ದಾಳಿಂಬೆ ಸೇರಿದಂತೆ ಹಲವು ತೋಟಗಾರಿಕಾ ಬೆಳೆಗಳಿಂದ ನಷ್ಟ ಅನುಭವಿಸಿರುವ ರೈತರಿಗೆ ವಿಮಾ ಪರಿಹಾರ ಮೊತ್ತವನ್ನು ನೀಡಲು ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎನ್ನುವ ದೂರುಗಳಿವೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ತೋಟಗಾರಿಕೆ ಬೆಳೆಗಳಿಗೆ ವಿಮೆ ಸಂಬಂಧ ಜಿಲ್ಲಾವಾರು ಇತ್ಯರ್ಥಪಡಿಸಿರುವ ಹಾಗೂ ಬಾಕಿಯಿರುವ ವಿಮಾ ಪರಿಹಾರದ ಮೊತ್ತ ಎಷ್ಟು ; ಜಿಲ್ಲಾವಾರು ಸ್ವೀಕೃತವಾದ ಪ್ರಸ್ತಾವನೆಗಳು, ಲೆಕ್ಕ ಹಾಕಿರುವ ವಿಮಾ ಪರಿಹಾರ (ರೈತರ ಪ್ರಸ್ತಾವನೆಗಳ ಸಂಖ್ಯೆ, ವಿಮಾ ಮೊತ್ತ) ಇತ್ಯರ್ಥಪಡಿಸಿರುವ ಬೆಳೆ ವಿಮಾ ಪರಿಹಾರ (ರೈತರ ಪ್ರಸ್ತಾವನೆಗಳ ಸಂಖ್ಯೆ ವಿಮಾ ಮೊತ್ತ) ಹಾಗೂ ಬಾಕಿಯಿರುವ ಬೆಳೆ ವಿಮಾ ಪರಿಹಾರ (ರೈತರ ಪ್ರಸ್ತಾವನೆಗಳ ಸಂಖ್ಯೆ, ವಿಮಾ ಮೊತ್ತ) ಸಂಪೂರ್ಣ ಮಾಹಿತಿ ನೀಡುವುದು ;

(ಉ) ಯಾವುದಾದರೂ ಕಾರಣದಿಂದ ಬೆಳೆ ವಿಮೆ ಪರಿಹಾರವನ್ನು ಇತ್ಯರ್ಥಪಡಿಸದೆ ತಡೆಹಿಡಿಯಲಾಗಿದೆಯೇ ? (ವಿವರ ನೀಡುವುದು)

## "ಅಮೃತ್ ಮಿತ್ರ" (AMRUT MITRA) ಯೋಜನೆಯಡಿ ಉದ್ಯಾನಗಳ ಅಭಿವೃದ್ಧಿ/ನಿರ್ವಹಣೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೨೫ (೧೫೦೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ "ಅಮೃತ್ ಮಿತ್ರ" (AMRUT MITRA) ಯೋಜನೆಯಡಿ ಆಯ್ಕೆ ಮಾಡಿಕೊಂಡಿರುವ ಉದ್ಯಾನಗಳ ಸಂಖ್ಯೆ ಎಷ್ಟು ; ಈ ಉದ್ಯಾನಗಳ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ನೇಮಕ ಮಾಡಲಾದ ಸ್ವ–ಸಹಾಯ ಗುಂಪುಗಳ ಸಂಖ್ಯೆ ಎಷ್ಟು ; (ಸ್ಥಳೀಯ ಸಂಸ್ಥೆ ಹೆಸರು, ಉದ್ಯಾನ ಹೆಸರು, ವಾರ್ಡ್ ಸಂಖ್ಯೆ, ಸ್ವ–ಸಹಾಯ ಗುಂಪಿನ ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) "ಅಮೃತ್ ಮಿತ್ರ" (AMRUT MITRA) ಯೋಜನೆಯನ್ನು ಜಾರಿ ಮಾಡದ ನಗರ ಸ್ಥಳೀಯ ಸಂಸ್ಥೆಗಳು ಯಾವುವು ; (ವಿವರ ನೀಡುವುದು)

(ಇ) ಸ್ವ–ಸಹಾಯ ಗುಂಪುಗಳು ಉದ್ಯಾನಗಳಷ್ಟೆ ನಿರ್ವಹಣೆ ಮಾಡಲಿವೆಯೇ ಅಥವಾ ಬೇರೆ ಕೆಲಸಗಳನ್ನು ನಿರ್ವಹಿಸಲಿವೆಯೇ ; (ವಿವರ ನೀಡುವುದು)

(ಈ) ಸ್ವ–ಸಹಾಯ ಗುಂಪುಗಳಿಗೆ ಯಾವ ಆಧಾರದ ಮೇಲೆ ಉದ್ಯಾನಗಳ ನಿರ್ವಹಣಾ ಶುಲ್ಕವನ್ನು ಪಾವತಿಸಲಾಗುತ್ತಿದೆ ;

(ಉ) ಸರ್ಕಾರದಿಂದ ನಿರ್ವಹಣೆಗೆ ಬಿಡುಗಡೆ ಮಾಡಲಾಗಿರುವ ಒಟ್ಟು ಮೊತ್ತ ಎಷ್ಟು ; ಇದರಲ್ಲಿ ವೆಚ್ಚವಾಗಿರುವ ಹಾಗೂ ವೆಚ್ಚವಾಗದೇ ಬಾಕಿ ಇರುವ ಅನುದಾನದ ಮೊತ್ತ ಎಷ್ಟು ; (ಜಿಲ್ಲಾವಾರು, ಸ್ಥಳೀಯ ಸಂಸ್ಥೆಗಳವಾರು ಮಾಹಿತಿ ನೀಡುವುದು)

(ಊ) ಉದ್ಯಾನಗಳ ನಿರ್ವಹಣೆ ಮಾಡುತ್ತಿರುವ ಸ್ವ–ಸಹಾಯ ಗುಂಪುಗಳಿಗೆ ಕೆಲವು ನಗರ ಸ್ಥಳೀಯ ಸಂಸ್ಥೆಗಳು ನಿರ್ವಹಣೆ ಶುಲ್ಕ ಪಾವತಿಸದೇ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾಕಿ ಮೊತ್ತ ಪಾವತಿಸಲು ಕ್ರಮಗಳೇನು ?

## ಕುಡಿಯುವ ನೀರಿನ ಗುಣಮಟ್ಟ ಪರೀಕ್ಷಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೨೬ (೧೫೦೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಕುಡಿಯುವ ನೀರು ಪೂರೈಸುವ ಪೂರ್ವದಲ್ಲಿ ನೀರಿನ ಗುಣಮಟ್ಟ ಪರೀಕ್ಷಿಸಿ ಸರಬರಾಜು ಮಾಡಬೇಕಿರುವುದು ನಿಜವೇ ; ಹಾಗಿದ್ದಲ್ಲಿ, ಎಷ್ಟು ದಿನಗಳಿಗೊಮ್ಮೆ ನೀರಿನ ಗುಣಮಟ್ಟ ಪರೀಕ್ಷಿಸಬೇಕು ; ಈಗ ಎಷ್ಟು ದಿನಕ್ಕೆ ಪರೀಕ್ಷಿಸಲಾಗುತ್ತಿದೆ ; (ವಿವರವಾಗಿ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ, ಕೆ.ಆರ್.ಪೇಟೆ ಮತ್ತು ಇತರೆ ಸ್ಥಳೀಯ ಸಂಸ್ಥೆಗಳು ನಿಯಮಿತವಾಗಿ ಕುಡಿಯವ ನೀರಿನ ಗುಣಮಟ್ಟ ಪರೀಕ್ಷಿಸದೇ ನೀರು ಪೂರೈಕೆ ಮಾಡಲಾಗುತ್ತಿದೆ ಎನ್ನುವ ಸಾರ್ವಜನಿಕ ದೂರುಗಳ ಕುರಿತು ಸರ್ಕಾರದ ಕ್ರಮವೇನು ;

(ಇ) ಹಾಗೇ, ಮದ್ದೂರು, ಮಳವಳ್ಳಿ, ನಾಗಮಂಗಲ ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳಲ್ಲಿ ಪರೀಕ್ಷಿಸಲಾದ ನೀರಿನ ಮಾದರಿಗಳಲ್ಲಿ E.Coli (Escherichia Coli) ಹಾಗೂ ಇತರೆ ಅಶುದ್ಧ ಅಂಶಗಳು ಇರುವುದು ಕಂಡು ಬಂದಿರುವುದು ನಿಜವೇ ; ಹಾಗಿದ್ದಲ್ಲಿ, ಗುಣಮಟ್ಟದ ನೀರು ಪೂರೈಕೆಗೆ ಸರ್ಕಾರದ ಕ್ರಮವೇನು ;

(ಈ) "ಜಲ–ಹೀ–ಅಮೃತ್" ಯೋಜನೆ ಪ್ರಮುಖ ಅಂಶಗಳೇನು ;

(ಉ) ಈ ಯೋಜನೆಗೆ ಮಂಡ್ಯ ಜಿಲ್ಲೆಯಲ್ಲಿ ಯಾವ್ಯಾವ ಸ್ಥಳೀಯ ಸಂಸ್ಥೆಗಳು ಆಯ್ಕೆಯಾಗಿವೆ ; ಇದಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಈ ಯೋಜನೆಯಡಿ ಏನೆಲ್ಲಾ ಚಟುವಟಿಕೆಗಳನ್ನು ತೆಗೆದುಕೊಳ್ಳಲು ಅವಕಾಶವಿದೆ ? (ವಿವರವಾದ ಮಾಹಿತಿ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳ ಸ್ವಾಮ್ಯದಲ್ಲಿರುವ ವಾಣಿಜ್ಯ ಮಳಿಗೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೨೭ (೧೫೦೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳು ಸ್ವಾಮ್ಯದಲ್ಲಿದ್ದು, ಬಾಡಿಗೆಗೆ ನೀಡಲಾಗಿರುವ ವಾಣಿಜ್ಯ ಮಳಿಗೆಗಳು ಹಾಗೂ ಇನ್ನಿತರೆ ವಾಣಿಜ್ಯ ಉದ್ದೇಶದ ಖಾಲಿ ನಿವೇಶಗಳ ಸಂಖ್ಯೆ ಎಷ್ಟು ;

(ಆ) ಸ್ಥಳೀಯ ಸಂಸ್ಥೆಗಳಿಗೆ ಸೇರಿದ ಮಳಿಗೆಗಳಿಂದ ಬಾಡಿಗೆ ಮೊತ್ತವನ್ನು ಸಕಾಲದಲ್ಲಿ ವಸೂಲಾತಿ ಮಾಡದಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಜಿಲ್ಲೆಗಳಲ್ಲಿ ಸ್ಥಳೀಯ ಸಂಸ್ಥೆಗಳ ಸ್ವಾಮ್ಯದಲ್ಲಿರುವ ಅಂಗಡಿ ಮಳಿಗೆಗಳು, ವಾಣಿಜ್ಯ ಮಳಿಗೆಗಳು ಮತ್ತು ಇನ್ನಿತರೆ ವಾಣಿಜ್ಯ ಉದ್ದೇಶದ ಖಾಲಿ ನಿವೇಶನಗಳಿಂದ ಬರುವ ವಾರ್ಷಿಕ ಆದಾಯ ವಸೂಲಾತಿಸಲು ಬಾಕಿ ಇರುವ ಮೊತ್ತ ಎಷ್ಟು ; (ಸ್ಥಳೀಯ ಸಂಸ್ಥೆಗಳವಾರು ಸಂಪೂರ್ಣ ವಿವರ ನೀಡುವುದು)

(ಈ) ಬಾಕಿ ಮೊತ್ತ ವಸೂಲಾತಿಗೆ ತೆಗೆದುಕೊಂಡಿರುವ ಕಠಿಣ ಕ್ರಮಗಳೇನು ;

(ಉ) ಬಾಡಿಗೆಗೆ ನೀಡಲಾಗುವ ಅಂಗಡಿ/ವಾಣಿಜ್ಯ ಮಳಿಗೆಗಳ ಕರಾರು ಅಥವಾ ಹರಾಜು ಪ್ರಕ್ರಿಯೆಯನ್ನು ಎಷ್ಟು ವರ್ಷಕ್ಕೊಮ್ಮೆ ನಿಯಮಾನುಸಾರ ಮಾಡಿಕೊಳ್ಳಬೇಕು ಅಥವಾ ನವೀಕರಿಸಬೇಕು ? (ವಿವರ ನೀಡುವುದು)

## ರಾಜ್ಯದಲ್ಲಿ ಮರಳು ಮಾಫಿಯಾ ಹಾವಳಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೮ (೧೫೦೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೃಷ್ಣಾ, ಕಾವೇರಿ ಮತ್ತು ತುಂಗಭದ್ರಾ ನದಿ ಪಾತ್ರಗಳಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆಯಿಂದ ಅಂತರ್ಜಲ ಕುಸಿತ ಹಾಗೂ ಸೇತುವೆಗಳು ದುರ್ಬಲಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಅಕ್ರಮ ಮರಳು ಸಾಗಾಣಿಕೆ ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಮರಳು ಮಾಫಿಯಾದ ವಿರುದ್ಧ ಧ್ವನಿ ಎತ್ತಿದ ರಾಯಚೂರು ಜಿಲ್ಲೆಯ ಶಾಸಕಿಯೊಬ್ಬರಿಗೆ ಜೀವ ಬೆದರಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜನಪ್ರತಿನಿಧಿಗಳಿಗೇ ರಕ್ಷಣೆ ಇಲ್ಲದಂತಾಗಿರುವ ಈ ಪರಿಸ್ಥಿತಿಯಲ್ಲಿ ಸಾರ್ವಜನಿಕರ ಮತ್ತು ಮಾಹಿತಿದಾರರ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) "ಮರಳು ಮಾಫಿಯಾವನ್ನು ನಿಯಂತ್ರಿಸುವುದು ಅಸಾಧ್ಯ" ಎಂಬ ಬಗ್ಗೆ ವರದಿಯಾಗಿದ್ದು, ಇದು ಮರಳು ದಂಧೆಕೋರರಿಗೆ ಸರ್ಕಾರವೇ ಶರಣಾದಂತಾಗುವುದಿಲ್ಲವೇ ; ಇದರಿಂದಾಗಿ ಅಧಿಕಾರಿಗಳು ದಂಧೆಯನ್ನು ಹೇಗೆ ತಡೆಯಲು ಸಾಧ್ಯ ;

(ಉ) ಅಕ್ರಮ ಮರಳು ಗಣಿಗಾರಿಕೆಯಿಂದ ರಾಜ್ಯದ ಬೊಕ್ಕಸಕ್ಕೆ ಉಂಟಾಗಿರುವ ಅಂದಾಜು ನಷ್ಟ ಎಷ್ಟು ; ಈ ದಂಧೆಯಿಂದ ಸೃಷ್ಟಿಯಾಗಿರುವ ಸಮಾನಾಂತರ ಆರ್ಥಿಕತೆ (Parallel Economy) ಮತ್ತು ಕಪ್ಪು ಹಣದ ಚಲಾವಣೆಯನ್ನು ತಡೆಯಲು ಸರ್ಕಾರವು ಜಾರಿ ನಿರ್ದೇಶನಾಲಯ (ಇ.ಡಿ) ಅಥವಾ ವಿಶೇಷ ತನಿಖಾ ದಳದ ನೆರವು ಪಡೆದಿದೆಯೇ ;

(ಊ) ಹೈಕೋರ್ಟ್ ವ್ಯಕ್ತಪಡಿಸಿರುವ ಆತಂಕದ ಹಿನ್ನಲೆಯಲ್ಲಿ, ಮರಳು ಮಾಫಿಯಾವನ್ನು ಮಟ್ಟಹಾಕಲು ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡ (SIT) ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ರಚಿಸಲಾಗುವುದು ?

# ರೈಲ್ವೆ ಯೋಜನೆಗಳಿಗಾಗಿ ಭೂ ಸ್ವಾಧೀನ ಪ್ರಕ್ರಿಯೆಯಲ್ಲಿನ ವಿಳಂಬ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೯ (೧೫೬೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ರೈಲ್ವೆ ಯೋಜನೆಗಳಿಗಾಗಿ ಮಂಜೂರಾದ ೯.೦೬೪ ಹೆಕ್ಟೇರ್ ಭೂಮಿಯಲ್ಲಿ ಇನ್ನೂ ೩.೩೫೭ ಹೆಕ್ಟೇರ್ ಭೂಮಿ ಸ್ವಾಧೀನವಾಗದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಿವಮೊಗ್ಗ–ರಾಣೆಬೆನ್ನೂರು, ಬೆಳಗಾವಿ–ಧಾರವಾಡ ಮತ್ತು ಶಿವಮೊಗ್ಗ–ಹರಿಹರ ನೂತನ ರೈಲು ಮಾರ್ಗಗಳ ಭೂ ಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ ಕೇಂದ್ರ ಸರ್ಕಾರ ನೀಡಿದ ಅನುದಾನ ಬಳಕೆಯಾಗದೆ ಯೋಜನೆಗಳು ವಿಳಂಬವಾಗುತ್ತಿರುವುದು ನಿಜವೇ ;

(ಈ) ಈ ಯೋಜನೆಗಳಿಗಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಸಕಾಲಕ್ಕೆ ಬಿಡುಗಡೆ ಮಾಡಲಾಗುತ್ತಿದೆಯೇ ; ಭೂ ಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ ?

# ರಾಜ್ಯದ ಸಾಂಪ್ರದಾಯಿಕ ಕಲೆಗಳು, ಕೈಮಗ್ಗ ಮತ್ತು MSME ವಲಯದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೦ (೧೫೬೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ಪ್ರಸಿದ್ಧ ಸಾಂಪ್ರದಾಯಿಕ ಕಲೆಗಳಾದ ಗಂಧದ ಕೆತ್ತನೆ, ಮೈಸೂರು ಪೇಂಟಿಂಗ್ ಮತ್ತು ಕೃಷಿ ಸಂಸ್ಕರಣಾ ಉದ್ದಿಮೆಗಳನ್ನು (Agro-processing) ಉತ್ತೇಜಿಸಲು ಸರ್ಕಾರವು ಕೈಗೊಂಡಿರುವ ವಿಶೇಷ ಕ್ರಮಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿರುವ 'ಕೈಮಗ್ಗ ಕ್ಲಸ್ಟರ್‌ಗಳಿಗೆ' (Handloom Clusters) ಮಂಜೂರಾದ ಅನುದಾನವೆಷ್ಟು ಮತ್ತು ಈ ಪೈಕಿ ಎಷ್ಟು ಹಣವನ್ನು ಬಿಡುಗಡೆ ಮಾಡಿ ಸದುಪಯೋಗಪಡಿಸಿಕೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಮೈಸೂರಿನ ರೇಷ್ಮೆ ಮತ್ತು ಕರಕುಶಲ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ಬ್ರ್ಯಾಂಡಿಂಗ್ ಮಾಡಲು ಹಾಗೂ ಮಾರುಕಟ್ಟೆ ಒದಗಿಸಲು ಸರ್ಕಾರವು ಜಿಲ್ಲೆಯಲ್ಲಿ ಹೊಸದಾಗಿ ವಿನ್ಯಾಸ ಕೇಂದ್ರಗಳನ್ನು (Design Centers) ಸ್ಥಾಪಿಸುವ ಪ್ರಸ್ತಾವನೆ ಹೊಂದಿದೆಯೇ ;

(ಈ) ಕೇಂದ್ರ ಸರ್ಕಾರದ 'ಕ್ಲಸ್ಟರ್ ಅಭಿವೃದ್ಧಿ ಯೋಜನೆ' ಯಡಿ (MSE-CDP) ಮೈಸೂರು ಜಿಲ್ಲೆಯ ಎಷ್ಟು MSME ಘಟಕಗಳಿಗೆ ಆರ್ಥಿಕ ನೆರವು ನೀಡಲಾಗಿದೆ ಮತ್ತು ಇದರಲ್ಲಿ ರಾಜ್ಯ ಸರ್ಕಾರದ ಪಾಲಿನ ಮೊತ್ತವೆಷ್ಟು ?

# ರಾಜ್ಯದ ಕೈಗಾರಿಕಾ ನಿವೇಶನಗಳಲ್ಲಿ ಭೂಮಿ ಬಳಕೆಯ ಮಾರ್ಗಸೂಚಿಗಳ ತಿದ್ದುಪಡಿ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೧ (೧೫೬೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕಾ ನಿವೇಶನಗಳಲ್ಲಿ ಭೂಮಿ ಬಳಕೆಯ ಮಿತಿಯನ್ನು ಶೇ.೬೫ ರಿಂದ ಶೇ.೭೫ ಕ್ಕೆ ಹೆಚ್ಚಿಸಲು ಸರ್ಕಾರ ತೆಗೆದುಕೊಂಡಿರುವ ನಿರ್ಧಾರಕ್ಕೆ ಕಾರಣಗಳೇನು ;

(ಆ) ಈ ಹೊಸ ನಿಯಮವು ಈಗಾಗಲೇ ಹಂಚಿಕೆಯಾಗಿರುವ ನಿವೇಶನಗಳಿಗೂ ಅನ್ವಯಿಸುತ್ತದೆಯೇ ಅಥವಾ ಕೇವಲ ಹೊಸ ನಿವೇಶನಗಳಿಗೆ ಮಾತ್ರ ಸೀಮಿತವೇ ;

(ಇ) ಭೂಮಿ ಬಳಕೆಯ ಮಿತಿ ಹೆಚ್ಚಳದಿಂದ ಭೂಮಿ ಕಳೆದುಕೊಂಡ ರೈತರಿಗೆ ಸಿಗುವ ಪರಿಹಾರ ಅಥವಾ ಅಭಿವೃದ್ಧಿಪಡಿಸಿದ ಭೂಮಿಯ ಪಾಲಿನಲ್ಲಿ ಎಷ್ಟು ಪ್ರಮಾಣದ ಏರಿಕೆಯಾಗಲಿದೆ ;

(ಈ) ಕೈಗಾರಿಕಾ ಪ್ರದೇಶಗಳಲ್ಲಿ ಹಸಿರು ವಲಯ (Green Belt) ಮತ್ತು ಪರಿಸರ ಸಮತೋಲನ ಕಾಪಾಡಲು ಶೇ.೨೫ ರಷ್ಟು ಜಾಗ ಮೀಸಲಿಡುವುದು ಸಾಕಾಗುತ್ತದೆಯೇ ; ಈ ಬಗ್ಗೆ ಪರಿಸರ ಇಲಾಖೆಯಿಂದ ತಾಂತ್ರಿಕ ವರದಿ ಪಡೆಯಲಾಗಿದೆಯೇ ;

(ಉ) ಈ ತಿದ್ದುಪಡಿಯಿಂದ ರಾಜ್ಯಕ್ಕೆ ನಿರೀಕ್ಷಿತ ಹೆಚ್ಚುವರಿ ಬಂಡವಾಳ ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಯ ಪ್ರಮಾಣ ಎಷ್ಟು ?

# ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಅನಧಿಕೃತ ಲೇಔಟ್‌ಗಳ ನಿರ್ಮಾಣ ಮತ್ತು ಮಾಸ್ಟರ್ ಪ್ಲಾನ್ ಪರಿಷ್ಕರಣೆಯ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೨ (೧೫೬೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (MUDA) ಮತ್ತು ಜಿಲ್ಲೆಯ ಇತರೆ ಸ್ಥಳೀಯ ಸಂಸ್ಥೆಗಳ ಅನುಮತಿ ಇಲ್ಲದೆ ಮೈಸೂರು ಜಿಲ್ಲೆಯಲ್ಲಿ ನಿರ್ಮಾಣಗೊಂಡಿರುವ ಅನಧಿಕೃತ ಲೇಔಟ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮತ್ತು ಗ್ರಾಮ ಪಂಚಾಯತಿವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ಇಂತಹ ಅನಧಿಕೃತ ಲೇಔಟ್‌ಗಳಲ್ಲಿ ನಿರ್ಮಾಣವಾಗಿರುವ ಕಟ್ಟಡಗಳ ವಿರುದ್ಧ ಮತ್ತು ಅಕ್ರಮವಾಗಿ ಭೂಪರಿವರ್ತನೆ ಮಾಡದ ಲೇಔಟ್‌ಗಳ ಮಾಲೀಕರ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕಾನೂನಾತ್ಮಕ ಕ್ರಮಗಳು ಯಾವುವು ; (ವಿವರ ನೀಡುವುದು)

(ಇ) ಮೈಸೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪಾರದರ್ಶಕತೆ ತರಲು 'ಆನ್‌ಲೈನ್‌ನಲ್ಲಿ ಕಟ್ಟಡ ಅನುಮತಿ ವ್ಯವಸ್ಥೆ' (Online Building Plan Approval System) ಸಂಪೂರ್ಣವಾಗಿ ಜಾರಿಗೆ ಬಂದಿದೆಯೇ ; ಬಂದಿದ್ದಲ್ಲಿ, ಈ ವ್ಯವಸ್ಥೆಯನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ತರಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) 'ಮಹಾಯೋಜನೆ' (Master Plan) ಪರಿಷ್ಕರಣೆ ಕಾರ್ಯವು ಪ್ರಸ್ತುತ ಯಾವ ಹಂತದಲ್ಲಿದೆ ; ಸಾರ್ವಜನಿಕರ ಆಕ್ಷೇಪಣೆಗಳನ್ನು ಪರಿಗಣಿಸಿ ಇದನ್ನು ಯಾವಾಗ ಅಂತಿಮಗೊಳಿಸಲಾಗುವುದು ;

(ಉ) ಮೈಸೂರು ಜಿಲ್ಲೆಯ ಪಾರಂಪರಿಕ ಸೊಗಡನ್ನು ಉಳಿಸಲು ಮತ್ತು ಅನಧಿಕೃತ ನಿರ್ಮಾಣಗಳನ್ನು ತಡೆಗಟ್ಟಲು ವಿಶೇಷ ಜಾಗೃತ ದಳ ಅಥವಾ ವಿಶೇಷ ದಳವನ್ನು ರಚಿಸಲಾಗಿದೆಯೇ ;

(ಊ) ಈ ದಳವು ಕಳೆದ ಎರಡು ವರ್ಷಗಳಲ್ಲಿ ಪತ್ತೆಹಚ್ಚಿದ ಪ್ರಕರಣಗಳೆಷ್ಟು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಗಣಿ ಗುತ್ತಿಗೆ ಹಾಗೂ ನವೀಕರಣ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೩ (೧೫೪೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗಣಿ ಗುತ್ತಿಗೆ ನೀಡುವ ನಿಯಮಗಳೇನು ; ಈವರೆಗೆ ಎಷ್ಟು ಗಣಿ ಗುತ್ತಿಗೆಯನ್ನು ಹೊಸದಾಗಿ ನೀಡಲಾಗಿದೆ ಮತ್ತು ನವೀಕರಿಸಲಾಗಿದೆ ; ಇವುಗಳ ವಿತರಣೆ/ನವೀಕರಣದ ಮಾನದಂಡಗಳೇನು ;

(ಆ) ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ರಾಜಧನ, ದಂಡ ಹಾಗೂ ಬಡ್ಡಿ ಸೇರಿ ಹಲವಾರು ಕೋಟಿ ಸರ್ಕಾರಕ್ಕೆ ಬಾಕಿ ಉಳಿಸಿಕೊಂಡಿರುವ ಕಂಪನಿಗೆ ಗಣಿ ಗುತ್ತಿಗೆ ನವೀಕರಣ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಪಾವತಿಗೆ ಬಾಕಿಯಿರುವ ಅಕ್ರಮ ಗಣಿಗಾರಿಕೆ ದಂಡ, ರಾಯಧನ ಹಾಗೂ

ಬಡ್ಡಿ ಸೇರಿದಂತೆ ಒಟ್ಟು ಬಾಕಿ ಮೊತ್ತದ ವಿವರವೇನು ; ಇದುವರೆಗೆ ಸಂಗ್ರಹಿಸಿದ ಮೊತ್ತವೆಷ್ಟು ; ಬಾಕಿಯಿರುವ ಮೊತ್ತದ ವಸೂಲಿಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಗಣಿ ಗುತ್ತಿಗೆ ನವೀಕರಣಕ್ಕೆ ಸಂಬಂಧಿಸಿ ಕಾನೂನು ಇಲಾಖೆಯು ಸೂಚಿಸಿದ ಮಾನದಂಡಗಳೇನು ; ಕಾನೂನು ಇಲಾಖೆಯ ಅಭಿಪ್ರಾಯವನ್ನು ಕಡೆಗಣಿಸಿ ಗಣಿ ಗುತ್ತಿಗೆ ನವೀಕರಣಕ್ಕೆ ಮುಂದಾಗಿರುವುದಕ್ಕೆ ಕಾರಣವೇನು ; ಅಕ್ರಮ ಗಣಿಗಾರಿಕೆ ಹಾಗೂ ಸಕ್ರಮ ಗಣಿಗಾರಿಕೆಯಿಂದಾದ ತಗ್ಗು/ಪ್ರಪಾತಗಳನ್ನು ಮುಚ್ಚಲು ಹಾಗೂ ಪರಿಸರವನ್ನು ರಕ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೆಂಪು ಕಲ್ಲು ಸಹಿತ ಎಲ್ಲಾ ರೀತಿಯ ಎಷ್ಟು ಗಣಿ ಗುತ್ತಿಗೆ ಪರವಾನಿಗೆಗಳು ಚಾಲ್ತಿಯಲ್ಲಿ ಇವೆ; ಕಳೆದ ಮೂರು ವರ್ಷಗಳಲ್ಲಿ ವಸೂಲಾದ ದಂಡ, ರಾಜಧನ ಹಾಗೂ ಇನ್ನಿತರ ವಸೂಲಾತಿಗಳು ಎಷ್ಟು ; ಅದನ್ನು ಯಾವ ಉದ್ದೇಶಗಳಿಗೆ ಯಾವ ನಿಯಮಗಳಂತೆ ಬಳಸಲಾಗಿದೆ ;

(ಉ) ಬಾಕಿ ಮೊತ್ತ ಪೂರ್ಣ ವಸೂಲಿಯಾಗುವವರೆಗೆ ಯಾವುದೇ ಕಂಪನಿಯನ್ನು ಸರ್ಕಾರಿ ಗುತ್ತಿಗೆಗಳು ಹಾಗೂ ಟೆಂಡರ್‌ಗಳಿಂದ ನಿರ್ಬಂಧಿಸುವ ಬಗ್ಗೆ ಸರ್ಕಾರ ಪರಿಗಣಿಸಿರುವುದೇ ; ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಗಣಿ ಗುತ್ತಿಗೆ/ನವೀಕರಣ ನೀತಿಯನ್ನು ಪರಿಣಾಮಕಾರಿಯಾಗಿ ರೂಪಿಸುವ ಬಗ್ಗೆ ಸರ್ಕಾರದ ನಿರ್ಧಾರಗಳೇನು ?

# ರಾಜ್ಯದ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ವಿಲೇವಾರಿ ಘಟಕಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೪ (೧೫೪೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರತಿದಿನ ಸುಮಾರು ೩,೯೮೮ ಟನ್ ಹಸಿ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು ಈ ಹಸಿ ಮತ್ತು ದ್ರವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಲು ರಾಜ್ಯದ ಒಟ್ಟು ೩೨೦ ಪೌರಾಡಳಿತ ಸಂಸ್ಥೆಗಳ ಪೈಕಿ ಎಷ್ಟು ಸಂಸ್ಥೆಗಳಿಗೆ ಸ್ವಂತ ಎಸ್ ಟಿ ಪಿ ಸಹಿತ ತ್ಯಾಜ್ಯ ಸಂಸ್ಕರಣ ಘಟಕಗಳಿವೆ ;

(ಆ) ತ್ಯಾಜ್ಯ ಸಂಸ್ಕರಣ ಘಟಕವಿಲ್ಲದ ಪೌರಾಡಳಿತ ಸಂಸ್ಥೆಗಳು ಕಸವನ್ನು ಇತರ ನಗರ/ಪಟ್ಟಣಗಳ ಘಟಕಗಳಿಗೆ ರವಾನಿಸಿ ವಿಲೇವಾರಿ ಮಾಡುತ್ತಿರುವುದು ಅಥವಾ ಕಸವನ್ನು ಬಯಲಲ್ಲಿ ಸುರಿದು ಸುಡುತ್ತಿರುವುದು ನಿಜವೇ ; ಇದರಿಂದ ಉಂಟಾಗುತ್ತಿರುವ ಆಡಳಿತಾತ್ಮಕ ಹಾಗೂ ಪರಿಸರ ಸಂಬಂಧಿತ ಸಮಸ್ಯೆಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತ ಸಂಸ್ಥೆಗಳ ಪೈಕಿ ಎಷ್ಟು ಸಂಸ್ಥೆಗಳಿಗೆ ಹಸಿ, ಒಣ ಮತ್ತು ದ್ರವ ತ್ಯಾಜ್ಯ ವಿಲೇವಾರಿ ಘಟಕಗಳಿವೆ ; ಘಟಕಗಳಿಲ್ಲದ ಸಂಸ್ಥೆಗಳಿಗೆ ಯಾವ ಕಾಲಮಿತಿಯೊಳಗೆ ಜಾಗ ಗುರುತಿಸಿ ತ್ಯಾಜ್ಯ ವಿಲೆವಾರಿ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು ;

(ಈ) ಪುತ್ತೂರು ನಗರ ಸಭೆಗೆ ತ್ಯಾಜ್ಯ ನೀರು ಸಂಸ್ಕರಣ ಘಟಕ (STP) ಸ್ಥಾಪಿಸುವ ಉದ್ದೇಶಕ್ಕಾಗಿ ಕಂದಾಯ ಇಲಾಖೆಯು ಜಮೀನು ಮಂಜೂರು ಮಾಡಿದೆಯೇ ; ಸದರಿ ಜಮೀನು ಮಂಜೂರಾದ ದಿನಾಂಕ, ಸರ್ವೆ ನಂಬರ್, ವಿಸ್ತೀರ್ಣ ಹಾಗೂ ಪ್ರಸ್ತುತ ಸ್ಥಿತಿಗತಿಯ ವಿವರ ನೀಡುವುದು ;

(ಉ) ಪ್ರಸ್ತುತ ಸದರಿ ಜಮೀನಿನಲ್ಲಿ ಅನಧಿಕೃತ ಒತ್ತುವರಿ ನಡೆದಿದ್ದು ಒತ್ತುವರಿ ಮಾಡಿದವರ ವಿವರ ಮತ್ತು ಒತ್ತುವರಿಯ ಸ್ವರೂಪ ಏನು ; ಸದರಿ ಒತ್ತುವರಿಯನ್ನು ತೆರವು ಮಾಡಲು ನಗರಸಭೆ ಅಥವಾ ಜಿಲ್ಲಾಡಳಿತದಿಂದ ಕೈಗೊಂಡಿರುವ ಕ್ರಮಗಳ ವಿವರವೇನು ?

## ಕರ್ನಾಟಕ ರಾಜ್ಯದಲ್ಲಿ ಜವಳಿ ಉದ್ಯಮಗಳ ಪುನಃಶ್ಚೇತನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೫ (೧೫೪೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಮಗ್ಗ, ರೇಷ್ಮೆ, ಕಾಟನ್ ಹಾಗೂ ಜೀನ್ಸ್ ಆಧಾರಿತ ಜವಳಿ ಉದ್ಯಮಗಳು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಈ ಕ್ಷೇತ್ರವನ್ನು ಪುನರುಜ್ಜೀವನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ವಿವಿಧ ಜಿಲ್ಲೆಗಳಲ್ಲಿ ಪ್ರಸ್ತುತ ಎಷ್ಟು ಕೈಮಗ್ಗ ಹಾಗೂ ಪವರ್‌ಲೂಮ್ ಘಟಕಗಳು ಕಾರ್ಯನಿರ್ವಹಿಸುತ್ತಿವೆ ; ಈವರೆಗೆ ಮುಚ್ಚಲ್ಪಟ್ಟ ಘಟಕಗಳೆಷ್ಟು ; ಮೊಳಕಾಲ್ಮೂರು, ಮೈಸೂರು ಇಳಕಲ್, ಗುಳೇದಗುಡ್ಡ, ಉಡುಪಿ ಸೇರಿದಂತೆ ವಿವಿಧ ಪ್ರದೇಶಗಳ ಸಾಂಪ್ರದಾಯಿಕ ಸೀರೆ ಹಾಗೂ ಜವಳಿ ಉತ್ಪನ್ನಗಳಿಗೆ ಸಮರ್ಪಕ ಮಾರುಕಟ್ಟೆ ಸೌಲಭ್ಯ ಒದಗಿಸಲು ಸರ್ಕಾರದ ಯೋಜನೆಗಳೇನು ;

(ಇ) ಕಚ್ಚಾ ವಸ್ತುಗಳ ಬೆಲೆ ಏರಿಕೆಯಿಂದ ನೇಕಾರರು ಸಂಕಷ್ಟದಲ್ಲಿದ್ದು ಕಚ್ಚಾ ವಸ್ತುಗಳ ಸಬ್ಸಿಡಿ ಮತ್ತು ವಿದ್ಯುತ್ ದರ ರಿಯಾಯಿತಿ ಕುರಿತು ಸರ್ಕಾರದ ನಿರ್ಧಾರವೇನು ;

(ಈ) ಹತ್ತಿ ಉತ್ಪಾದನೆ ಕುಸಿಯುತ್ತಿರುವ ಹಿನ್ನಲೆಯಲ್ಲಿ ಜವಳಿ ಉದ್ಯಮದ ಮೇಲೆ ಉಂಟಾಗಿರುವ ಪರಿಣಾಮಗಳ ಬಗ್ಗೆ ಸರ್ಕಾರ ಅಧ್ಯಯನ ನಡೆಸಿದೆಯೇ ; ಹತ್ತಿ ಬೆಳೆಗಾರರು ಹಾಗೂ ಕಾಟನ್‌ಮಿಲ್‌ಗಳಿಗೆ ಪ್ರೋತ್ಸಾಹಧನ ಹೆಚ್ಚಿಸುವ ಕುರಿತು ಸರ್ಕಾರದ ನಿಲುವೇನು ;

(ಉ) ಜೀನ್ಸ್ ಹಾಗೂ ಅಪೆರಲ್ ಉದ್ಯಮಕ್ಕೆ ಸಮರ್ಪಕ ಮಾರುಕಟ್ಟೆ, ರಫ್ತು ಸೌಲಭ್ಯ ಹಾಗೂ ತಾಂತ್ರಿಕ ಬೆಂಬಲ ಒದಗಿಸಲು ಮತ್ತು ರಾಜ್ಯದಲ್ಲಿ ಅಪೆರಲ್ ಪಾರ್ಕ್ ಸ್ಥಾಪನೆಗಾಗಿ ಮೀಸಲಿಟ್ಟಿರುವ ೨೫೦ ಎಕರೆ ಭೂಮಿಯ ಕುರಿತು ಪ್ರಸ್ತುತ ಸ್ಥಿತಿಗತಿಗಳೇನು ; ಯೋಜನೆ ಯಾವ ಹಂತದಲ್ಲಿದೆ ;

(ಊ) ಪರಿಸರ ಇಲಾಖೆ ಸೂಚನೆಯಿಂದ ಮುಚ್ಚಲ್ಪಟ್ಟಿರುವ ವಾಷಿಂಗ್ ಯುನಿಟ್‌ಗಳ ಪುನರಾರಂಭಕ್ಕೆ ಸರ್ಕಾರ ನೀಡಿದ ರೂ. ೨೨ ಕೋಟಿ ಮೊತ್ತದ ಸಿಇಟಿಪಿ ಪ್ಲಾಂಟ್ ಸ್ಥಾಪನೆ ಭರವಸೆಯನ್ನು ಯಾವಾಗ ಈಡೇರಿಸಲಾಗುವುದು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಳಚರಂಡಿ ಹಾಗೂ ಶೌಚಾಲಯ ಸೌಲಭ್ಯ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೬ (೧೫೪೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸುರತ್ಕಲ್ ವಲಯ (೧೯೯೪ರಿಂದ ಪಾಲಿಕೆ ವ್ಯಾಪ್ತಿಗೆ ಸೇರಿರುವ ಪ್ರದೇಶ)ದಲ್ಲಿ ನಾಗರೀಕರು ತೆರಿಗೆ ಪಾವತಿಸುತ್ತಿದ್ದರೂ ಒಳಚರಂಡಿ ವ್ಯವಸ್ಥೆ

ಸಮರ್ಪಕವಾಗಿ ಕಲ್ಪಿಸದಿರುವ ಬಗ್ಗೆ ಸ್ಥಳೀಯರು ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಆ) ಸುರತ್ಕಲ್ ವಲಯದಲ್ಲಿ ಒಳಚರಂಡಿ ಜಾಲ (UGD) ವ್ಯವಸ್ಥೆ ವಿಸ್ತರಣೆಗಾಗಿ ಸರ್ಕಾರ ಕೈಗೊಂಡಿರುವ ಯೋಜನೆಗಳೇನು ; ಇದುವರೆಗೆ ಎಷ್ಟು ಮನೆಗಳಿಗೆ ಸಂಪರ್ಕ ಕಲ್ಪಿಸಲಾಗಿದೆ ; ಬಾಕಿ ಇರುವ ಪ್ರದೇಶಗಳಿಗೆ ಯಾವ ಕಾಲಮಿತಿಯೊಳಗೆ ವ್ಯವಸ್ಥೆ ಕಲ್ಪಿಸಲಾಗುವುದು ;

(ಇ) ಮಂಗಳೂರು ನಗರದಲ್ಲಿನ ಪ್ರಮುಖ ಸಾರ್ವಜನಿಕ ಸ್ಥಳಗಳು ಬಸ್ ನಿಲ್ದಾಣ, ಹಂಪನಕಟ್ಟೆ, ಕದ್ರಿ, ಕಂಕನಾಡಿ, ಸ್ಟೇಟ್ ಬ್ಯಾಂಕ್ ಪ್ರದೇಶ ಸೇರಿದಂತೆ ಹಲವೆಡೆ ಸಾರ್ವಜನಿಕ ಶೌಚಾಲಯಗಳು ಉಪಯೋಗಿಸದ ಸ್ಥಿತಿಯಲ್ಲಿ ಇರುವುದು, ಕೆಲವೆಡೆ ಬೀಗ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ನವೀಕರಿಸಲಾಗುವುದು ;

(ಈ) ಮಹಾನಗರ ಪಾಲಿಕೆ ಮಾರುಕಟ್ಟೆಗಳು ಮತ್ತು ವಾಣಿಜ್ಯ ಸಂಕೀರ್ಣಗಳಲ್ಲಿ ಪ್ರತಿಯೊಂದು ಮಹಡಿಯಲ್ಲಿ ಸಾಕಷ್ಟು ಸಂಖ್ಯೆಯ ಸಾರ್ವಜನಿಕ ಶೌಚಾಲಯಗಳಿವೆಯೇ ; ಇಲ್ಲದಿದ್ದರೆ, ಅದಕ್ಕೆ ಕಾರಣವೇನು ; ಇವುಗಳ ನಿರ್ವಹಣೆ, ಮೂಲಸೌಲಭ್ಯ ಒದಗಿಸುವ ಜವಾಬ್ದಾರಿ ಯಾರದು ; ನಿಯಮಿತ ಮೇಲ್ವಿಚಾರಣೆ ನಡೆಸಲಾಗುತ್ತಿದೆಯೇ ;

(ಉ) ನಗರ ನೈರ್ಮಲ್ಯ ಮತ್ತು ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಒಳಚರಂಡಿ ನಿರ್ಮಿಸಲು ಹಾಗೂ ಹೊಸ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಿ ಇಡೀ ವ್ಯವಸ್ಥೆಯನ್ನು ಸಮಗ್ರವಾಗಿ ಸುಧಾರಿಸಲು ಸರ್ಕಾರ ರೂಪಿಸಿರುವ ಕಾಲಮಿತಿಯ ಕಾರ್ಯಯೋಜನೆಗಳೇನು ?

## ರಾಜ್ಯದಲ್ಲಿ ತೋಟಗಾರಿಕಾ ಬೆಳೆ ಹಾನಿ ಹಾಗೂ ಪರಿಹಾರ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೭ (೧೫೪೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಮುಖ ತೋಟಗಾರಿಕಾ ಬೆಳೆ ಬೆಳೆಯುವ ಕರಾವಳಿ ಭಾಗಗಳಲ್ಲಿ ಅಡಿಕೆ ಬೆಳೆಗಾರರು ಹವಾಮಾನ ವ್ಯತ್ಯಾಸ, ಅಕಾಲಿಕ ಮಳೆ, ತಾಪಮಾನ ಏರಿಕೆ ಮತ್ತು ಕೀಟ/ರೋಗಬಾಧೆಯಿಂದ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕೆಲ ಭಾಗಗಳಲ್ಲಿ ಎಳೆ ಅಡಿಕೆ (ನಳ್ಳಿ) ಉದುರುವ ಸಮಸ್ಯೆ ಉಂಟಾಗಿದ್ದು ಅಂದಾಜು ಎಷ್ಟು ಪ್ರಮಾಣದ ಬೆಳೆ ನಷ್ಟವಾಗಿದೆ ; ಎಷ್ಟು ಪ್ರಮಾಣದ ಪರಿಹಾರ ಮೊತ್ತವನ್ನು ವಿತರಿಸಲಾಗಿದೆ ;

(ಇ) ತಾಪಮಾನ ಹೆಚ್ಚಾದಾಗ ಹಾಗೂ ಅಕಾಲಿಕ ಮಳೆಯ ಪರಿಣಾಮವಾಗಿ ಹಿಂಗಾರು ಸಾಯುವುದು, ಕರಟುವುದು ಮತ್ತು ಎಲೆಚುಕ್ಕೆ ರೋಗ ಹೆಚ್ಚಾಗುತ್ತಿರುವ ಬಗ್ಗೆ ಸರ್ಕಾರ ಯಾವುದಾದರೂ ಸಮೀಕ್ಷೆ ನಡೆಸಿದೆಯೇ; ಅದರ ವಿವರಗಳೇನು ;

(ಈ) ಎಲೆಚುಕ್ಕೆ ರೋಗ ನಿಯಂತ್ರಣಕ್ಕೆ ಶಿಫಾರಸ್ಸು ಮಾಡಲಾಗುತ್ತಿರುವ ಪ್ರೊಪಿಕೊನಜೋಲ್ ಸೇರಿದಂತೆ ರಾಸಾಯನಿಕ ಸಿಂಪಡನೆಗಳು ಜೇನು ಕೃಷಿಗೆ ಹಾನಿಕಾರಕವಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಜೇನು ಸಾಕಾಣಿಕೆದಾರರಿಗೆ ನಷ್ಟವಾಗದಂತೆ ಪರ್ಯಾಯ ಜೀವಾಣುನಾಶಕ/ಜೈವಿಕ ವಿಧಾನಗಳನ್ನು ಪರ್ಯಾಲೋಚಿಸುವ ಮತ್ತು ಶಿಫಾರಸ್ಸು ಮಾಡುವ ಯೋಚನೆ ಇದೆಯೇ ;

(ಉ) ಹವಾಮಾನ ಬದಲಾವಣೆಯಿಂದ ಉಂಟಾಗುತ್ತಿರುವ ಬೆಳೆ ನಷ್ಟದ ಹಿನ್ನೆಲೆಯಲ್ಲಿ ಅಡಿಕೆ ಇತರ ತೋಟಗಾರಿಕಾ ಬೆಳೆಗಾರರಿಗೆ ವಿಶೇಷ

ಪರಿಹಾರ ಪ್ಯಾಕೇಜ್, ಬೆಳೆ ವಿಮೆ, ಇನ್-ಪುಟ್ ಸಬ್ಸಿಡಿ ಅಥವಾ ತುರ್ತು ನೆರವು ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಊ) ಅಡಿಕೆ ಬೆಳೆಗಾರರಿಗೆ ತಾಂತ್ರಿಕ ಮಾರ್ಗದರ್ಶನ, ನಿಯಮಿತ ತೋಟ ಪರಿಶೀಲನೆ ಮತ್ತು ಹವಾಮಾನ ಆಧಾರಿತ ಎಚ್ಚರಿಕಾ ವ್ಯವಸ್ಥೆ (Weather Advisory System) ಜಾರಿಗೆ ತರುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿನ ಕಬ್ಬು ಬೆಳೆ ವಿಸ್ತೀರ್ಣ, ಉತ್ಪಾದಕತೆ ಹಾಗೂ ಸಕ್ಕರೆ ಕೈಗಾರಿಕೆಗೆ ಸಂಬಂಧಿಸಿದ ಸೌಲಭ್ಯಗಳ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩೮ (೧೫೧೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕಬ್ಬು ಬೆಳೆದಿರುವ ಒಟ್ಟು ವಿಸ್ತೀರ್ಣ ಎಷ್ಟು ಹೆಕ್ಟೇರ್ ;

(ಆ) ಕಳೆದ ಮೂರು ವರ್ಷಗಳ ವಿಸ್ತೀರ್ಣದೊಂದಿಗೆ ಹೋಲಿಸಿದರೆ ಕಬ್ಬು ಬೆಳೆ ಪ್ರದೇಶದಲ್ಲಿ ಏರಿಕೆ ಆಗಿದೆಯೇ ಅಥವಾ ಇಳಿಕೆ ಕಂಡಿದೆಯೇ : (ತಾಲ್ಲೂಕುವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ರೈತರಿಗೆ ಹೆಚ್ಚಿನ ಇಳುವರಿ ನೀಡುವ ಸುಧಾರಿತ ಕಬ್ಬಿನ ತಳಿಗಳನ್ನು ಕೃಷಿ ಇಲಾಖೆ ಅಥವಾ ಸ್ಥಳೀಯ ಸಕ್ಕರೆ ಕಾರ್ಖಾನೆಗಳ ಮೂಲಕ ವಿತರಿಸಲಾಗಿದೆಯೇ ; ವಿತರಿಸಲಾದ ಪ್ರಮುಖ ತಳಿಗಳ ಹೆಸರುಗಳು ಯಾವುವು ; ಅವುಗಳ ವಿತರಣೆಯ ಪ್ರಮಾಣ (ತಾಲ್ಲೂಕುವಾರು) ಎಷ್ಟು ;

(ಈ) ಕಬ್ಬಿನ, ಹೆಕ್ಟೇರ್‌ಗೆ ಉತ್ಪಾದಕತೆ (Productivity per Hectare) ಹೆಚ್ಚಿಸಲು ಹಾಗೂ ಕೆಂಪು ಕುರುಡು ರೋಗ, ಸ್ಮಟ್, ವಿಳ್ಟೊಂಗ್ ಮುಂತಾದ ರೋಗಗಳ ನಿಯಂತ್ರಣದ ಬಗ್ಗೆ ರೈತರಿಗೆ ಕೃಷಿ ವಿಜ್ಞಾನ ಕೇಂದ್ರಗಳ (KVK) ಮೂಲಕ ಕಳೆದ ಮೂರು ವರ್ಷಗಳಲ್ಲಿ ಎಷ್ಟು ತಾಂತ್ರಿಕ ತರಬೇತಿ ಶಿಬಿರಗಳು/ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗಿದೆ ; ಭಾಗವಹಿಸಿದ ರೈತರ ಸಂಖ್ಯೆ ಎಷ್ಟು ;

(ಉ) ಬೀದರ್ ಜಿಲ್ಲೆಯಲ್ಲಿರುವ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕೃತ ಕಬ್ಬು ತೂಕಮಾಪನ ಕೇಂದ್ರಗಳ (Weighbridge) ಒಟ್ಟು ಸಂಖ್ಯೆ ಎಷ್ಟು ; ತೂಕದ ಅವ್ಯವಹಾರ ತಡೆಯಲು ಡಿಜಿಟಲ್ ತೂಕ ಯಂತ್ರ ಸಿಸಿಟಿವಿ ನಿಗಾ, ಆನ್‌ಲೈನ್ ಡೇಟಾ ಮಾನಿಟರಿಂಗ್ ವ್ಯವಸ್ಥೆಗಳನ್ನು ಅಳವಡಿಸಿರುವ ವಿವರವೇನು ;

(ಊ) ಕಬ್ಬು ಬೆಳೆ ಹೆಚ್ಚು ನೀರು ಬೇಡುವ ಬೆಳೆಯಾಗಿರುವುದರಿಂದ ಜಿಲ್ಲೆಯಲ್ಲಿ ನೀರಾವರಿ ದಕ್ಷತೆ ಹೆಚ್ಚಿಸಲು ಹಾಗೂ ಹನಿ ನೀರಾವರಿ (Drip Irrigation) ಅಳವಡಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಸಬ್ಸಿಡಿ ಪ್ರಮಾಣ ಎಷ್ಟು ; ಕೇಂದ್ರ ಮತ್ತು ರಾಜ್ಯ ಅನುದಾನದ ಹಂಚಿಕೆ ಪ್ರಮಾಣವೇನು ;

(ಋ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ರೈತರು ಇದರ ಪ್ರಯೋಜನ ಪಡೆದಿದ್ದಾರೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿನ ಕೈಗಾರಿಕಾ ಕ್ಲಸ್ಟರ್‌ಗಳ ಅಭಿವೃದ್ಧಿ ಮತ್ತು ಮೂಲಸೌಕರ್ಯಗಳ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೯ (೧೫೧೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ನೀತಿಯಡಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕಾ ಕ್ಲಸ್ಟರ್‌ಗಳ ಒಟ್ಟು ಸಂಖ್ಯೆ ಎಷ್ಟು ; (ಉದಾಹರಣೆಗೆ: Bidriware, ಬೇಳೆ ಸಂಸ್ಕರಣೆ, ಇಂಜಿನಿಯರಿಂಗ್ ಇತ್ಯಾದಿ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ಲಸ್ಟರ್‌ಗಳ ವ್ಯಾಪ್ತಿಯಲ್ಲಿ ಉದ್ದಿಮೆದಾರರಿಗೆ ಒದಗಿಸಲಾದ ರಸ್ತೆ, ವಿದ್ಯುತ್ ಸಂಪರ್ಕ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ, ಗೋದಾಮು ಹಾಗೂ ಸಾಮಾನ್ಯ ಶೆಡ್‌ಗಳಂತಹ ಮೂಲಸೌಕರ್ಯಗಳ ಪ್ರಸ್ತುತ ಸ್ಥಿತಿಗತಿ ಏನು ; ಕಳೆದ ಎರಡು ವರ್ಷಗಳಲ್ಲಿ ಈ ಸೌಲಭ್ಯಗಳ ಉನ್ನತೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳು ಹಾಗೂ ವೆಚ್ಚದ ವಿವರವೇನು ;

(ಇ) ಬೀದರ್‌ನ ಸಾಂಪ್ರದಾಯಿಕ ಉತ್ಪನ್ನಗಳಾದ Bidriware ಮತ್ತು ದಾಲ್ (ಬೇಳೆ) ಉತ್ಪನ್ನಗಳಿಗೆ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆ ಹೆಚ್ಚಿಸಲು ಬ್ರ್ಯಾಂಡಿಂಗ್, GI ಟ್ಯಾಗ್ ಪ್ರಚಾರ ಡಿಜಿಟಲ್ ಮಾರುಕಟ್ಟೆ (E-commerce) ರಫ್ತು ಪ್ರೋತ್ಸಾಹ ಯೋಜನೆಗಳಡಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಈ) ಕ್ಲಸ್ಟರ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಣ್ಣ ಉದ್ದಿಮೆದಾರರಿಗೆ ದುಬಾರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ಒದಗಿಸಲು 'ಸಾಮೂಹಿಕ ಸೌಲಭ್ಯ ಕೇಂದ್ರ' (Common Facility Centre-CFC) ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ ಬೀದರ್ ಜಿಲ್ಲೆಯಲ್ಲಿ ಈವರೆಗೆ ಎಷ್ಟು CFC ಗಳು ಕಾರ್ಯಾರಂಭ ಮಾಡಿವೆ ಮತ್ತು ಅವುಗಳ ಸೌಲಭ್ಯಗಳ ವಿವರವೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯ ಕೈಗಾರಿಕಾ ಕ್ಲಸ್ಟರ್‌ಗಳ ಅಭಿವೃದ್ಧಿ ಮೂಲಸೌಕರ್ಯ ವೃದ್ಧಿ ಹಾಗೂ ತಾಂತ್ರಿಕ ನವೀಕರಣ (Technology Upgradation) ಗಾಗಿ ಸರ್ಕಾರದಿಂದ ಮೀಸಲಾದ ಒಟ್ಟು ಅನುದಾನ ಎಷ್ಟು ; ಅದರಲ್ಲಿ ವಾಸ್ತವವಾಗಿ ಬಿಡುಗಡೆಯಾದ ಮತ್ತು ಬಳಕೆಯಾದ ಮೊತ್ತ ಎಷ್ಟು ? (ವರ್ಷವಾರು ಹಾಗೂ ಯೋಜನಾವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿನ ಗಣಿಗಾರಿಕೆ ಆದಾಯ, ಜಿಲ್ಲಾ ಖನಿಜ ನಿಧಿ (DMF) ಬಳಕೆ ಹಾಗೂ ಅಕ್ರಮ ಗಣಿಗಾರಿಕೆ ತಡೆ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೦ (೧೫೧೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವಿವಿಧ ಖನಿಜ ಗಣಿಗಾರಿಕೆ ಚಟುವಟಿಕೆಗಳಿಂದ ರಾಯಲ್ಟಿ (Royalty) ರೂಪದಲ್ಲಿ ಸಂಗ್ರಹವಾದ ಒಟ್ಟು ಆದಾಯ ಎಷ್ಟು ; ವರ್ಷವಾರು ವಿವರವೇನು ; ಕಳೆದ ವರ್ಷಕ್ಕೆ ಹೋಲಿಸಿದರೆ ಆದಾಯ ಸಂಗ್ರಹಣೆಯಲ್ಲಿ ಏರಿಕೆ ಅಥವಾ ಇಳಿಕೆ ಕಂಡಿದೆಯೇ ;

(ಆ) ಸಂಗ್ರಹವಾದ ರಾಯಲ್ಟಿ ಮೊತ್ತದಲ್ಲಿ District Mineral Foundation (DMF) ನಿಧಿಗೆ ಜಮೆಯಾದ ಮೊತ್ತ ಎಷ್ಟು; ಈ ನಿಧಿಯನ್ನು ಗಣಿಗಾರಿಕೆ ಬಾಧಿತ ಪ್ರದೇಶಗಳ ಕುಡಿಯುವ ನೀರು, ಶಿಕ್ಷಣ ಆರೋಗ್ಯ, ರಸ್ತೆ, ಸ್ವಚ್ಛತೆ ಹಾಗೂ ಇತರೆ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳಿಗೆ ಬಳಸಲಾಗಿದೆಯೇ ; (ಯೋಜನಾವಾರು ಹಾಗೂ ವರ್ಷವಾರು ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಲಭ್ಯವಿರುವ ಖನಿಜ ಸಂಪನ್ಮೂಲಗಳಾದ ಕೆಂಪುಕಲ್ಲು (Laterite), ಮರಳು ಹಾಗೂ ಇತರೆ ಸಣ್ಣ ಖನಿಜಗಳ ವೈಜ್ಞಾನಿಕ ಸಮೀಕ್ಷೆ (Geological Survey) ಕೊನೆಯದಾಗಿ ಯಾವ ವರ್ಷದಲ್ಲಿ ನಡೆಸಲಾಗಿದೆ ; ಹೊಸ ಗಣಿಗುತ್ತಿಗೆ (Mining Lease/Quarry License)ನೀಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳು ಮತ್ತು ಪರಿಸರ ಅನುಮೋದನೆ ಪ್ರಕ್ರಿಯೆಯ ವಿವರವೇನು ;

(ಈ) ಗಣಿಗಾರಿಕೆಯಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ಪರಿಸರ ಸಮತೋಲನ ಕಾಯ್ದುಕೊಳ್ಳಲು 'ಪರಿಸರ ಮರುಸ್ಥಾಪನೆ' (Reclamataion/Afforestation) ಕಾರ್ಯಗಳನ್ನು ಕೈಗೊಳ್ಳಲಾಗಿದೆಯೇ ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಗಿಡ ನೆಡುವ ಕಾರ್ಯ ನಡೆದಿದೆ ; ಖನಿಜ ಗುತ್ತಿಗೆದಾರರಿಂದ CSR ಅಥವಾ ಪರಿಸರ ಪರಿಹಾರ ನಿಧಿ ಬಳಕೆಯಾದ ಪ್ರಮಾಣ ಎಷ್ಟು ;

(ಉ) ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಖನಿಜ ಗಣಿಗಾರಿಕೆ ಹಾಗೂ ಅಕ್ರಮ ಸಾಗಣೆ ತಡೆಯಲು ವಿಶೇಷ ತಪಾಸಣಾ ದಳಗಳು (Task Force/Check Posts) ಕಾರ್ಯನಿರ್ವಹಿಸುತ್ತಿವೆಯೇ ; ಕಳೆದ ಎರಡು ವರ್ಷಗಳಲ್ಲಿ ದಾಖಲಾಗಿರುವ ಅಕ್ರಮ ಪ್ರಕರಣಗಳ ಸಂಖ್ಯೆ ಎಷ್ಟು ; ವಶಪಡಿಸಿಕೊಂಡ ದಂಡದ ಮೊತ್ತ ಮತ್ತು ವಶಪಡಿಸಿಕೊಂಡ ವಾಹನಗಳ ಸಂಖ್ಯೆ ಎಷ್ಟು ?

## ಬೀದರ್ ಜಿಲ್ಲೆಯಲ್ಲಿನ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಉತ್ಪಾದನಾ ಸಾಮರ್ಥ್ಯ ಹಾಗೂ ರಫ್ತು ವಹಿವಾಟಿನ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೧ (೧೫೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಘಟಕಗಳ ಒಟ್ಟು ಸಂಖ್ಯೆ ಎಷ್ಟು ; ಅವುಗಳ ಉದ್ಯಮವಾರು ವಿವರ ಮತ್ತು ಒಟ್ಟು ವಾರ್ಷಿಕ ಸ್ಥಾಪಿತ ಉತ್ಪಾದನಾ ಸಾಮರ್ಥ್ಯ (Installed Capacity) ಮೌಲ್ಯ ಎಷ್ಟು ;

(ಆ) ಈ ಕೈಗಾರಿಕಾ ಘಟಕಗಳಲ್ಲಿ ಪ್ರಸ್ತುತ ಬಳಸಲಾಗುತ್ತಿರುವ ಸರಾಸರಿ ಉತ್ಪಾದನಾ ಸಾಮರ್ಥ್ಯ (Capacity Utilization) ಶೇಕಡವಾರು ಎಷ್ಟು ; ಪೂರ್ಣ ಪ್ರಮಾಣದ ಸಾಮರ್ಥ್ಯ ಬಳಕೆಯಾಗದಿರುವುದಕ್ಕೆ ಕಾರಣವಾಗಿರುವ ಮೂಲಭೂತ ಅಡಚಣೆಗಳು ಯಾವುವು ;

(ಇ) ಕಳೆದ ಮೂರು ವರ್ಷಗಳಲ್ಲಿ ಕಚ್ಚಾ ಪದಾರ್ಥಗಳ ಬೆಲೆ ಏರಿಕೆ, ನಿರಂತರ ವಿದ್ಯುತ್ ವ್ಯತ್ಯಯ, ಸಾರಿಗೆ ವೆಚ್ಚ ಹೆಚ್ಚಳ ಅಥವಾ ಮಾರುಕಟ್ಟೆ ಕುಸಿತದಿಂದಾಗಿ ಉತ್ಪಾದನೆಯಲ್ಲಿ ಗಣನೀಯ ಇಳಿಕೆ ಕಂಡ ಘಟಕಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸಂಪೂರ್ಣವಾಗಿ ಮುಚ್ಚಲ್ಪಟ್ಟ ಘಟಕಗಳ ಸಂಖ್ಯೆ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಈ) ಬೀದರ್‌ನಲ್ಲಿ ಕೈಗಾರಿಕಾ ವೃದ್ಧಿಯನ್ನು ಉತ್ತೇಜಿಸಲು ಹಾಗೂ ಹೊಸ ಹೂಡಿಕೆದಾರರನ್ನು ಆಕರ್ಷಿಸಲು ಕರ್ನಾಟಕ ಕೈಗಾರಿಕಾ ನೀತಿ ೨೦೨೦-೨೫ ಅಡಿಯಲ್ಲಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರವೇನು ; ಜಿಲ್ಲೆಗೆ ವಿಶೇಷ ಪ್ಯಾಕೇಜ್ ನೀಡುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಉ) ಜಿಲ್ಲೆಯಲ್ಲಿ ಉತ್ಪಾದನೆಯಾಗುತ್ತಿರುವ ಉತ್ಪನ್ನಗಳನ್ನು ಅಂತರಾಷ್ಟ್ರೀಯ ಮಾರುಕಟ್ಟೆಗೆ ರಫ್ತು ಮಾಡುತ್ತಿರುವ ಘಟಕಗಳ ಸಂಖ್ಯೆ ಎಷ್ಟು ;

(ಊ) ಕಳೆದ ಮೂರು ವರ್ಷಗಳ ರಫ್ತು ಪ್ರಮಾಣ (ವರ್ಷವಾರು) ಎಷ್ಟು ರಫ್ತು ಪ್ರಮಾಣವನ್ನು ಹೆಚ್ಚಿಸಲು ಬೀದರ್ ಜಿಲ್ಲೆಯಲ್ಲಿ ರಫ್ತು ಕೇಂದ್ರ (Export Hub)ಅಥವಾ ವಿಶೇಷ ಕೈಗಾರಿಕಾ ವಲಯ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ?

## ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೈರ್ಮಲ್ಯ ನಿರ್ವಹಣೆ ಹಾಗೂ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೨ (೧೫೧೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ನಗರಸಭೆ ಮತ್ತು ಪುರಸಭೆಗಳ ವ್ಯಾಪ್ತಿಯಲ್ಲಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ನಿಯಮಿತವಾಗಿ ಫಾಗಿಂಗ್ ಹಾಗೂ ಕೀಟನಾಶಕ ಸಿಂಪಡಣಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆಯೇ ; ಕಳೆದ ಆರು ತಿಂಗಳ ಅವಧಿಯಲ್ಲಿ ವಾರ್ಡ್‌ವಾರು ಎಷ್ಟು ಬಾರಿ ಫಾಗಿಂಗ್/ಸಿಂಪಡಣೆ ನಡೆಸಲಾಗಿದೆ ; ಈ ಕಾರ್ಯಗಳಿಗೆ ಮೀಸಲಾದ ಅನುದಾನ ಮತ್ತು ವೆಚ್ಚದ ವಿವರವೇನು ;

(ಆ) ಜಿಲ್ಲೆಯ ನಗರ ಪ್ರದೇಶಗಳಿಂದ ಸಂಗ್ರಹವಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸ್ಥಾಪಿಸಲಾದ ಘನ ತ್ಯಾಜ್ಯ ನಿರ್ವಹಣಾ ಘಟಕಗಳ (Solid Waste Management Units) ಒಟ್ಟು ಸಂಖ್ಯೆ ಎಷ್ಟು ; ಅವುಗಳಲ್ಲಿ ಸಂಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು ; ಪ್ರತ್ಯೇಕವಾಗಿ ಒಣ/ತೇವೆಯ ತ್ಯಾಜ್ಯ ವಿಂಗಡಣೆ ವ್ಯವಸ್ಥೆ ಜಾರಿಯಲ್ಲಿದೆಯೇ ;

(ಇ) ನಗರ ಪ್ರದೇಶಗಳ ಸಾರ್ವಜನಿಕ ಶೌಚಾಲಯಗಳ ನಿರ್ವಹಣೆ ಸಮರ್ಪಕವಾಗಿಲ್ಲ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವುಗಳ ನಿರ್ವಹಣೆಗೆ ವಾರ್ಷಿಕವಾಗಿ ಮೀಸಲಾದ ಅನುದಾನ ಎಷ್ಟು : ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸಲಾಗಿದೆಯೇ ;

(ಈ) ಬೀದರ್ ಜಿಲ್ಲೆಯ ನಗರ ಪ್ರದೇಶಗಳಲ್ಲಿ ಡೆಂಗ್ಯೂ, ಮಲೇರಿಯಾ ಮತ್ತು ಚಿಕಿನ್‌ಗುನಿಯಾ ಮುಂತಾದ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಕೈಗೊಂಡಿರುವ ಕ್ರಮಗಳೇನು ; ಕಳೆದ ಒಂದು ವರ್ಷದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು;

(ಉ) ನಗರ ಪ್ರದೇಶಗಳಲ್ಲಿ ಸಾಂಕ್ರಾಮಿಕ ರೋಗಗಳ ಹರಡುವಿಕೆಯನ್ನು ಮೇಲ್ವಿಚಾರಣೆ ಮಾಡಲು 'Urban Health Monitoring System ಜಾರಿಯಲ್ಲಿದೆಯೇ ; ಕುಡಿಯುವ ನೀರಿನ ಕಲುಷಿತತೆ, ಒಳಚರಂಡಿ ತೊಂದರೆ ಮತ್ತು ನೈರ್ಮಲ್ಯ ಸಮಸ್ಯೆಗಳ ಕುರಿತು ಸಾರ್ವಜನಿಕರು ದೂರು ಸಲ್ಲಿಸಲು ಇರುವ ಸಹಾಯವಾಣಿ (Helpline) ಮೊಬೈಲ್ ಆಪ್ ಅಥವಾ ಆನ್‌ಲೈನ್ ಪೋರ್ಟಲ್ ವ್ಯವಸ್ಥೆಗಳ ವಿವರಗಳೇನು ?

## ಜವಳಿ ಕ್ಷೇತ್ರದಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೩ (೧೫೨೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಜವಳಿ ಕ್ಷೇತ್ರಕ್ಕೆ ಸರ್ಕಾರ ನೀಡಿದ ಒಟ್ಟು ಅನುದಾನ ಎಷ್ಟು ; ಈ ಅನುದಾನದಲ್ಲಿ ಬಳಕೆ ಮಾಡಲಾಗಿರುವ ಅನುದಾನವೆಷ್ಟು ಮತ್ತು ಬಾಕಿ ಉಳಿದಿರುವ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕದಲ್ಲಿ ಜವಳಿ ಕ್ಲಸ್ಟರ್‌ಗಳ ಕುರಿತು ಪ್ರಗತಿ ವರದಿ ನೀಡಲಾಗುವುದೇ ; ಪವರ್‌ಲೂಮ್ ಮತ್ತು ಹ್ಯಾಂಡ್‌ಲೂಮ್ ಕೈಗಾರಿಕೆಗಳಿಗೆ ನೀಡುವ ಸಬ್ಸಿಡಿ/ವಿದ್ಯುತ್ ರಿಯಾಯಿತಿ ಎಷ್ಟು ; ಮತ್ತು ಕಳೆದ ಮೂರು ವರ್ಷಗಳಲ್ಲಿ ಈ ಸಬ್ಸಿಡಿ ಎಷ್ಟು ಫಲಾನುಭವಿಗಳಿಗೆ ಸಿಕ್ಕಿದೆ ;

(ಇ) ಕರ್ನಾಟಕ ರಾಜ್ಯ ಜವಳಿ ಮೂಲಸೌಕರ್ಯ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ರಾಜ್ಯದ ಜವಳಿ ರಫ್ತು ಕಳೆದ ಐದು ವರ್ಷಗಳಲ್ಲಿ ಏರಿಕೆ ಕಂಡಿದೆಯೇ ಅಥವಾ ಇಳಿಕೆಯಾಗಿದೆಯೇ ? (ಮಾಹಿತಿ ನೀಡುವುದು)

## ಬೃಹತ್ ಕೈಗಾರಿಕೆ ಇಲಾಖೆಯಿಂದ ಮಾಡಿಕೊಂಡ MOUಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೪ (೧೫೩೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೦೨೫ನೇ ಅವಧಿಯಲ್ಲಿ ನಡೆದ Global Investors Meet ನಲ್ಲಿ ಎಷ್ಟು MOU ಗಳಿಗೆ ಸಹಿ ಮಾಡಲಾಗಿದೆ ; ಈ MOU ಗಳ ನಂತರ ಎಷ್ಟು ಉದ್ಯಮಗಳು

ರಾಜ್ಯದಲ್ಲಿ ಪ್ರಾರಂಭವಾಗಿವೆ ಮತ್ತು ಎಲ್ಲೆಲ್ಲಿ ಪ್ರಾರಂಭವಾಗಿವೆ ; ಇದರಿಂದ ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಉದ್ಯೋಗಗಳು ಸೃಷ್ಟಿಯಾಗಿವೆ ; ಅನುಷ್ಠಾನಗೊಳ್ಳದೇ ಉಳಿದ MOU ಗಳ ಸಂಖ್ಯೆ ಎಷ್ಟು ;

(ಆ) ಹೂಡಿಕೆ ಆಕರ್ಷಣೆಯಲ್ಲಿ ಗುಜರಾತ್, ಮಹಾರಾಷ್ಟ್ರ ಮತ್ತು ತಮಿಳುನಾಡು ರಾಜ್ಯಗಳೊಂದಿಗೆ ಹೋಲಿಸಿದರೆ ಕರ್ನಾಟಕದ ಸ್ಥಾನಮಾನವು ಹೇಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಕೈಗಾರಿಕೆಗಳಿಂದ ಎಷ್ಟು ಉದ್ಯೋಗಗಳ ಭರವಸೆ ನೀಡಲಾಗಿತ್ತು ; ವಾಸ್ತವವಾಗಿ ಸೃಷ್ಟಿಯಾದ ಉದ್ಯೋಗಗಳ ಸಂಖ್ಯೆ ಎಷ್ಟು ; ಸ್ಥಳೀಯ ಕನ್ನಡಿಗರಿಗೆ ನೀಡಿದ ಉದ್ಯೋಗ ಶೇಕಡವಾರು ಎಷ್ಟು ?

## ನಗರ ಪ್ರದೇಶಗಳಲ್ಲಿ ೨೪ x ೭ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೫ (೧೫೬೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಪ್ರದೇಶಗಳಲ್ಲಿ ೨೪ x ೭ ಕುಡಿಯುವ ನೀರಿನ ಯೋಜನೆ ಎಷ್ಟು ನಗರಗಳಲ್ಲಿ ಜಾರಿಗೆ ಬಂದಿದೆ ; ಒಳಚರಂಡಿ (UGD) ಯೋಜನೆ ಪೂರ್ಣಗೊಳಿಸದ ನಗರಗಳ ಸಂಖ್ಯೆ ಎಷ್ಟು ;

(ಆ) ನಗರ ಪ್ರದೇಶಗಳಲ್ಲಿ ಬಡವರಿಗೆ ಮನೆ ನೀಡುವ ಯೋಜನೆಗಳಡಿ ಎಷ್ಟು ಮನೆಗಳು ಪೂರ್ಣಗೊಂಡಿವೆ ಮತ್ತು ಎಷ್ಟು ಮನೆಗಳು ಬಾಕಿ ಉಳಿದಿವೆ ;

(ಇ) ರಾಜ್ಯದಲ್ಲಿ ಕೊಳಗೇರಿ ಅಭಿವೃದ್ಧಿ ಯೋಜನೆಗಳ ಪ್ರಗತಿ ಏನು ; ಹಾಗೂ ಕಳೆದ ಮೂರು ವರ್ಷಗಳಲ್ಲಿ ಬೀದಿ ವ್ಯಾಪರಿಗಳಿಗೆ ಪರವಾನಗಿ ನೀಡಿರುವ ಸಂಖ್ಯೆ ಎಷ್ಟು ?

## ಹಜ್ ಯಾತ್ರಿಗಳಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೬ (೧೫೬೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಕರ್ನಾಟಕದಿಂದ ಹಜ್‌ಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; ಇದರಲ್ಲಿ ಆಯ್ಕೆಯಾದವರ ಸಂಖ್ಯೆ ಎಷ್ಟು ; ತಿರಸ್ಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಿಂದ ಯಾತ್ರಿಗಳನ್ನು ಹಜ್ ಯಾತ್ರೆಗೆ ಆಯ್ಕೆ ಮಾಡುವ ಪ್ರಕ್ರಿಯೆಯಲ್ಲಿ ಹಿರಿಯ ನಾಗರೀಕರಿಗೆ ಮತ್ತು ಮಹಿಳೆಯರಿಗೆ ವಿಶೇಷ ಕೋಟಾ ಅಥವಾ ಮೀಸಲಾತಿ ಇದೆಯೇ ; ಇದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಈ ಕೋಟಾ/ಮೀಸಲಾತಿಯಡಿ ಎಷ್ಟು ಯಾತ್ರಿಗಳು ಉಪಯೋಗ ಪಡೆದುಕೊಂಡಿದ್ದಾರೆ ;

(ಇ) ೨೦೨೫–೨೬ನೇ ಸಾಲಿನಲ್ಲಿ ಹಜ್ ಯಾತ್ರೆಗೆ ಒಟ್ಟು ಖರ್ಚಾದ ಬಾಬ್ತು ಎಷ್ಟು ; ಈ ಕಳೆದ ಮೂರು ವರ್ಷಗಳಲ್ಲಿ ಖರ್ಚಾದ ಮೊತ್ತವೆಷ್ಟು ; (ವರ್ಷವಾರು ವಿವರ ನೀಡುವುದು) ; ರಾಜ್ಯ ಸರ್ಕಾರದಿಂದ ನೀಡುವ ಆರ್ಥಿಕ ನೆರವು/ಸೌಲಭ್ಯಗಳು ಯಾವುವು ; ಹಜ್ ಯಾತ್ರಾರ್ಥಿಗಳಿಗೆ ವಿಮೆ ಸೌಲಭ್ಯಗಳು ಇದೆಯೇ ? (ವಿವರ ನೀಡುವುದು)

## ಅಕ್ರಮ ಗಣಿಗಾರಿಕೆ ಪ್ರಕರಣಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೭ (೧೫೬೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಪ್ರಕರಣಗಳ ಸಂಖ್ಯೆ ಎಷ್ಟು : (ಜಿಲ್ಲಾವಾರು ಮಾಹಿತಿ ನೀಡುವುದು) ; ಈ ಅಕ್ರಮ ಗಣಿಗಾರಿಕೆಯಿಂದ ಸರ್ಕಾರಕ್ಕೆ ಉಂಟಾದ ನಷ್ಟದ ಅಂದಾಜು ಎಷ್ಟು :

(ಆ) ಗಣಿಗಾರಿಕೆ ಪರಿಣಾಮದಿಂದ ಆರೋಗ್ಯ ಸಮಸ್ಯೆಗೊಳಗಾದ ಗ್ರಾಮಗಳಿಗೆ ವಿಶೇಷ ಆರೋಗ್ಯ ಶಿಬಿರಗಳಿದೆಯೇ ; ಬಳ್ಳಾರಿ, ಕೊಪ್ಪಳ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಅಕ್ರಮ ಗಣಿಗಾರಿಕೆ ನಿಯಂತ್ರಣಕ್ಕೆ ಕೈಗೊಂಡ ಕ್ರಮಗಳು ಯಾವುವು ;

(ಇ) ಗಣಿಗಾರಿಕೆ ಗುತ್ತಿಗೆ ನವೀಕರಣ ಪ್ರಕ್ರಿಯೆಯಲ್ಲಿ ಸರಾಸರಿ ಎಷ್ಟು ಸಮಯ ತೆಗೆದುಕೊಳ್ಳುತ್ತದೆ ? (ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೮ (೧೪೭೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ ೨೦೨೩ನೇ ಸಾಲಿನಿಂದ ೨೦೨೫ನೇ ಸಾಲಿನವರೆಗೆ ರಸ್ತೆ ಹಾಗೂ ಸೇತುವೆಗಳ ನಿರ್ಮಾಣ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಆ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹಿತ ಕಾಮಗಾರಿಗಳನ್ನು ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಇ) ಕುಂಠಿತಗೊಂಡಿರುವ ಮೂಲಭೂತ ಸೌಕರ್ಯಗಳನ್ನು ಪೂರ್ಣಗೊಳಿಸಲು ಸರ್ಕಾರಕ್ಕೆ ಎಷ್ಟು ಸಮಯಾವಕಾಶ ಬೇಕಾಗುತ್ತದೆ ?

## ರಾಜ್ಯದಲ್ಲಿ ರೈಲ್ವೆ ಯೋಜನೆಗಳು ನೆನೆಗುದಿಗೆ ಬಿದ್ದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೯ (೧೫೫೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈಲ್ವೆ ಮೂಲಸೌಕರ್ಯ ವಿಸ್ತರಣೆಯ ಕನಸಿಗೆ ಭೂ–ಸ್ವಾಧೀನ ಪ್ರಕ್ರಿಯೆ ವಿಳಂಬದ ಕಾರಣದಿಂದಾಗಿ ಸಕಾಲದಲ್ಲಿ ಜಮೀನು ಹಸ್ತಾಂತರವಾಗದೆ ಹಲವು ಪ್ರಮುಖ ಯೋಜನೆಗಳು ದೀರ್ಘಕಾಲದಿಂದ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈಗಾಗಲೇ ಆಡಳಿತಾತ್ಮಕ ಅನುಮೋದನೆಗೊಂಡು ರಾಜ್ಯದಲ್ಲಿ ಅನುಷ್ಠಾನಗೊಳ್ಳಲು ಸಿದ್ದವಾಗಿರುವ ರೈಲ್ವೆ ಯೋಜನೆಗಳು ಎಷ್ಟು ಮತ್ತು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಆಡಳಿತಾತ್ಮಕ ಅನುಮೋದನೆಗೊಂಡಿರುವ ರೈಲ್ವೆ ಯೋಜನೆಗಳ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಸುಬ್ರಹ್ಮಣ್ಯ–ಧರ್ಮಸ್ಥಳ ರೈಲು ಮಾರ್ಗದ ಸರ್ವೆ ಈಗಾಗಲೇ ಪೂರ್ಣಗೊಂಡಿದೆಯೇ ಹಾಗೂ ಆರಂಭಿಕ ಕಾಮಗಾರಿಗಳಿಗೆ ಬೇಕಾಗಿರುವ ಅನುದಾನವನ್ನು ಒದಗಿಸಲಾಗಿದೆಯೇ ; ಈ ಯೋಜನೆಯ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ ;

(ಉ) ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವ ರಾಜ್ಯಕ್ಕೆ ಸಂಬಂಧಿಸಿದ ಎಲ್ಲಾ ರೈಲ್ವೆ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ ?

## ಹವಾಮಾನ ಬದಲಾವಣೆಯಿಂದ ತೋಟಗಾರಿಕೆ ಬೆಳೆಗಳ ನಕಾರಾತ್ಮಕ ಪರಿಣಾಮ ಉಂಟಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೦ (೧೫೫೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಪಶ್ಚಿಮಘಟ್ಟ ಹಾಗೂ ಕರಾವಳಿ ಪ್ರದೇಶಗಳಲ್ಲಿ ಹವಾಮಾನ ಬದಲಾವಣೆ ಕಾರಣಗಳಿಂದಾಗಿ ಅಡಿಕೆ, ಮೆಣಸು, ತೆಂಗು ಸೇರಿದಂತೆ ಬಹುತೇಕ ತೋಟಗಾರಿಕಾ ಬೆಳೆಗಳು ಹಾನಿಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹವಾಮಾನ ಬದಲಾವಣೆಯು ತೋಟಗಾರಿಕಾ ಬೆಳೆಗಳ ಜೀವನ ಚಕ್ರದ ಎಲ್ಲಾ ಹಂತಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದ್ದು, ಈ ಬಗ್ಗೆ ಸಮಗ್ರ ಅಧ್ಯಯನದ ತುರ್ತು ಅಗತ್ಯವಿದ್ದರೂ ಸರ್ಕಾರ ಈ ಕುರಿತು ಇದುವರೆಗೆ ಯಾವುದೇ ಕ್ರಮ ವಹಿಸದೇ ಇರಲು ಕಾರಣಗಳೇನು ;

(ಇ) ಪಶ್ಚಿಮಘಟ್ಟ ಹಾಗೂ ಕರಾವಳಿ ಪ್ರದೇಶಗಳಲ್ಲಿ ಹವಾಮಾನ ಬದಲಾವಣೆಯಿಂದ ತೋಟಗಾರಿಕಾ ಬೆಳೆಗಳ ಉತ್ಪಾದನೆ

ಗಣನೀಯವಾಗಿ ಕುಸಿದಿದ್ದು, ಈ ಸಮಸ್ಯೆಗೆ ಪರಿಹಾರ ದೊರಕಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ಹಾಗೂ ಸಾಧಿಸಿರುವ ಪ್ರಗತಿಯ ವಿವರಗಳೇನು ;

(ಈ) ಯಾವ ಕಾಲಮಿತಿಯೊಳಗೆ, ಹವಾಮಾನ ಬದಲಾವಣೆಯಿಂದ ಆಗುತ್ತಿರುವ ಸದರಿ ನಕಾರಾತ್ಮಕ ಗಂಭೀರ ಪರಿಣಾಮಗಳ ಕುರಿತು ಸಮಗ್ರ ಅಧ್ಯಯನ ನಡೆಸಿ ಸೂಕ್ತ ಹಾಗೂ ಅಗತ್ಯ ಪರಿಹಾರೋಪಾಯಗಳನ್ನು ಅನುಷ್ಠಾನಕ್ಕೆ ತರಲಾಗುವುದು ?

## ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕಟ್ಟಡ ಪರವಾನಗಿ ನೀಡದೆ ಇರುವುದರಿಂದ ಆಗಿರುವ ತೊಂದರೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೧ (೧೫೫೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ ೨೦೧೭ರ ಪೂರ್ವದ ಭೂ ಪರಿವರ್ತಿತ ಹಾಗೂ ನಮೂನೆ–೩ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ದೀರ್ಘಕಾಲದಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ ೨೦೧೭ರ ಪೂರ್ವದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತಿತ ಆಸ್ತಿಗಳನ್ನು ಹೊಂದಿರುವವರಿಗೆ

ಮಹಾ ಯೋಜನೆಯ ನಿಯಮಗಳನ್ನು ಅನ್ವಯಿಸದೆ, ಈ ಹಿಂದಿನಂತೆ ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಕಟ್ಟಡ ಪರವಾನಗಿಯನ್ನು ನೀಡಲು ಸರ್ಕಾರ ಇದುವರೆಗೆ ಯಾವುದೇ ಕ್ರಮವಹಿಸದೇ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಪರಿಹರಿಸಲಾಗುವುದು ಹಾಗೂ ಸಾರ್ವಜನಿಕರಿಗೆ ದೀರ್ಘಕಾಲದಿಂದ ಆಗುತ್ತಿರುವ ತೊಂದರೆಗೆ ಶಾಶ್ವತ ಪರಿಹಾರ ಒದಗಿಸಲಾಗುವುದು ?

## ಗೌರವಧನ ಹೆಚ್ಚಳ ಮಾಡುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೨ (೧೫೫೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ)ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಸ್ತುತ ನೀಡುತ್ತಿರುವ ಗೌರವಧನದ ವಿವರಗಳೇನು ;

(ಆ) ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ವಹಿಸಲಾಗುವುದು ?

## ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೩೫೩ (೧೫೩೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ೨೦೨೫-೨೬ನೇ ಸಾಲಿನ ಆಯವ್ಯಯ ಎಷ್ಟು ; ಈ ಅಯವ್ಯಯದಲ್ಲಿ ಯಾವ ಯಾವ ಯೋಜನೆಗಳನ್ನು ರಾಜ್ಯದಲ್ಲಿ ಕೈಗೊಳ್ಳಲು ಮಂಡಳಿಯು ತೀರ್ಮಾನಿಸಿತ್ತು ; ಈ ಆಯವ್ಯಯದ ಅನ್ವಯ ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಕಾಮಗಾರಿಗಳು ಹಾಗೂ ಮುಕ್ತಾಯಗೊಂಡಿರುವ ಕಾಮಗಾರಿಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಸದರಿ ಮಂಡಳಿಯ ಕ್ಯಾಪಿಟಲ್ ಅಕೌಂಟ್ ಮೂಲಕ ರೆವೆನ್ಯೂ ಅಕೌಂಟ್ ಮೂಲಕ ಮತ್ತು ಡೆಟ್/ಡೆಪಾಸಿಟ್ ಮೂಲಕ ಸಂಪನ್ಮೂಲಗಳನ್ನು ಕ್ರೋಢೀಕರಣ ಮಾಡಿರುತ್ತದೆಯೇ ; (ವಿವರ ಒದಗಿಸುವುದು)

(ಇ) ಮಂಡಳಿಯಲ್ಲಿ ನಡೆಯುತ್ತಿರುವ ಕೇಂದ್ರ ಪ್ರಾಯೋಜಿತ ಯೋಜನೆಗಳು, ರಾಜ್ಯ ಸರ್ಕಾರದ ಪ್ರಾಯೋಜಿತ ಯೋಜನೆಗಳು ಮತ್ತು ಡಿ.ಸಿ ಯೋಜನೆಗಳು ಯಾವುವು ; (ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಮಂಡಳಿಯು ಸಾಲದ ರೂಪದಲ್ಲಿ ಯಾವ ಯಾವ ಸಂಸ್ಥೆಯಿಂದ ಸಾಲಗಳನ್ನು ಪಡೆದಿರುತ್ತದೆ ; (ಮೂರು ವರ್ಷಗಳ ಮಾಹಿತಿಯನ್ನು ಒದಗಿಸುವುದು) ಮತ್ತು ಮಂಡಳಿಯು ತನ್ನ ಎಷ್ಟು ಹಣವನ್ನು ಯಾವ ಯಾವ ಹಣಕಾಸು ಸಂಸ್ಥೆಗಳಲ್ಲಿ ಠೇವಣಿ ಇರಿಸಿದೆ ; (ವಿವರಗಳನ್ನು ಒದಗಿಸುವುದು)

(ಉ) ಮಂಡಳಿ ವತಿಯಿಂದ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಯೋಜನೆಯಡಿಯಲ್ಲಿ ಕಾಮಗಾರಿಗಳು ನಡೆಯುತ್ತಿವೆ ; ಸದರಿ ಕಾಮಗಾರಿಗೆ ಅನುಮೋದನೆ ಗೊಂಡಿರುವ ಮೊತ್ತವೆಷ್ಟು ; ಬಿಡುಗಡೆಯಾಗಿರುವ ಮೊತ್ತವೆಷ್ಟು ; ಬಾಕಿ ಇರುವ ಮೊತ್ತವೆಷ್ಟು ;

ಎಷ್ಟು ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲಾಗಿದೆ ? (ಕಾಮಗಾರಿಗಳ ಸಹಿತವಾಗಿ ವಿವರಗಳನ್ನು ಒದಗಿಸುವುದು)

## ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೩೫೪ (೧೫೩೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಒಟ್ಟು ಬಂಡವಾಳ ಎಷ್ಟು ; ಇದರಲ್ಲಿ ರಾಜ್ಯ ಸರ್ಕಾರದ ಪಾಲು ಎಷ್ಟು ಮತ್ತು ಸಾಲದ ರೂಪದಲ್ಲಿ ಇರುವ ಬಂಡವಾಳ ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ಹೊಂದಿರುವ ಒಟ್ಟು ಆಸ್ತಿ ಎಷ್ಟು ; ರಾಜ್ಯದ ಯಾವ ಯಾವ ಭಾಗದಲ್ಲಿ ನಿಗಮವು ತನ್ನ ಆಸ್ತಿಯನ್ನು ಹೊಂದಿರುತ್ತದೆ ; ರಾಜ್ಯದ ಹೊರಗೆ ನಿಗಮವು ಆಸ್ತಿಯನ್ನು ಹೊಂದಿದೆಯೇ ; ಇದರ ಪ್ರಸ್ತುತ ಮಾರುಕಟ್ಟೆ ಮೌಲ್ಯದ ಸಹಿತವಾಗಿ ಇವುಗಳ ಪೂರ್ಣ ವಿವರಗಳನ್ನು ಒದಗಿಸುವುದು ;

(ಇ) ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದಡಿಯಲ್ಲಿ ರಾಜ್ಯದಲ್ಲಿ ಎಷ್ಟು ಸ್ಥಳೀಯ ಮತ್ತು ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನು ಹೊಂದಲಾಗಿದೆ; ಉದ್ದೇಶಿತ ವಿಮಾಣ ನಿಲ್ದಾಣಗಳು ಎಷ್ಟು ; ಪಿಪಿಪಿ ಆಧಾರದ ಮೇಲೆ ಗೊಂದಲವಾಗಿರುವ ವಿಮಾನ ನಿಲ್ದಾಣಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಡಿಯಲ್ಲಿ ರಾಜ್ಯವು ಹೊಂದಿರುವ ಬಂದರುಗಳು ಎಷ್ಟು ; ಇವುಗಳಲ್ಲಿ ಪಿಪಿಪಿ ಅಡಿಯಲ್ಲಿ ಇರುವ ಬಂದರುಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮವು ಖಾಸಗಿ ಜೊತೆಯಲ್ಲಿ ಎಷ್ಟು ಜಂಟಿ ಉದ್ಯಮಗಳನ್ನು ಹೊಂದಿರುತ್ತದೆ ಈ ಜಂಟಿ ಉದ್ಯಮಗಳಲ್ಲಿ ನಿಗಮಕ್ಕೆ ಬಂದಿರುವ ನಿಗಮವು ಮಾಡಿರುವ ಹೂಡಿಕೆ ಎಷ್ಟು ; ಖಾಸಗಿ ಹೂಡಿಕೆ ಎಷ್ಟು ; ಜಂಟಿ ಉದ್ಯಮಗಳಲ್ಲಿ ನಿಗಮಕ್ಕೆ ಬರುತ್ತಿರುವ ವಾರ್ಷಿಕ ಲಾಭವೆಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಊ) ನಿಗಮವು ತನ್ನ ಹೂಡಿಕೆಯ ಮೂಲಗಳಿಸುತ್ತಿರುವ ವಾರ್ಷಿಕ ಆದಾಯವೆಷ್ಟು ? (ಕಳೆದ ಹತ್ತು ವರ್ಷಗಳಲ್ಲಿ ಸಂಸ್ಥೆಗೆ ಬಂದಿರುವ ಲಾಭ ಮತ್ತು ನಷ್ಟದ ವಿವರಗಳನ್ನು ಒದಗಿಸುವುದು)

## ಕರ್ನಾಟಕ ರಾಜ್ಯ ಖನಿಜ ನಿಗಮದ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೩೫೫ (೧೫೩೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಕರ್ನಾಟಕ ಸ್ಟೇಟ್ ಕಾರ್ಪೊರೇಷನ್ ಲಿಮಿಟೆಡ್ ಸಾರ್ವಜನಿಕ ಉದ್ದಿಮೆ ಮೇಲೆ ಹೂಡಿರುವ ಬಂಡವಾಳ ಎಷ್ಟು ; ಯಾವ ಸಾಲಿನಲ್ಲಿ ಈ ಉದ್ದಿಮೆಯನ್ನು ಪ್ರಾರಂಭಿಸಲಾಯಿತು ; ಇದುವರೆಗೂ, ಈ ಸಂಸ್ಥೆಯಿಂದ ಬಂದಿರುವ ಲಾಭವೆಷ್ಟು ; (ವಿವರಗಳನ್ನು ಒದಗಿಸುವುದು)

(ಆ) ರಾಜ್ಯ ಖನಿಜಗಳ ನಿಗಮ ಯಾವ ಯಾವ ರೀತಿಯ ಖನಿಜ ಸಂಪತ್ತಿನ ಸಂಬಂಧ ಗಣಿಗಾರಿಕೆಯನ್ನು ಮಾಡುತ್ತಿದೆ ; ಯಾವ ಯಾವ ಗಣಿಗಾರಿಕೆಯಲ್ಲಿ ನಿಗಮಕ್ಕೆ ಬರುತ್ತಿರುವ ವಾರ್ಷಿಕ ಲಾಭವೆಷ್ಟು ; (ಕಳೆದ ೦೩ ಸಾಲಿನ ವಿವರಗಳನ್ನು ಒದಗಿಸುವುದು)

(ಇ) ಕಳೆದ ಐದು ವರ್ಷಗಳಲ್ಲಿ ರಾಜ್ಯ ಖನಿಜಗಳ ನಿಗಮವು ಸಿ.ಎಸ್.ಆರ್ ಯೋಜನೆಯ ಅಡಿಯಲ್ಲಿ ಎಷ್ಟು ಅನುದಾನಗಳನ್ನು ಯಾವ ಯಾವ ಸಂಸ್ಥೆಗಳಿಗೆ ನೀಡಿರುತ್ತದೆ ; (ಖನಿಜ ನಿಗಮದ ಸಿ.ಎಸ್.ಆರ್ ಸಮಿತಿಯ ವಿವರಗಳ ಸಹಿತವಾಗಿ ವಿತರಣೆ ಮಾಡಿರುವ ನಿಧಿಯ ವಿವರಗಳನ್ನು ಒದಗಿಸುವುದು)

(ಈ) ನಿಗಮವು ರಾಜ್ಯದಲ್ಲಿ ಹೊಂದಿರುವ ಕ್ವಾರಿಗಳು ಎಷ್ಟು ; ಈ ಕ್ವಾರಿಗಳಿಂದ ನಿಗಮಕ್ಕೆ ಬಂದಿರುವ ಲಾಭವೆಷ್ಟು ; (೦೩ ವರ್ಷಗಳ ಅಂಕಿ-ಅಂಶಗಳನ್ನು ನೀಡುವುದು) ಮತ್ತು ಯಾವ ಯಾವ ಕ್ವಾರಿಗಳು ಎಷ್ಟು ವಿಸ್ತೀರ್ಣವನ್ನು ಹೊಂದಿರುತ್ತದೆ ಮತ್ತು ಇದರ ಮೌಲ್ಯವೆಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಖನಿಜಗಳ ನಿಗಮದ ಆರ್ಥಿಕ ಚಟುವಟಿಕೆಗಳ ಸಂಬಂಧ ಆಡಿಟ್ ವರದಿಯನ್ನು ನೀಡಲಾಗಿದೆಯೇ ; (ನೀಡಿದ್ದಲ್ಲಿ, ಆಡಿಟ್ ವರದಿಯ ಪ್ರತಿಗಳನ್ನು ಒದಗಿಸುವುದು)

(ಊ) ರಾಜ್ಯ ಖನಿಜಗಳ ನಿಗಮದ ಮೇಲೆ ರಾಜ್ಯ ಸರ್ಕಾರ ಹೂಡಿರುವ ಬಂಡವಾಳವೆಷ್ಟು ; ಈ ನಿಗಮದಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಲಾಭವೆಷ್ಟು ; (ಕಳೆದ ೦೩ ವರ್ಷಗಳ ಅಂಕಿ-ಅಂಶಗಳನ್ನು ಒದಗಿಸುವುದು)

(ಋ) ರಾಜ್ಯ ಖನಿಜ ನಿಗಮದ ಅಡಿಯಲ್ಲಿ ಎಷ್ಟು ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ಇದರಲ್ಲಿ ಖಾಯಂ ನೌಕರರು ಎಷ್ಟು ಮತ್ತು ಗುತ್ತಿಗೆ ಆಧಾರದ ಮೇಲೆ ಇರುವ ನೌಕರರು ಎಷ್ಟು ? (ನಿಗಮದ ಅಧಿಕಾರಿಗಳ ನೌಕರರ ಪೂರ್ಣ ವಿವರಗಳನ್ನು ಒದಗಿಸುವುದು)

# ಕರ್ನಾಟಕ ಗಣಿ ಪರಿಸರ ಪುನಃಶ್ಚೇತನ ನಿಗಮ ನಿಯಮಿತದ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೩೫೬ (೧೫೩೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗಣಿ ಪರಿಸರ ಪುನಃಶ್ಚೇತನ ನಿಗಮವು ಯಾವಾಗ ರಚನೆ ಆಗಿರುತ್ತದೆ ; ಅಲ್ಲಿಂದ ಇಲ್ಲಿಯವರೆಗೆ ನಿಗಮದ ಕಾರ್ಯ ಮತ್ತು ಆರ್ಥಿಕ ಚಟುವಟಿಕೆಗಳ ಕುರಿತು ಆಡಿಟ್ ಮಾಡಲಾಗಿರುತ್ತದೆಯೇ ; (ಮಾಡಿದ್ದಲ್ಲಿ, ವಿವರಗಳನ್ನು ಒದಗಿಸುವುದು)

(ಆ) ಸದರಿ ನಿಗಮದ ಅಡಿಯಲ್ಲಿ ರಾಜ್ಯದಲ್ಲಿ ಇಲ್ಲಿಯವರೆಗೂ ಎಷ್ಟು ಹಣ ಭಾದಿತ ಪ್ರದೇಶಗಳ ಪುನಃಶ್ಚೇತನ ಬಿಡುಗಡೆ ಮಾಡಲಾಗಿರುತ್ತದೆ ; (ತಾಲ್ಲೂಕುವಾರು ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ಸದರಿ ನಿಗಮದ ಅಡಿಯಲ್ಲಿ ಭಾದಿತ ಪ್ರದೇಶಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿರುತ್ತದೆ ಇಲ್ಲಿಯವರೆಗೆ ಯಾವ ಯಾವ ಇಲಾಖೆಗೆ ನಿಯಮಾನುಸಾರ ಗಣಿ ಭಾದಿತ ಪ್ರದೇಶಗಳಿಗೆ ಹಣ ಬಿಡುಗಡೆ ಮಾಡಲಾಗಿರುತ್ತದೆ ; (ಇಲಾಖಾವಾರು ವಿವರಗಳನ್ನು ಒದಗಿಸುವುದು)

(ಈ) ಈ ನಿಗಮದಲ್ಲಿ ರಾಜ್ಯ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆಯೇ ಮತ್ತು ಅವರ ಕಾರ್ಯಗಳೇನು ; (ನೇಮಿಸಿದ್ದಲ್ಲಿ ಅವರ ಪೂರ್ಣ ವಿವರಗಳನ್ನು ನೀಡುವುದು)

(ಉ) ನಿಗಮವು ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಗಣಿಭಾದಿತ ಪ್ರದೇಶಗಳ ಗ್ರಾಮಗಳ ಪಟ್ಟಿಯನ್ನು ಹೊಂದಿದೆಯೇ ; ಹೊಂದಿದ್ದಲ್ಲಿ, ಗ್ರಾಮಗಳ ವಿವರ ಮತ್ತು ಇಲ್ಲಿಯವರೆಗೆ ಸದರಿ

ಗ್ರಾಮಗಳಿಗೆ ಬಿಡುಗಡೆಯಾಗಿರುವ ಅನುದಾನ ಕಾಮಗಾರಿಗಳ ವಿವರ ಮತ್ತು ವೆಚ್ಚವಾಗಿರುವ ಹಣ ಎಷ್ಟು ; (ಇದರ ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಊ) ನಿಗಮವು ಗಣಿ ಭಾದಿತ ಪ್ರದೇಶಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಡಿಪಿಆರ್ ತಯಾರಿಕೆಗೆ ಅನುಸರಿಸುವ ಮಾರ್ಗಸೂಚನೆಗಳು ಯಾವುವು ; (ಮಾರ್ಗಸೂಚಿಗಳ ವಿವರಗಳನ್ನು ಒದಗಿಸುವುದು)

(ಋ) ನಿಗಮದ ಅಡಿಯಲ್ಲಿ ಸ್ಪೆಷಲ್ ಪರ್ಪಸ್ ವಹಿಕಲ್ ಯೋಜನೆ ಅಡಿಯಲ್ಲಿ ಎಷ್ಟು ಹಣವನ್ನು ಪ್ರದೇಶದಲ್ಲಿ ವಿನಿಯೋಗಿಸಲಾಗಿದೆ ? (ಯೋಜನೆ ಸಹಿತವಾಗಿ ಪೂರ್ಣ ವಿವರಗಳನ್ನು ಒದಗಿಸುವುದು)

## ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೩೫೭ (೧೫೩೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ ಅಡಿಯಲ್ಲಿ ಬರುವ ಕಬ್ಬು ನಿಯಂತ್ರಣ ಮಂಡಳಿ ಎಷ್ಟು ಸಭೆಗಳನ್ನು ನಡೆಸಿರುತ್ತದೆ ; (ಸಭೆಯ ನಿರ್ಣಯಗಳ ಪ್ರತಿಯನ್ನು ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಕಬ್ಬು ಹಾಗೂ ಸಕ್ಕರೆ ನಿರ್ದೇಶನಾಲಯವು ಸದರಿ ಕಬ್ಬು ಬೆಳೆಗಾರರಿಂದ ಎಷ್ಟು ಕಬ್ಬು ಖರೀದಿ ಮಾಡಿರುತ್ತದೆ ; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಇ) ರಾಜ್ಯವು ಎಷ್ಟು ಕಬ್ಬಿನ ತಳಿಗಳನ್ನು ಹೊಂದಿರುತ್ತದೆ; ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ತಳಿಯ ಕಬ್ಬನ್ನು ರೈತರು ಬೆಳೆಯುತ್ತಿದ್ದಾರೆ ; ಯಾವ ತಳಿಯ ಮೂಲಕ ಹೆಚ್ಚು ಕಬ್ಬು ಬೆಳೆ ತೆಗೆಯಲು ಸಾಧ್ಯವಿರುತ್ತದೆ ; ಕಬ್ಬು ತಳಿಗಳನ್ನು ಪ್ರೋತ್ಸಾಹಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಈ ನಿರ್ದೇಶನಾಲಯದಲ್ಲಿ ರಾಜ್ಯ ಸರ್ಕಾರ ತೊಡಗಿಸಿರುವ ಬಂಡವಾಳವೆಷ್ಟು ; ನಿರ್ದೇಶನಾಲಯದ ಮೂಲಕ ನಡೆಸಿರುವ ಆರ್ಥಿಕ ಚಟುವಟಿಕೆಗಳು ಏನು ; ಇದರಿಂದ ನಿರ್ದೇಶನಾಲಯಕ್ಕೆ ಬಂದಿರುವ ಆರ್ಥಿಕ ಲಾಭ ಎಷ್ಟು ; (ವಿವರಗಳನ್ನು ಒದಗಿಸುವುದು)

(ಉ) ಸದರಿ ನಿರ್ದೇಶನಾಲಯವು ಪ್ರತಿ ಆರ್ಥಿಕ ವರ್ಷದಲ್ಲಿ ಆಡಿಟ್ ವ್ಯಾಪ್ತಿಗೆ ಒಳಪಟ್ಟಿರುತ್ತದೆಯೇ ; (ಒಳಪಟ್ಟಿದ್ದಲ್ಲಿ ಕಳೆದ ಮೂರು ವರ್ಷಗಳ ಆಡಿಟ್ ವರದಿಯ ಪ್ರತಿಯನ್ನು ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ನಿರ್ದೇಶನಾಲಯವು ಸಕ್ಕರೆ ಕಬ್ಬಿನ ಸಿಪ್ಪೆ, ಕಾಕಂಬಿ ಎಷ್ಟು ಆದಾಯವನ್ನು ಪಡೆದಿರುತ್ತದೆ ; (ಪೂರ್ಣ ವಿವರಗಳನ್ನು ಒದಗಿಸುವುದು)

(ಋ) ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳು ಎಷ್ಟು ; ಇವುಗಳಲ್ಲಿ ಸರ್ಕಾರಿ, ಖಾಸಗಿ ಮತ್ತು ಸಹಕಾರಿ ಸಕ್ಕರೆ ಕಾರ್ಖಾನೆಗಳು ಎಷ್ಟು ; ಇವುಗಳಲ್ಲಿ ಎಷ್ಟು ಲಾಭದಲ್ಲಿ ಇರುತ್ತವೆ ಮತ್ತು ಎಷ್ಟು ನಷ್ಟದಲ್ಲಿ ಇರುತ್ತವೆ ಸಕ್ಕರೆ ಕಾರ್ಖಾನೆಗಳು ಕಬ್ಬು ಪೂರೈಸಿದ ರೈತರಿಗೆ ನೀಡಬೇಕಾದ/ಪಾವತಿಸಬೇಕಾದ ಬಾಕಿ ಹಣ ಎಷ್ಟು ? (ಜಿಲ್ಲಾವಾರು ಪೂರ್ಣ ಮಾಹಿತಿಯನ್ನು ಒದಗಿಸುವುದು)

## ಕೆಐಎಡಿಬಿ ಸ್ವಾಧೀನ ಪಡಿಸಿಕೊಂಡಿರುವ ಭೂಮಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೩೫೮ (೧೫೧೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೆಐಎಡಿಬಿ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂಮಿಯನ್ನು ಸ್ವಾಧೀನಪಡಿಸಿಕೊಂಡ ರೈತರಿಗೆ ಪರಿಹಾರ ಪಾವತಿಯಲ್ಲಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನ್ಯಾಯಾಲಯದ ಆದೇಶಗಳ ಪ್ರಕಾರ ಇನ್ನೂ ಎಷ್ಟು ಭೂಮಾಲೀಕರು ಹೆಚ್ಚಿನ ಪರಿಹಾರಕ್ಕಾಗಿ ಕಾಯುತ್ತಿದ್ದಾರೆ ; (ಮಾಹಿತಿ ನೀಡುವುದು)

(ಈ) ಸ್ವಾಧೀನಪಡಿಸಿಕೊಳ್ಳುವ ಮೊದಲು ರೈತರಿಗೆ ಸ್ಪಷ್ಟ ಮಾಹಿತಿ ಮತ್ತು ಒಪ್ಪಿಗೆಯನ್ನು ನೀಡಲಾಗುತ್ತಿದೆಯೇ ;

(ಉ) KIADB ಸ್ವಾಧೀನಪಡಿಸಿಕೊಂಡ ಎಷ್ಟು ಭೂಮಿಗಳು ಕಾನೂನು ವಿವಾದ ಅಥವಾ ನ್ಯಾಯಾಲಯದ ತಡೆಯಾಜ್ಞೆಯಲ್ಲಿವೇ ;

(ಊ) KIADB ಭೂ ವಿವರಗಳಿಗಾಗಿ ಒಂದೇ ಆನ್‌ಲೈನ್ ಪೋರ್ಟಲ್‌ನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ನಿರುದ್ಯೋಗವನ್ನು ಪರಿಹರಿಸುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೩೫೯ (೧೫೧೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಪ್ರಮುಖ ಕಾರಣಗಳೇನು ;

(ಆ) ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿನ ನಿರುದ್ಯೋಗವನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಗಳು ಮತ್ತು ದೊಡ್ಡ ಕೈಗಾರಿಕೆಗಳು ಹೇಗೆ ವಿಭಿನ್ನವಾಗಿ ಕೊಡುಗೆ ನೀಡುತ್ತಿವೆ ; (ಮಾಹಿತಿ ನೀಡುವುದು)

(ಈ) ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರವು ಸ್ಥಳೀಯ ಉದ್ಯೋಗದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಉ) ರಾಜ್ಯದಲ್ಲಿ ಹೆಚ್ಚಿನ ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮತ್ತು ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## MSME ವಲಯದಲ್ಲಿ ಉದ್ಯೋಗಾವಕಾಶಗಳನ್ನು ಒದಗಿಸುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೩೬೦ (೧೫೧೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರುದ್ಯೋಗಿ ಯುವಕರೊಂದಿಗೆ MSME ಗಳನ್ನು ಸಂಪರ್ಕಿಸಲು ರಾಜ್ಯ ಸರ್ಕಾರ ಸ್ಮಾರ್ಟ್ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳನ್ನು ಹೇಗೆ ಬಳಸುತ್ತಿದೆ ;

(ಆ) ನೈಜ–ಸಮಯದ ಉದ್ಯೋಗ ಹೊಂದಾಣಿಕೆಗಾಗಿ ಏಕೀಕೃತ "MSME ಉದ್ಯೋಗ ಪೋರ್ಟಲ್" ಅನ್ನು ರಚಿಸಲು ಸರ್ಕಾರದಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಇ) MSME ವಲಯದಲ್ಲಿ ಪರಿಶೀಲಿಸಿದ ಉದ್ಯೋಗಾವಕಾಶಗಳನ್ನು ಒದಗಿಸುವಲ್ಲಿ ಪ್ರಸ್ತುತ ಸರ್ಕಾರಿ ಮೊಬೈಲ್ ಅಪ್ಲಿಕೇಶನ್‌ಗಳು ಎಷ್ಟು ಪರಿಣಾಮಕಾರಿಯಾಗಿವೆ ;

(ಈ) MSME ಗಳಿಗೆ ಸಂಬಂಧಿಸಿದ ಡಿಜಿಟಲ್ ಉದ್ಯೋಗ ವೇದಿಕೆಗಳಿಂದ ಗ್ರಾಮೀಣ ಯುವಕರು ಸಮರ್ಪಕವಾಗಿ ಪ್ರಯೋಜನ ಪಡೆಯುತ್ತಿಲ್ಲ ಎಂಬುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಉ) ಉದ್ಯೋಗ ಸಂಬಂಧಿತ ಅಪ್ಲಿಕೇಶನ್‌ಗಳಲ್ಲಿ ಪಾರದರ್ಶತೆಯನ್ನು ಸರ್ಕಾರ ಹೇಗೆ ಖಚಿತಪಡಿಸಿಕೊಳ್ಳುತ್ತಿದೆ ಮತ್ತು ನಕಲಿ ಉದ್ಯೋಗ ಪಟ್ಟಿಗಳನ್ನು ಹೇಗೆ ತಡೆಯುತ್ತಿದೆ ;

(ಊ) ಸರ್ಕಾರಿ ಸ್ಮಾರ್ಟ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಸ್ಥಳೀಯ ನಿರುದ್ಯೋಗಿ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವ MSME ಗಳಿಗೆ ಯಾವ ಪ್ರೋತ್ಸಾಹ ಧನಗಳನ್ನು ನೀಡಲಾಗುತ್ತದೆ ?

## ಅಡಿಕೆ ಬೆಳೆಗೆ ಎಲೆ ಚುಕ್ಕೆ ಹಾಗೂ ಕೊಳೆ ರೋಗದಿಂದ ನಷ್ಟಕ್ಕೊಳಗಾಗಿರುವ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೧ (೧೪೯೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಡಿಕೆ ಬೆಳೆಗ ಎಲೆಚುಕ್ಕೆ ಕೊಳೆರೋಗದಿಂದ ಅಡಿಕೆಯ ಫಸಲು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಎಕರೆ ಅಡಿಕೆ ಬೆಳೆ ರೋಗಕ್ಕೆ ತುತ್ತಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಡಿಕೆ ಬೆಳೆ ರೋಗ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಅಡಿಕೆ ಬೆಳೆ ರೋಗದಿಂದ ನಷ್ಟಕ್ಕೊಳಗಾಗಿರುವ ರೈತರಿಗೆ ಸರ್ಕಾರ ಪರಿಹಾರ ನೀಡಿದೆಯೇ ; ನೀಡಿರುವ ಪರಿಹಾರ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪರಿಹಾರ ಹಣ ನೀಡದಿದ್ದಲ್ಲಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೆ, ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲಾಗುವುದು ? (ವಿವರ ಒದಗಿಸುವುದು)

## ಸಣ್ಣ ಕೈಗಾರಿಕೆಗಳಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹಗಳ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೨ (೧೪೯೭) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಣ್ಣ ಕೈಗಾರಿಕೆಗಳಿವೆ ; ಈ ಸಣ್ಣ ಕೈಗಾರಿಕೆಗಳಿಂದ ಎಷ್ಟು ಉದ್ಯೋಗ ಸೃಷ್ಟಿಯಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸಣ್ಣ ಕೈಗಾರಿಕೆಗಳ ಆರಂಭಕ್ಕೆ ಮತ್ತು ಅವುಗಳ ಬೆಳವಣಿಗೆಗೆ ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡುತ್ತಿದೆ ;

(ಇ) ಸಣ್ಣ ಕೈಗಾರಿಕೆಗಳಿಗೆ ಹಂಚಿಕೆ ಮಾಡಲು ಎಷ್ಟು ಭೂಮಿ ಲಭ್ಯವಿದೆ ; ಈವರೆಗೆ ಹಂಚಿಕೆ ಮಾಡಿರುವ ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸಣ್ಣ ಕೈಗಾರಿಕೆಗಳಿಗೆ ಹಂಚಿಕೆ ಮಾಡಲು ಎಷ್ಟು ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಸ್ವಾಧೀನಪಡಿಸಿಕೊಂಡ ಜಮೀನಿಗೆ ಪೂರ್ಣ ಪ್ರಮಾಣದಲ್ಲಿ ಭೂ ಪರಿಹಾರ ಪಾವತಿ ಮಾಡಲಾಗಿದೆಯೇ ? (ಜಿಲ್ಲಾವಾರು ವಿವರ ನೀಡುವುದು)

## ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೩ (೧೪೯೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಮಹಾಯೋಜನೆ ವ್ಯಾಪ್ತಿಯನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಯಾವ ಯಾವ ಪ್ರದೇಶಗಳನ್ನು ಹೊಸದಾಗಿ ಮಹಾಯೋಜನೆ ವ್ಯಾಪ್ತಿಗೆ ಸೇರಿಸಲು ಉದ್ದೇಶಿಸಲಾಗಿದೆ ;

(ಇ) ಯಾವಾಗ ಹೊಸ ಮಹಾಯೋಜನೆಯನ್ನು ಅಳವಡಿಸಿಕೊಳ್ಳಲಾಗುವುದು ;

(ಈ) ಹಾಲಿ ಇರುವ ಮಹಾಯೋಜನೆಯ ಪರಿಷ್ಕೃತ ಮಹಾಯೋಜನೆಯನ್ನು ಅಂತಿಮಗೊಳಿಸಲಾಗಿದೆಯೇ ?

## ಗಣಿಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೪ (೧೪೫೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವೆಲ್ಲಾ ರೀತಿಯ ಗಣಿಗಾರಿಕೆಗಳು ನಡೆಯುತ್ತಿವೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಗಣಿಗಾರಿಕೆಯಿಂದ ಸರ್ಕಾರಕ್ಕೆ ಬರುತ್ತಿರುವ ರಾಜಧನದ ಮೊತ್ತವೆಷ್ಟು ; (ಖನಿಜವಾರು ವಿವರ ನೀಡುವುದು)

(ಇ) ಗಣಿಗಾರಿಕೆ ನಡೆಸುವವರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು ? (ವಿವರ ನೀಡುವುದು)

## SC/ST ಉದ್ಯಮಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೫ (೧೪೫೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಎಷ್ಟು ಎಸ್.ಸಿ ಮತ್ತು ಎಸ್.ಟಿ ಉದ್ಯಮಿಗಳಿಗೆ ಉದ್ಯಮ ಸ್ಥಾಪಿಸಲು ಸರ್ಕಾರದ ವತಿಯಿಂದ ಜಮೀನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಎಸ್.ಸಿ ಮತ್ತು ಎಸ್.ಟಿ ಉದ್ಯಮಿಗಳಿಗೆ ರಿಯಾಯಿತಿ ದರದಲ್ಲಿ ಜಮೀನು ನೀಡಲಾಗುತ್ತಿದೆಯೇ ; ಎಷ್ಟು ಪ್ರಮಾಣದ ರಿಯಾಯಿತಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಎಸ್.ಸಿ ಮತ್ತು ಎಸ್.ಟಿ ಉದ್ಯಮಿಗಳು ಎಷ್ಟು ಜನರಿಗೆ ಉದ್ಯೋಗ ನೀಡಿರುತ್ತಾರೆ ; (ವಿವರ ನೀಡುವುದು)

(ಈ) ಎಸ್.ಸಿ ಮತ್ತು ಎಸ್.ಟಿ ಉದ್ಯಮಿಗಳಿಗೆ ಯಾವ ಯಾವ ರೀತಿಯ ಪ್ರೋತ್ಸಾಹ ಸರ್ಕಾರದ ವತಿಯಿಂದ ನೀಡಲಾಗುತ್ತಿದೆ ? (ವಿವರ ನೀಡುವುದು)

## ಹಲಾಲ್ ಪ್ರಮಾಣ ಪತ್ರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೬ (೧೪೫೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಮಾಂಸ ಮಾರಾಟ ಮಾಡುವ ಹಲಾಲ್ ಪ್ರಮಾಣ ಪತ್ರ ನೀಡುತ್ತಿದೆಯೇ ; ಇಲ್ಲವಾದಲ್ಲಿ, ಈ ಪ್ರಮಾಣ ಪತ್ರವನ್ನು ಯಾರು ನೀಡುತ್ತಾರೆ ; ಪ್ರಮಾಣ ಪತ್ರವನ್ನು ನೀಡಲು ಸರ್ಕಾರವು ಯಾವ ಸಂಸ್ಥೆಗೆ ಅನುಮತಿ ನೀಡಿದೆ: ಇದಕ್ಕಾಗಿ ಸರ್ಕಾರವು ಪಡೆಯುವ ಶುಲ್ಕ ಎಷ್ಟು ;

(ಆ) ನಿಯಮ ಬಾಹಿರವಾಗಿ ಮತ್ತು ಅನಧಿಕೃತವಾಗಿ ಹಲಾಲ್ ಪ್ರಮಾಣ ಪತ್ರವನ್ನು ಪಡೆಯುತ್ತಿರುವುದರಿಂದ ಈ ಪ್ರಮಾಣ ಪತ್ರಕ್ಕೆ ಸರ್ಕಾರ ಯಾವುದೇ ಮಾನ್ಯತೆ ಇಲ್ಲವಾದಂತೆ ಆಗುವುದಿಲ್ಲವೇ ; ಇದರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಪಶು ಸಂಗೋಪನೆ ಇಲಾಖಾ ವತಿಯಿಂದ ಮಾಂಸ ಮಾರಾಟ ಮಳಿಗೆಗಳಿಗೆ ಅನುಮತಿ ನೀಡುವಾಗ, ಯಾವ ರೀತಿಯ ನಿಬಂಧನೆಗಳನ್ನು ಹಾಕಲಾಗುತ್ತದೆ ; (ವಿವರ ನೀಡುವುದು)

(ಈ) ಮಾಂಸ ಮಾರಾಟ ಮಾಡುವ ವ್ಯಾಪಾರಸ್ಥರು ಯಾವ ಯಾವ ಪ್ರಮಾಣ ಪತ್ರಗಳನ್ನು ಹೊಂದಿರಬೇಕಾಗುತ್ತದೆ ; ಮಾಂಸ ಮಾರಾಟ ಮಾಡುವ ಅಂಗಡಿಗಳು ಹಲಾಲ್ ಪ್ರಮಾಣ ಪತ್ರವನ್ನು ಹೊಂದಿರುವುದು ಕಡ್ಡಾಯವೇ ; ಈ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ ಅಮೃತ್ ೨.೦ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೭ (೧೪೮೬) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಮೃತ್ ೨.೦ ಯೋಜನೆಯಡಿಯಲ್ಲಿ ಆಯ್ಕೆಯಾದ ನಗರ ಸ್ಥಳೀಯ ಸಂಸ್ಥೆಗಳಾವುವು ; ಸದರಿ ಸಂಸ್ಥೆಗಳಿಗೆ ೨೦೨೩ ರಿಂದ ಇಲ್ಲಿಯವರೆಗೆ ಬಿಡುಗಡೆಯಾದ ಮೊತ್ತವೆಷ್ಟು ; ರಾಜ್ಯ ಮತ್ತು ಕೇಂದ್ರದ ಅನುದಾನ ಪ್ರತ್ಯೇಕವಾಗಿ ನೀಡುವುದು ; ಸದರಿ ಅನುದಾನವನ್ನು ಎಲ್ಲಿ ಮತ್ತು ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ಜಿಲ್ಲಾವಾರು ಮತ್ತು ಸ್ಥಳೀಯ ಸಂಸ್ಥೆವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳಾವುವು ; ಪ್ರಾರಂಭವಾಗದ, ಚಾಲ್ತಿ ಹಾಗೂ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆಗಳೆಷ್ಟು ; ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು ; ಸ್ಥಳೀಯ ಸಂಸ್ಥೆವಾರು, ಹಂತವಾರು ಪ್ರತ್ಯೇಕ ಮಾಹಿತಿ ನೀಡುವುದು ;

(ಇ) ಬಿಡುಗಡೆಗೆ ಬಾಕಿ ಇರುವ ಅನುದಾನವೆಷ್ಟು ; ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡಲಾಗುವುದು ?

## ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳು ತಮ್ಮ Logo ವನ್ನು ಬದಲಾಯಿಸಿಕೊಳ್ಳಬೇಕಾದರೆ ಪಾಲಿಸಬೇಕಾದ ನಿಯಮ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೩೬೮ (೧೫೫೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳು ತಮ್ಮ Logo ವನ್ನು ಬದಲಾವಣೆ ಮಾಡಲು ಇಚ್ಛಿಸಿದರೆ ಅನುಸರಿಸಬೇಕಾದ ನೀತಿ ನಿಯಮಗಳು/ಕಾರ್ಯವಿಧಾನಗಳು ಯಾವುವು ;

(ಆ) ಮಹಾನಗರ ಪಾಲಿಕೆಗಳು ತಮ್ಮ Logo ಬದಲಾವಣೆಯನ್ನು ತಮ್ಮ ಆಡಳಿತ ಮಂಡಳಿಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆಯೇ ಬದಲಾಯಿಸಬಹುದೇ ಅಥವಾ ಸರ್ಕಾರದ ಅನುಮೋದನೆ ಪಡೆಯುವುದು ಕಡ್ಡಾಯವೇ ;

(ಇ) ಕೇವಲ ಆಡಳಿತ ಮಂಡಳಿಯ ಸಾಮಾನ್ಯ ಸಭೆಯಲ್ಲಿ Logo ಬದಲಾವಣೆ ನಿರ್ಣಯ ಕೈಗೊಂಡು ಅದನ್ನು ಉಪಯೋಗಿಸಿದರೆ ಅದನ್ನು ಸರ್ಕಾರ ಮಾನ್ಯ ಮಾಡುತ್ತದೆಯೇ, ಅದನ್ನು ಕಾನೂನು ಸಮ್ಮತ ಎಂದು ನಿರ್ಧರಿಸಬಹುದೇ ;

(ಈ) ಸರ್ಕಾರದ ಅನುಮತಿಯನ್ನು ಪಡೆಯದೇ Logo ವನ್ನು ಬದಲಾಯಿಸಿ ಬಳಸಿದರೆ ಅಂತಹ ಪ್ರಕರಣಗಳಲ್ಲಿ ಪಾಲಿಕೆ ಅಧಿಕಾರಿಗಳ ಮೇಲೆ ಕೈಗೊಳ್ಳಬಹುದಾದ ಕ್ರಮಗಳೇನು ; ಈ ಕಾನೂನು ಸಮ್ಮತವಲ್ಲದ ಪ್ರಕ್ರಿಯೆಗೆ ಯಾರಾರು ಹೊಣೆಗಾರರಾಗಿರುತ್ತಾರೆ ?

## ಕಲಬುರಗಿ ಮಹಾನಗರ ಪಾಲಿಕೆಯಿಂದ ಎಲ್ಲಾ ವಾರ್ಡ್‌ಗಳಿಗೆ ಹಂಚಿಕೆಯಾದ ಅನುದಾನದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೩೬೯ (೧೫೫೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಮಹಾನಗರ ಪಾಲಿಕೆಯಿಂದ ಪ್ರತಿ ವಾರ್ಡ್‌ಗೆ ನೀಡಿದ ಅನುದಾನ ಎಷ್ಟು; ಯಾವ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಎಷ್ಟೆಷ್ಟು ಅನುದಾನವನ್ನು ಹಂಚಿಕೆ ಮಾಡಲಾಗಿದೆ ;

(ಆ) ಈ ಅನುದಾನಗಳಲ್ಲಿ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ನೀಡಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ವಾರ್ಡ್‌ವಾರು ಎಲ್ಲಾ ಕಾಮಗಾರಿಗಳ ವಿಸ್ತೃತ ಯೋಜನಾ ವರದಿ (DPR) ಪ್ರತಿಗಳನ್ನು ಒದಗಿಸುವುದು ;

(ಇ) ಈ ಎಲ್ಲಾ ಕಾಮಗಾರಿಗಳಿಗೆ ಬಿಡುಗಡೆಯಾದ ಹಾಗೂ ಬಿಡುಗಡೆಗೆ ಬಾಕಿ ಉಳಿದಿರುವ ಅನುದಾನ ಎಷ್ಟು ; ಕಾಮಗಾರಿವಾರು ನಿಗದಿಪಡಿಸಿದ ಅವಧಿ ಸಮೇತ ಮಾಹಿತಿ ನೀಡುವುದು ಮತ್ತು ಪ್ರಸ್ತುತ ಈ ಕಾಮಗಾರಿಗಳು ಯಾವ ಹಂತದಲ್ಲಿವೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಹಾಗೂ ಅರೆ ಸರ್ಕಾರಿ ನಿವೇಶನಗಳಿಗೆ ನೀಡುವ ಕಟ್ಟಡ ಪರವಾನಗಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೩೭೦ (೧೫೫೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಅರೆ, ಸರ್ಕಾರಿ ನಿವೇಶನಗಳಲ್ಲಿ ಕಟ್ಟಡ ನಿರ್ಮಿಸಲು ಕಟ್ಟಡ ಪರವಾನಗಿ ಪಡೆಯುವುದು ಕಡ್ಡಾಯವೇ ;

(ಆ) ಸರ್ಕಾರಿ, ಅರೆ ಸರ್ಕಾರಿ ಹಾಗೂ ಖಾಸಗಿ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡುವಾಗ ಅನುಸರಿಸಬೇಕಾದ ನಿಯಮ ಹಾಗೂ ಮಾನದಂಡಗಳೇನು ; (ವಿವರವಾಗಿ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಲಬುರಗಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ವಿವಿಧ ಇಲಾಖೆಗಳ ಸರ್ಕಾರಿ ಕಟ್ಟಡಗಳ ಸಂಖ್ಯೆ ಎಷ್ಟು ; ಅವು ಯಾವುವು; ಈ ಸರ್ಕಾರಿ ಕಟ್ಟಡಗಳಿಗೆ ನೀಡಿರುವ ಕಟ್ಟಡ ಪರವಾನಗಿಗಳ ಮತ್ತು ಅನುಮೋದಿತ ನಕ್ಷೆಗಳ ಪ್ರತಿಗಳನ್ನು ನೀಡುವುದು ?

## ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿ ಶೌಚಾಲಯಗಳ ದುಸ್ಥಿತಿ ಮತ್ತು ಬಯಲು ಶೌಚಾಲಯ ಮುಕ್ತಿ ಮಾಡುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೩೭೧ (೧೪೬೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ಸರ್ಕಾರದ ಹಣದಿಂದ ನಿರ್ಮಿಸಿದ ಎಷ್ಟು ಶೌಚಾಲಯಗಳಿವೆ ; ಕೋಟಿಗಟ್ಟಲೆ ಹಣ ವೆಚ್ಚ ಮಾಡಿ ನಗರಸಭೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಿರ್ಲಕ್ಷತನದಿಂದ ಶೌಚಾಲಯಗಳು ಬಳಕೆಯಾಗದೆ ಬೀಗ ಹಾಕಿರುವುದು ನಿಜವೆ ;

(ಆ) ಶಹಾಬಾದ ಪಟ್ಟಣದ ನಗರಸಭೆ ಸರ್ಕಾರದ ಹಣದಿಂದ ನಿರ್ಮಿಸಿದ ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡದಿರುವುದರಿಂದ ಜನರು ಬಯಲು ಶೌಚಾಲಯಕ್ಕೆ ಹೋಗುತ್ತಿರುವುದು ನಿಜವೆ ;

(ಇ) ಸರ್ಕಾರದ ಹಣದಿಂದ ನಿರ್ಮಾಣವಾದ ಶೌಚಾಲಯಗಳನ್ನು ಸಾರ್ವಜನಿಕರು ಬಳಸಲು ಬೇಕಾದ ನಿರ್ವಹಣೆ ಮತ್ತು ಜಾಗೃತಿ ಮೂಡಿಸಲು ಕೈಗೊಳ್ಳಬಹುದಾದ ಕ್ರಮಗಳೇನು ;

(ಈ) ಸ್ವಚ್ಛ ಭಾರತ ಅಭಿಯನ ನಡೆಯುತ್ತಿರುವ ಸಂದರ್ಭದಲ್ಲಿ ಇನ್ನು ಬಯಲು ಶೌಚಾಲಯಕ್ಕೆ ಅವಕಾಶ ಮಾಡುತ್ತಿರುವುದರಿಂದ ಪಟ್ಟಣದ ಸ್ವಚ್ಛತೆ ಮತ್ತು ಜನರ ಆರೋಗ್ಯಕ್ಕೆ ಧಕ್ಕೆಯಾಗುವುದಿಲ್ಲವೆ ;

(ಉ) ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡದೆ ಸರ್ಕಾರದ ಹಣ ದುಂದು ವೆಚ್ಚವಾಗಿರುವುದಕ್ಕೆ ಶಹಾಬಾದ ಪಟ್ಟಣದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳುವುದೇ ?

## ಕೆಪಿಎಸ್‌ಸಿ ಮೂಲಕ ಆಯ್ಕೆಯಾದ 'ವರ್ಕ್ ಇನ್ಸ್‌ಪೆಕ್ಟರ್' ಹುದ್ದೆಗಳ ಮರುನಾಮಕರಣ ಮತ್ತು ಕರ್ತವ್ಯ ನಿರ್ವಹಣೆಯಲ್ಲಿ ಗೊಂದಲಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೨ (೧೫೩೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (BBMP) ಸೇರಿದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈ ಹಿಂದೆ ಕೆಪಿಎಸ್‌ಸಿ ಮೂಲಕ 'ಗ್ರೂಪ್–ಸಿ' (Group-c ) ದರ್ಜೆಯ 'ವರ್ಕ್

ಇನ್ಸ್‌ಪೆಕ್ಟರ್’ (Work Inspector) ಹುದ್ದೆಗಳಿಗೆ ನೇಮಕಗೊಂಡಿದ್ದ ನೌಕರರನ್ನು ೨೦೧೧ರಲ್ಲಿ ‘ಅಸಿಸ್ಟೆಂಟ್ ವಾಟರ್ ಸಪ್ಲೈ ಆಪರೇಟರ್’ (Assistant Water Supply Operator) ಎಂದು ಮರುನಾಮಕರಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ನಗರಸಭೆ ಮತ್ತು ಪುರಸಭೆಗಳಲ್ಲಿ ಈ ಹುದ್ದೆಗಳನ್ನು ’ಆಪರೇಟರ್ ಹುದ್ದೆಗಳೆಂದು ವರ್ಗೀಕರಿಸಲಾಗಿದ್ದರೂ, ವಾಸ್ತವದಲ್ಲಿ ಈ ನೌಕರರನ್ನು ‘ವಾಲ್‌ಮೆನ್’ (Valveman)ಎಂಬ ‘ಗ್ರೂಪ್–ಡಿ’ ಸಮಾನಂತರ ಹುದ್ದೆಗಳೆಂದು ಪರಿಗಣಿಸಿ ಕೆಳಹಂತದ ಕೆಲಸಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೆಪಿಎಸ್‌ಸಿ ಮೂಲಕ ನಿರ್ದಿಷ್ಟ ತಾಂತ್ರಿಕ ವಿದ್ಯಾರ್ಹತೆಯ ಆಧಾರದ ಮೇಲೆ ‘ಗ್ರೂಪ್–ಸಿ ದರ್ಜೆಗೆ ಆಯ್ಕೆಯಾದ ನೌಕರರಿಗೆ, ಅವರ ಅರ್ಹತೆಗೆ ಸಂಬಂಧಿಸಿದ ‘ಗ್ರೂಪ್–ಡಿ’ ದರ್ಜೆಯ ದೈಹಿಕ ಶ್ರಮದ ಕೆಲಸಗಳನ್ನು ನೀಡುತ್ತಿರುವುದು ಸೇವಾ ನಿಯಮಗಳ ಉಲ್ಲಂಘನೆಯಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ಮರುನಾಮಕಾರಣಗೊಂಡ ಈ ಹುದ್ದೆಗಳ ಪದನಾಮದಿಂದಾಗಿ ನೌಕರರ ಸಾಮಾಜಿಕ ಗೌರವ ಮತ್ತು ಸೇವಾ ಹಿರಿತನಕ್ಕೆ ಧಕ್ಕೆಯಾಗುತ್ತಿರುವುದು ನಿಜವೇ ; ಈ ಹುದ್ದೆಗಳನ್ನು ಪುನಃ ಈ ಹಿಂದಿನಂತೆ ‘ವರ್ಕ್ ಇನ್ಸ್‌ಪೆಕ್ಟರ್’ಎಂದೇ ಪರಿಗಣಿಸಿ ಅವರ ದರ್ಜೆಗೆ ಅನುಗುಣವಾದ ತಾಂತ್ರಿಕ ಕಾರ್ಯಗಳನ್ನು ಮಾತ್ರ ವಹಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಕೆಪಿಎಸ್‌ಸಿ ಯಿಂದ ಆಯ್ಕೆ ಹೊಂದಿರುವ ನೌಕರರು ನಗರ ಸ್ಥಳೀಯ ಸಂಸ್ಥೆಗಳಲ್ಲಿ ತಾಂತ್ರಿಕ ಹುದ್ದೆಯಿಂದ ತಾಂತ್ರಿಕೇತರ ಹುದ್ದೆಗೆ ಬದಲಾವಣೆ ಮಾಡಿಕೊಳ್ಳಲು ಅವಕಾಶವಿದೆಯೇ ?

# ಕಲಬುರಗಿ ಮಹಾನಗರ ಪಾಲಿಕೆ ಮತ್ತು ಜಿಲ್ಲೆಯ ಇತರ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕ ಆರೋಗ್ಯ ಹಾಗೂ ನೈರ್ಮಲ್ಯ ನಿರ್ವಹಣೆಯ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೩ (೧೫೩೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆಯ ೫೫ ವಾರ್ಡ್‌ಗಳಲ್ಲಿ ಹಾಗೂ ಜಿಲ್ಲೆಯ ಇತರ ನಗರಸಭೆಗಳಲ್ಲಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ನಿಯಮಿತವಾಗಿ ಫಾಗಿಂಗ್ (Fogging) ಮಾಡಲು ಅಗತ್ಯವಿರುವ ಯಂತ್ರೋಪಕರಣಗಳು ಲಭ್ಯವಿದೆಯೇ ; ಪ್ರತಿ ವಾರ್ಡ್‌ಗೆ ಎಷ್ಟು ದಿನಗಳಿಗೊಮ್ಮೆ ಫಾಗಿಂಗ್ ಮಾಡಲು ಕ್ರಮ ಕೈಗೊಳ್ಳಲಾಗಿದೆ ;

(ಆ) ಕಲಬುರಗಿ ನಗರದ ಹೊರವಲಯದಲ್ಲಿರುವ ಕಸ ವಿಲೇವಾರಿ ಘಟಕಗಳಲ್ಲಿ ಸಂಗ್ರಹವಾಗಿರುವ ಹಳೆಯ ಕಸದ ರಾಶಿಯನ್ನು (Legacy Waste) ವಿಲೇವಾರಿ ಮಾಡಲು ಬಯೋ–ಮೈನಿಂಗ್ (Bio- mining) ಅಥವಾ ಇನ್ನ್ಯಾವುದೇ ವೈಜ್ಞಾನಿಕ ಪ್ರಕ್ರಿಯೆಯನ್ನು ಜಾರಿಗೆ ತರಲಾಗಿದೆಯೇ ; ಜಿಲ್ಲೆಯ ಒಟ್ಟು ಎಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕಗಳು (SWM Plants) ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಇ) ಕಲಬುರಗಿ ನಗರದ ಸಾರ್ವಜನಿಕ ಶೌಚಾಲಯಗಳ ನಿರ್ವಹಣೆಯು ಸಮರ್ಪಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವುಗಳ ನೈರ್ಮಲ್ಯ ಕಾಪಾಡಲು ಮತ್ತು "ಸ್ವಚ್ಛ ಸರ್ವೇಕ್ಷಣಾ" ಅಭಿಯಾನದಡಿ ಸುಧಾರಣೆ ತರಲು ಸರ್ಕಾರ ನೀಡುತ್ತಿರುವ ಅನುದಾನವೆಷ್ಟು ;

(ಈ) ಜಿಲ್ಲೆಯಲ್ಲಿ ಡೆಂಗ್ಯೂ, ಮಲೇರಿಯಾ ಮತ್ತು ಚಿಕನ್ ಗುನ್ಯಾದಂತಹ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಹಮ್ಮಿಕೊಂಡಿರುವ ವಿಶೇಷ ಅಭಿಯಾನಗಳು ಯಾವುವು ; ಕಳೆದ ಒಂದು ವರ್ಷದಲ್ಲಿ ವರದಿಯಾದ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಕಲಬುರಗಿ ನಗರವನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸುತ್ತಿರುವುದರಿಂದ, ನಗರದ ಆರೋಗ್ಯ ಮತ್ತು ನೈರ್ಮಲ್ಯದ ಮೇಲೆ ನಿಗಾ ಇರಿಸಲು (Monitoring) ಯಾವುದೇ ಡಿಜಿಟಲ್ ಕಮಾಂಡ್ ಸೆಂಟರ್ ಅಥವಾ ಕೇಂದ್ರೀಕೃತ ವ್ಯವಸ್ಥೆಯನ್ನು ಸ್ಥಾಪಿಸಲಾಗಿದೆಯೇ ?

## ಕಲಬುರಗಿ ಜಿಲ್ಲೆಯ ಕಬ್ಬು ಬೆಳೆಗಾರರ ಸಮಸ್ಯೆಗಳು, ಉತ್ಪಾದಕತೆ ಮತ್ತು ಆಧುನಿಕ ನೀರಾವರಿ ಪದ್ಧತಿಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೪ (೧೫೩೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ಕಬ್ಬು ಬೆಳೆಯುತ್ತಿರುವ ಒಟ್ಟು ಹೆಕ್ಟೇರ್ ವಿಸ್ತೀರ್ಣ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಕಬ್ಬು ಬೆಳೆಯುವ ಪ್ರದೇಶ ಮತ್ತು ಇಳುವರಿಯಲ್ಲಿ (Yield per hectare) ಕಂಡು ಬಂದಿರುವ ಬದಲಾವಣೆಗಳೇನು ;

(ಇ) ಜಿಲ್ಲೆಯ ರೈತರಿಗೆ ಅಧಿಕ ಇಳುವರಿ ಮತ್ತು ಹೆಚ್ಚಿನ ಸಕ್ಕರೆ ಅಂಶ (High Recovery) ನೀಡುವ ಸುಧಾರಿತ ಕಬ್ಬು ತಳಿಗಳನ್ನು (ಉದಾ: Co–೮೬೦೩೨, Co–೧೧೦೧೫) ಪೂರೈಸಲು ಸರ್ಕಾರ ಅಥವಾ ಸಕ್ಕರೆ ಕಾರ್ಖಾನೆಗಳು ಕೈಗೊಂಡಿರುವ ಕ್ರಮಗಳೇನು ;

(ಈ) ಕಬ್ಬಿನ ಉತ್ಪಾದಕತೆ ಹೆಚ್ಚಿಸಲು ಮತ್ತು ವೈಜ್ಞಾನಿಕ ಬೇಸಾಯ ಪದ್ಧತಿಗಳ ಬಗ್ಗೆ ರೈತರಿಗೆ ಕೃಷಿ ವಿಜ್ಞಾನ ಕೇಂದ್ರಗಳ (KVK) ಮೂಲಕ ವಿಶೇಷ ತಾಂತ್ರಿಕ ತರಬೇತಿ ಹಾಗೂ ಪ್ರಾತ್ಯಕ್ಷಿಕೆಗಳನ್ನು ಹಮ್ಮಿಕೊಳ್ಳಲಾಗಿದೆಯೇ ;

(ಉ) ಈ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಸಕ್ಕರೆ ಕಾರ್ಖಾನೆಗಳ ಕಬ್ಬು ತೂಕ ಮಾಪನ ಕೇಂದ್ರಗಳಲ್ಲಿ (WEIGH BRIDGES) ಪಾರದರ್ಶಕತೆ ಕಾಯ್ದುಕೊಳ್ಳಲು ಮತ್ತು ತೂಕದಲ್ಲಿ ಆಗುವ ಅವ್ಯವಹಾರ ತಡೆಗಟ್ಟಲು 'ಡಿಜಿಟಲ್ ವೇ–ಬ್ರಿಡ್ಜ್' ಅಳವಡಿಕೆ ಕಡ್ಡಾಯಗೊಳಿಸಲಾಗಿದೆಯೇ ;

(ಊ) ಜಿಲ್ಲೆಯ ಅರೆ–ಶುಷ್ಕ ಹವಾಮಾನದಲ್ಲಿ ನೀರಿನ ಮಿತಬಳಕೆಗಾಗಿ ಕಬ್ಬು ಬೆಳೆಗೆ "ಹನಿ ನೀರಾವರಿ" (Drip Irrigation) ಅಳವಡಿಸಿಕೊಳ್ಳಲು ಸರ್ಕಾರ ನೀಡುತ್ತಿರುವ ವಿಶೇಷ ಸಹಾಯಧನ ಎಷ್ಟು ಮತ್ತು ಈ ಯೋಜನೆಯಡಿ ಬಾಕಿ ಇರುವ ಅರ್ಜಿಗಳ ವಿಲೇವಾರಿಗೆ ಕೈಗೊಂಡ ಕ್ರಮಗಳೇನು ?

## ಹೆಲಿಕಾಪ್ಟರ್ ಜೋಡಣಾ ಘಟಕ ಸ್ಥಾಪಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೭೫ (೧೫೪೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ವೇಮಗಲ್ ಹೋಬಳಿಯಲ್ಲಿ ಖಾಸಗಿ ವಲಯದ ಹೆಲಿಕಾಪ್ಟರ್ ಜೋಡಣಾ ಘಟಕ ಸ್ಥಾಪಿಸುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇದಕ್ಕಾಗಿ ಎಷ್ಟು ಎಕರೆ ಪ್ರದೇಶದ ಜಾಗದ ಅವಶ್ಯಕತೆ ಇದೆ ; ಅವಶ್ಯಕತೆ ಇರುವಂತೆ ಜಮೀನನ್ನು ಈಗಾಗಲೇ ಸ್ವಾಧೀನಪಡಿಸಿಕೊಳ್ಳಲಾಗಿದೆಯೇ ;

(ಇ) ಏರ್‌ಬಸ್–ಟಾಟಾ ಕಂಪನಿ ಜಂಟಿ ಯೋಜನೆಯ ಈ ಘಟಕಕ್ಕೆ ಸರ್ಕಾರದಿಂದ ನೀಡಲಾಗುತ್ತಿರುವ ಸಹಕಾರ ಏನು ; ಸಬ್ಸಿಡಿ ದರದಲ್ಲಿ ಭೂಮಿ, ಬಂಡವಾಳ ಹೂಡಿಕೆ ನೆರವುಗಳನ್ನು ನೀಡಲಾಗಿದೆಯೇ ;

(ಈ) ನೋಂದಣಿ ಶುಲ್ಕದ ಸೌಲಭ್ಯ, ವಿದ್ಯುತ್ ದರದಲ್ಲಿ ವಿನಾಯಿತಿ ನೀಡಲು ಸರ್ಕಾರ ಒಪ್ಪಿಗೆ ಸೂಚಿಸಿದೆಯೇ ;

(ಉ) ಈ ಘಟಕ ಪ್ರಾರಂಭಗೊಂಡಲ್ಲಿ ಸ್ಥಳೀಯ ಯುವಕರಿಗೆ ಉದ್ಯೋಗ ನೀಡಲು ಪ್ರಾಮುಖ್ಯತೆ ನೀಡಲಾಗುವುದೇ ?

## ಸಾರ್ವಜನಿಕ ವಲಯ ಉದ್ಯಮಗಳ ಆರ್ಥಿಕ ಸಂಕಷ್ಟದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೭೬ (೧೫೭೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಆಡಳಿತದಲ್ಲಿ ಬರುವ ಸಾರ್ವಜನಿಕ ವಲಯ ಉದ್ಯಮಗಳು ಯಾವುವು ; (ವಿವರ ಒದಗಿಸುವುದು)

(ಆ) ಇದರಲ್ಲಿ ಆರ್ಥಿಕ ಸಂಕಷ್ಟದಲ್ಲಿರುವ ಉದ್ಯಮಗಳು ಯಾವುವು ಮತ್ತು ನಷ್ಟದ ಪ್ರಮಾಣ ಎಷ್ಟು ಹಾಗೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

(ಇ) ಆರ್ಥಿಕ ಸಂಕಷ್ಟದಲ್ಲಿರುವ ಉದ್ಯಮಗಳನ್ನು ಪುನಃಶ್ಚೇತನಗೊಳಿಸಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಸಾರ್ವಜನಿಕ ವಲಯ ಉದ್ಯಮಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಅಕ್ರಮವಾಗಿ ನಿರ್ಮಿಸಿರುವ ಬಡಾವಣೆಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೭ (೧೪೭೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಬಡಾವಣೆಗಳೆಷ್ಟು ; ಈ ಬಡಾವಣೆಯಲ್ಲಿ ನಕ್ಷೆ ಮಂಜೂರಾತಿ ಇಲ್ಲದೆ ನಿರ್ಮಿಸಿರುವ ಕಟ್ಟಡಗಳ ಸರ್ವೆ ನಡೆದಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣಗೊಳ್ಳುತ್ತಿರುವ ಅಕ್ರಮ ಬಡಾವಣೆಗಳಲ್ಲಿ ನಿವೇಶನಗಳ ಮಾರಾಟ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸಂಪೂರ್ಣ ಮಾಹಿತಿ ನೀಡುವುದು ?

## ಕೆ.ಐ.ಎ.ಡಿ.ಬಿ ಕೈಗಾರಿಕೆಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೮ (೧೪೭೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ವ್ಯಾಪ್ತಿಗೆ ಬರುವ ಕೆ.ಐ.ಎ.ಡಿ.ಬಿ.ಯ ಕೈಗಾರಿಕಾ ಪ್ರದೇಶಗಳು ಎಷ್ಟಿವೆ ; ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಸದರಿ ಪ್ರದೇಶಗಳಲ್ಲಿ ಶೋಷಿತ ವರ್ಗದವರಿಗೆ ಮತ್ತು ಹಿಂದುಳಿದ ವರ್ಗದವರಿಗೆ ಎಷ್ಟು ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡಿದೆ ; ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸದರಿ ಕೈಗಾರಿಕೆ ಪ್ರದೇಶಗಳಲ್ಲಿ ಎಸ್.ಸಿ./ಎಸ್.ಟಿ ಶೋಷಿತ ವರ್ಗ ಮತ್ತು ಹಿಂದುಳಿದ ವರ್ಗಗಳಿಗೆ ಮತ್ತು ಸಾಮಾನ್ಯ ವರ್ಗದವರಿಗೆ ಜಾಗವನ್ನು ಹಂಚಿಕೆ ಮಾಡಲು ನಿಗದಿಪಡಿಸಿದ ದರಗಳ ಮಾನದಂಡಗಳೇನು ; ವರ್ಗವಾರು ಹಂಚಿಕೆ ದರಗಳ ಮಾಹಿತಿ ನೀಡುವುದು ;

(ಈ) ಹಂಚಿಕೆಯಾಗದಿರುವ ಕೈಗಾರಿಕೆ ನಿವೇಶನಗಳ ಸಂಖ್ಯೆ ಎಷ್ಟು; ತಾಲ್ಲೂಕುವಾರು ಮಾಹಿತಿ ನೀಡುವುದು ?

## ಕೆ.ಐ.ಎ.ಡಿ.ಬಿ ಇಂದ ಭೂಸ್ವಾಧೀನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೯ (೧೪೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿ ಯಿಂದ ಎಷ್ಟು ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ ; ಗ್ರಾಮವಾರು ಮಾಹಿತಿ ನೀಡುವುದು ;

(ಆ) ಕೆ.ಐ.ಎ.ಡಿ.ಬಿ ಯ ಕೈಗಾರಿಕೆ ಉದ್ದೇಶಕ್ಕಾಗಿ ಭೂಮಿಯನ್ನು ವಶಪಡಿಸಿಕೊಳ್ಳುವಾಗ ಅನುಸರಿಸುವ ಮಾನದಂಡಗಳೇನು ; ಸಂಪೂರ್ಣ ವಿವರ ನೀಡುವುದು ;

(ಇ) ಸ್ವಾಧೀನಕ್ಕೂ ಮುನ್ನ ಕೈಗಾರಿಕೆಗಳಿಗೆ ಎಷ್ಟು ಭೂಮಿ ಅಗತ್ಯವಿದೆ ಎಂಬುದರ ಬಗ್ಗೆ ಅಧ್ಯಯನ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಅಧ್ಯಯನ ನಡೆಸಿದೆಯೇ ; (ವರದಿಯ ವಿವರಗಳನ್ನು ನೀಡುವುದು)

(ಈ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿ ಅಂತಿಮ ಅಧಿಸೂಚನೆ ಹೊರಡಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಮೆಗಾ ಜವಳಿ ಪಾರ್ಕ್ ನಿರ್ಮಾಣದ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೦ (೧೪೭೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಒಂದು ಲಕ್ಷ ಉದ್ಯೋಗ ಸೃಷ್ಟಿಯೊಂದಿಗೆ ೨೦೨೩ ರಲ್ಲಿ ಅಡಿಗಲ್ಲು ಹಾಕಿರುವ ಮೆಗಾ ಜವಳಿ ಪಾರ್ಕ್ ಕಾಮಗಾರಿ ಇದುವರೆವಿಗೂ ಪ್ರಾರಂಭಿಸದಿರಲು ಕಾರಣವೇನು ; ಜವಳ ಪಾರ್ಕ್ ಯೋಜನೆಯ ಒಟ್ಟು ಮೊತ್ತ ಎಷ್ಟು ;

(ಆ) ಇದರಲ್ಲಿ ರಾಜ್ಯ ಸರ್ಕಾರದ ಪಾಲೆಷ್ಟು ಹಾಗೂ ಕೇಂದ್ರ ಸರ್ಕಾರದ ಪಾಲೆಷ್ಟು; ಎರಡು ಸರ್ಕಾರಗಳಿಂದ ಇದುವರೆಗೂ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಭೀಮಾ ನದಿಗೆ ಅಣೆಕಟ್ಟು ಕಟ್ಟುವ ಕ್ರಿಯಾ ಯೋಜನೆಯು ಇದರ ಭಾಗವಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹದಗೆಟ್ಟ ರಸ್ತೆ ಮತ್ತು ಗುಂಡಿಗಳ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೧ (೧೪೭೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆಯ ಕಿಲ್ಲರ್ ಗುಂಡಿಗಳಿಗೆ ಜೇವರ್ಗಿಯ ಸರ್ಕಾರಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರೊಬ್ಬರು ಬಲಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಗರದ ಎಲ್ಲಾ ರಸ್ತೆಗಳಲ್ಲಿ ಭಾರಿ ಪ್ರಮಾಣದ ತಗ್ಗು ಗುಂಡಿಗಳು ಬಿದ್ದಿದ್ದರೂ, ಮಹಾನಗರ ಪಾಲಿಕೆಯ ಅಧಿಕಾರಿಗಳು ಹಾಗೂ ಸರ್ಕಾರ ತಗ್ಗು, ಗುಂಡಿಗಳನ್ನು ಮುಚ್ಚಿ ಹದಗೆಟ್ಟ ರಸ್ತೆಗಳನ್ನು ಅಭಿವೃದ್ಧಿಪಡಿಸದಿರಲು ಕಾರಣವೇನು ; ಯಾವ ಗಡುವಿನೊಳಗೆ ರಸ್ತೆಗಳ ದುರಸ್ತಿ ಕಾರ್ಯಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಇ) ಕಲಬುರಗಿ ಮಹಾನಗರ ಪಾಲಿಕೆಯ ಆರ್ಥಿಕ ಸುಧಾರಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಹೊಸದಾಗಿ ಘೋಷಣೆ ಮಾಡಿದ ಪಟ್ಟಣ ಪಂಚಾಯಿತಿಗಳ ಚುನಾವಣೆ ನಡೆಸುವ ಬಗ್ಗೆ

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೨ (೧೪೮೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಬಾಗಲಕೋಟೆ ಜಿಲ್ಲೆಯ ಶಿರೂರು ಮತ್ತು ಲೋಕಾಪುರ ಅದರಂತೆ ವಿಜಯಪುರ ಜಿಲ್ಲೆಯಲ್ಲಿ ಬಬಲೇಶ್ವರ ಮತ್ತು ತಿಕೋಟ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಿದ್ದು ಕಳೆದ ೪ ವರ್ಷಗಳಿಂದ ನೂತನವಾಗಿ ಪಟ್ಟಣ ಪಂಚಾಯಿತಿಗಳೆಂದು ಘೋಷಣೆ ಮಾಡಿರುವ ಸಂಸ್ಥೆಗಳಿಗೆ ಚುನಾವಣೆ ನಡೆಸದೇ ಇರುವ ಕಾರಣಕ್ಕೆ ಅಭಿವೃದ್ಧಿ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಬಾಗಲಕೋಟಿ ಜಿಲ್ಲೆಯ ಕೈಗಾರಿಕಾ ಪ್ರದೇಶಗಳಲ್ಲಿ ಸಮರ್ಪಕವಾಗಿ ನಿವೇಶನ/ಜಮೀನುಗಳ ಹಂಚಿಕೆಯಾಗದೇ ಇರುವ ಕುರಿತು

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೩ (೧೪೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ನಿರ್ಮಾಣಗೊಂಡ ಕೈಗಾರಿಕಾ ಪ್ರದೇಶಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು ; ಅವುಗಳಲ್ಲಿ ಹಂಚಿಕೆಯಾದವುಗಳೆಷ್ಟು (ಇನ್ನೂ ಬಾಕಿ ಉಳಿದವುಗಳೆಷ್ಟು; ಮಾಹಿತಿ ನೀಡುವುದು)

(ಆ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಸ್ಥಾಪಿತವಾಗಿರುವ ಉದ್ಯಮಗಳ ಸಂಖ್ಯೆ ಎಷ್ಟು ಮತ್ತು ಸದರಿ ಉದ್ಯಮಗಳಲ್ಲಿ ಕಾರ್ಯನಿರ್ವಹಿಸುವ ಸ್ಥಳೀಯ ಉದ್ಯೋಗಿಗಳ ಸಂಖ್ಯೆ ಎಷ್ಟು ; (ಉದ್ಯಮಗಳ ಹೆಸರು, ತಯಾರಾಗುತ್ತಿರುವ ಉತ್ಪನ್ನಗಳ ಹೆಸರು ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು)

(ಇ) ಮೂಲಸೌಕರ್ಯಗಳ ಕೊರತೆ ಹಿನ್ನಲೆಯಲ್ಲಿ ಮತ್ತು ಉದ್ದಿಮೆದಾರರನ್ನು ಆಕರ್ಷಿಸುವ ದಿಶೆಯಲ್ಲಿ ಸರ್ಕಾರದ ಇಚ್ಛಾಶಕ್ತಿಯ ಕೊರತೆಯಿಂದಾಗಿ ಹಲವು ಕೈಗಾರಿಕಾ ಪ್ರದೇಶಗಳಲ್ಲಿ ಸಮರ್ಪಕವಾಗಿ ನಿವೇಶನ/ಜಮೀನುಗಳು ಹಂಚಿಕೆಯಾಗದೆ ಉಳಿಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತವಾದ ಮಾರುಕಟ್ಟೆ ಸೌಲಭ್ಯಗಳು ದೊರೆಯದೇ ಪರದಾಡುತ್ತಿರುವ ಕುರಿತು

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೪ (೧೫೬೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ನಕಲಿ ಬ್ರಾಂಡ್ ಹೊಂದಿರುವ ಸೂರತ್ ನ ಕಡಿಮೆ ದರದ ಸಿಂಥೆಟಿಕ್ ಸೀರೆಗಳ ಮಾರಾಟ ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ;

(ಆ) ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳಿಂದ ಉತ್ಪಾದಿಸಲಾಗುವ ಯಾವ ಯಾವ ಉತ್ಪನ್ನಗಳಿಗೆ, ಯಾವ ಯಾವ ಪ್ರದೇಶಗಳಿಗೆ ಭೌಗೋಳಿಕ ಸೂಚನೆಗಳನ್ನು ಗುರುತಿಸಲಾಗಿದೆ ;

(ಇ) ಭೌಗೋಳಿಕ ಸೂಚನೆಗಳನ್ನು ಸೂಚಿಸಲಾಗಿದ್ದರೂ ಸಹಿತ ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತವಾದ ಮಾರುಕಟ್ಟೆ ಸೌಲಭ್ಯಗಳು ದೊರೆಯದೇ ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಪರಿಹಾರದ ಕ್ರಮಗಳೇನು?

## ಬಳ್ಳಾರಿ ಜಿಲ್ಲೆಯಲ್ಲಿ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆ ಮಾಡುವ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೫ (೧೪೮೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆ ಮಾಡಲಾಗುತ್ತಿದೆಯೇ ; ಇದ್ದಲ್ಲಿ, ಈ ಕಾಮಗಾರಿ ಯಾವ ಹಂತದಲ್ಲಿದೆ ; ಇದರ ಅನುಕೂಲಗಳೇನು ; ಇದರ ಕುರಿತಾಗಿ ನಡೆದಿರುವ ಕೆಲಸಗಳೇನು ; ಮಾಹಿತಿ ಒದಗಿಸುವುದು ;

(ಆ) ಈ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆಗೆ ಸ್ಥಳದ ಗುರುತಿಸುವಿಕೆ ಕೈಗೊಳ್ಳಲಾಗಿದೆಯೇ ; ಇದ್ದಲ್ಲಿ, ಯಾವ ಪ್ರದೇಶದಲ್ಲಿ ಗುರುತಿಸಲಾಗಿದೆ ; ಅದರ ಅನುಕೂಲಗಳೇನು ;

(ಇ) ಬಳ್ಳಾರಿ ಜಿಲ್ಲೆಯ ಈ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ; ಇಲ್ಲಿಯವರೆಗೂ ಇದರ ಕುರಿತಾಗಿ ನಡೆದಿರುವ ಪ್ರಕ್ರಿಯೆಗಳೇನು ; ದಾಖಲೆಗಳೊಂದಿಗೆ ಮಾಹಿತಿ ಒದಗಿಸುವುದು ?

## ನಗರಸಭೆ ಮತ್ತು ನಗರಪಾಲಿಕೆ ವ್ಯಾಪ್ತಿಯ ಅನಧಿಕೃತ ನಿವೇಶನಗಳ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೮೬ (೧೪೯೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಸಭೆ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿವೇಶನಗಳನ್ನು ಮತ್ತು ಕಟ್ಟಡಗಳನ್ನು ನಿರ್ಮಾಣ ಮಾಡಿರುವ ಸಂಖ್ಯೆ ಎಷ್ಟು; (ನಗರಸಭೆ ಮತ್ತು ಮಹಾನಗರ ಪಾಲಿಕೆವಾರು ಮಾಹಿತಿ ನೀಡುವುದು)

(ಆ) ಈ ರೀತಿಯಾಗಿ ನಿರ್ಮಾಣವಾಗಿರುವ ಅನಧಿಕೃತ ನಿವೇಶನ ಮತ್ತು ಕಟ್ಟಡಗಳಿಗೆ 'ಬಿ' ಖಾತೆ ನೀಡುವ ಯೋಜನೆ ಜಾರಿಯಿಂದ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; ಎಷ್ಟು ಜನ ಅರ್ಜಿ ಸಲ್ಲಿಸಿರುತ್ತಾರೆ ; ಎಷ್ಟು ಅರ್ಜಿಗಳನ್ನು ವಿಲೇ ಮಾಡಲಾಗಿದೆ ; ನಗರಸಭೆ ಮತ್ತು ಮಹಾನಗರ ಪಾಲಿಕೆವಾರು ಮಾಹಿತಿ ನೀಡುವುದು ;

(ಇ) ಈ ನಗರಸಭೆ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯ ಅನಧಿಕೃತವಾಗಿ ನಿರ್ಮಾಣಗೊಂಡ ಆಸ್ತಿಗಳಿಗೆ 'ಎ' ಖಾತೆ ವಿತರಿಸುವ ಪ್ರಸ್ತಾವ ಸರ್ಕಾರದಲ್ಲಿದೆಯೇ ; ಇದ್ದಲ್ಲಿ, ಯಾವ ದಿನಾಂಕದಿಂದ ಜಾರಿಗೆ ತರಲಾಗುವುದು ಮತ್ತು ನಿವೇಶನಗಳಿಗೆ ಹಾಗೂ ಕಟ್ಟಡಗಳಿಗೆ ನಿಗದಿಪಡಿಸುವ ಶುಲ್ಕವೆಷ್ಟು ; (ಮಾಹಿತಿ ನೀಡುವುದು)

(ಈ) ಪ್ರಸ್ತುತ ನೀಡುತ್ತಿರುವ 'ಬಿ' ಖಾತೆಯನ್ನು ಸಂಬಂಧಪಟ್ಟ ಅಧಿಕಾರಿಗಳು ಸಮರ್ಪಕವಾಗಿ ನಿಗದಿತ ದಿನಾಂಕದಲ್ಲಿ ವಿತರಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ?

## ನಗರ ಯೋಜನೆ ಗ್ರಾಮಾಂತರ ಯೋಜನೆಯ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೮೭ (೧೪೯೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಯೋಜನೆ ಮತ್ತು ಗ್ರಾಮಾಂತರ ಯೋಜನೆಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇರುತ್ತವೆ ; ಇವುಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ ಇಲಾಖೆಯು ಯೋಜನೆಗಳನ್ನು ಅನುಷ್ಠಾನಗೊಳಿಸಲು ಕಷ್ಟವಾಗುವುದಿಲ್ಲವೇ ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿದ್ದಲ್ಲಿ ನಿರುದ್ಯೋಗಿಗಳ ಸಂಖ್ಯೆ ಕಡಿಮೆ ಆಗುವುದಿಲ್ಲವೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ರಾಜಧನದ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೮೮ (೧೪೯೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಚಿತ್ರದುರ್ಗ, ಕೋಲಾರ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ೨೦೨೩–೨೪ ರಿಂದ ೨೦೨೫–೨೬ನೇ ಸಾಲಿನವರೆಗೆ ಜಮೆಯಾಗಿರುವ ರಾಜಧನ ಎಷ್ಟು ; (ಮಾಹಿತಿ ನೀಡುವುದು)

(ಆ) ಈ ರೀತಿಯಾಗಿ ಕ್ರೋಢೀಕೃತವಾಗಿರುವ ರಾಜಧನದಲ್ಲಿ ಸದರಿ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ರಾಜಧನದ ಮಾಹಿತಿ ನೀಡುವುದು ;

(ಇ) ಮೂಲಭೂತ ಸೌಕರ್ಯಗಳಿಗೆ ನಿಗದಿ ಪಡಿಸಿರುವ ಅನುದಾನಗಳ ವಿವರ ನೀಡುವುದು ; ಈ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪೂರ್ಣ ಹಣ ಬಳಸಲಾಗಿದೆಯೇ, ಮತ್ತು ಇವುಗಳಿಗೆ ವೆಚ್ಚವಾಗಿರುವ ಅನುದಾನದ ವಿವರಗಳನ್ನು ನೀಡುವುದು ;

(ಈ) ಪ್ರಸ್ತುತ ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಇರುವ ರಾಜಧನ ಮೊತ್ತವೆಷ್ಟು ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಯೋಜನೆ ಮತ್ತು ಸಹಾಯಧನ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೮೯ (೧೪೯೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಲ್ಲಿ ಹಾಲಿ ಇರುವ ಯೋಜನೆಗಳು ಯಾವುವು ; ಈ ಯೋಜನೆಗಳಲ್ಲಿ ಸರ್ಕಾರದಿಂದ ನೀಡುವ ಸಾಲದ ಮೊತ್ತ ಮತ್ತು ಸಹಾಯ ಧನ ಯಾವ ಪ್ರಮಾಣದಲ್ಲಿದೆ ;

(ಆ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನವರೆಗೆ ರಾಜ್ಯದಲ್ಲಿ ತೋಟಗಾರಿಕೆಯಲ್ಲಿ ತೊಡಗಿರುವ ಎಷ್ಟು ಜನ ರೈತರಿಗೆ ಯಾವ ಯಾವ ಪ್ರಯೋಜನಗಳನ್ನು ನೀಡಲಾಗಿದೆ ;

(ಇ) ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಯಡಿ ಇರುವ ಯೋಜನೆಗಳು ಯಾವುವು ಈ ಯೋಜನೆಗಳಲ್ಲಿ ಇರುವ ಸಹಾಯಧನ ಎಷ್ಟು, ವಿವರಗಳ ಮಾಹಿತಿ ನೀಡುವುದು ?

## ಕಲಬುರಗಿ ನಗರದಲ್ಲಿ ಮೂಲಭೂತ ಸೌಕರ್ಯಗಳ ಕಾಮಗಾರಿಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೯೦ (೧೫೭೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮಹಾನಗರ ಪಾಲಿಕೆಯು ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನಗರೋತ್ಥಾನ ಯೋಜನೆಯಡಿ ಕಳೆದ ೨ ವರ್ಷಗಳಲ್ಲಿ ಎಷ್ಟು ಕಾಮಗಾರಿ ಮಾಡಲಾಗಿದೆ ; ಅದಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ವಾರ್ಡ್‌ವಾರು, ಕಾಮಗಾರಿ ಪ್ರಕಾರ ನೀಡುವುದು)

(ಆ) ಸದರಿ ಯೋಜನೆಯ ಕಾಮಗಾರಿ ಪೂರ್ಣವಾಗಿದೆಯೇ ; ಪೂರ್ಣವಾಗದಿದ್ದಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಇ) ಕಲಬುರಗಿ ನಗರ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಲಬುರಗಿ ನಗರದಲ್ಲಿ ಶುದ್ಧ ಕುಡಿಯುವ ನೀರಿನ ಸಲುವಾಗಿ ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ; ಎಷ್ಟು ಕಡೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದೆ ; ಅದರಲ್ಲಿ ಎಷ್ಟು ಕಾರ್ಯ ನಿರ್ವಹಿಸುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ ವಿಮಾನ ಹಾರಾಟ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೧ (೧೫೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ವಿಮಾನ ನಿಲ್ದಾಣಕ್ಕೆ ಯಾವುದೇ ವಿಮಾನ ಹಾರಾಟವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಮಾನ ಹಾರಾಟ ನಿಲ್ಲಿಸಲು ಕಾರಣವೇನು ;

(ಆ) ಇದು ಸ್ಥಗಿತಗೊಂಡರೆ ತುರ್ತು ಸಂದರ್ಭದಲ್ಲಿ ತೆರಳಲು ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಕಲಬುರಗಿ ವಿಮಾನ ನಿಲ್ದಾಣಕ್ಕೆ ಮತ್ತೆ ಯಾವ ಕಾಲಮಿತಿಯೊಳಗೆ ವಿಮಾನ ಹಾರಾಟ ಪ್ರಾರಂಭಿಸಲಾಗುವುದು ; ವಿಮಾನ ಕಂಪನಿಗಳ ಜೊತೆ ಚರ್ಚಿಸಲಾಗಿದೆಯೇ ?

## ಕಲ್ಯಾಣ ಕರ್ನಾಟಕದ ವ್ಯಾಪ್ತಿಯಲ್ಲಿ ಉದ್ಯಾನವನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೨ (೧೫೭೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ನಗರ ವ್ಯಾಪ್ತಿಯಲ್ಲಿ ಬರುವ ಉದ್ಯಾನವನಗಳು ಎಷ್ಟು; ಮತ್ತು ಅದರ ಕಾರ್ಯನಿರ್ವಹಣೆಗೆ ತಗಲುತ್ತಿರುವ ವೆಚ್ಚವೆಷ್ಟು ;

(ಆ) ಈ ಭಾಗದಲ್ಲಿ ಕಳೆದ ೨ ವರ್ಷಗಳಲ್ಲಿ ಉದ್ಯಾನವನಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ; ಉದ್ಯಾನವನಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಈ ಭಾಗದ ನಗರ ವ್ಯಾಪ್ತಿಯಲ್ಲಿ (ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿ) ಮೂಲಭೂತ ಸೌಲಭ್ಯಗಳನ್ನು ಕೈಗೆತ್ತಿಕೊಳ್ಳಲು ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದೆಯೇ ; ಬಿಡುಗಡೆಯಾಗಿದ್ದಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; (2 ವರ್ಷಗಳ ಸಂಪೂರ್ಣ ಮಾಹಿತಿ ಜಿಲ್ಲಾವಾರು ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ನಗರ ವ್ಯಾಪ್ತಿಯಲ್ಲಿ ನೂತನ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ, ಶೌಚಾಲಯಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಅದರ ಕಾರ್ಯನಿರ್ವಹಣೆಗೆ ತಗಲುತ್ತಿರುವ ವೆಚ್ಚ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಚಿನ್ನದ ಗಣಿ ನಿಕ್ಷೇಪದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂಧ ಚುನಾಯಿತರಾದವರು) :–**

೧೩೯೩ (೧೫೭೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಚಿನ್ನದ ಗಣಿ ನಿಕ್ಷೇಪ ಪತ್ತೆ ಹಚ್ಚಲಾಗಿದೆಯೇ ; ಪತ್ತೆ ಹಚ್ಚಿದ್ದಲ್ಲಿ, ಎಷ್ಟು ಎಕರೆ ವಿಸ್ತೀರ್ಣದಲ್ಲಿ ಚಿನ್ನದ ಗಣಿ ಪತ್ತೆಯಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಚಿನ್ನದ ಗಣಿ ಪತ್ತೆಯಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಚಿನ್ನದ ಗಣಿಗಾರಿಕೆಯನ್ನು ಪ್ರಾರಂಭಮಾಡಲಾಗುವುದು ; (ಚಿನ್ನದ ಗಣಿ ಪತ್ತೆಯಾದ ಸ್ಥಳದ ಪೂರ್ಣ ಮಾಹಿತಿ ಸರ್ವೆ ನಂಬರ್, ನಕ್ಷೆ ಸಹಿತ ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಅಕ್ರಮ ಮರಳು ಗಣಿಗಾರಿಕೆಯಲ್ಲಿ ರಾಜ್ಯದ ಯಾವ ಯಾವ ಭಾಗದಲ್ಲಿ ಪ್ರಕರಣ ದಾಖಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಡಿಕೆ ಉತ್ಪನ್ನಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೪ (೧೫೦೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ವಿವಿಧ ಬಗೆಯ ಹಲವಾರು ಉತ್ಪನ್ನಗಳ ತಯಾರಿಕೆಯಲ್ಲಿ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ

ಬಳಸಿಕೊಳ್ಳಲು ಸಾಧ್ಯತೆಗಳ ಕುರಿತು ಸಂಶೋಧನೆಗೆ ಹಾಗೂ ಅಡಿಕೆ ಉತ್ಪನ್ನಗಳ ಮೌಲ್ಯ–ವರ್ಧನೆಗೆ ಉತ್ತೇಜನ ನೀಡುವುದಕ್ಕೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ;

(ಆ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳುವ ಸಾಧ್ಯತೆಗಳ ಕುರಿತು ಸಂಶೋದನೆಗೆ ಹಾಗೂ ಅಡಿಕೆ ಉತ್ಪನ್ನಗಳ ಮೌಲ್ಯ ವರ್ಧನೆಗೆ ಉತ್ತೇಜನ ನೀಡುವ ಕಾರ್ಯಕ್ರಮ ಮತ್ತು ಯೋಜನೆಗಳಿಗೆ ಇಲ್ಲಿಯುವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು ;

(ಇ) ವಿವಿಧ ಬಗೆಯ ಔಷಧ, ಸಾಬೂನು, ಬಣ್ಣ ಸಿರಾಫ್ ಹಾಗೂ ಇತರ ಹಲವಾರು ಉತ್ಪನ್ನಗಳ ತಯಾರಿಕೆಯಲ್ಲಿ ಕೂಡ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳುವ ವಿಪುಲ ಸಾಧ್ಯತೆಗಳಿದ್ದು, ಅದಕ್ಕೆ ಸಂಬಂಧಿಸಿದಂತೆ ಅಡಿಕೆಯ ಔಷಧೀಯ ಮತ್ತು ಉತ್ತಮ ಗುಣಗಳನ್ನು ದಾಖಲೆಯ ಆಧಾರದಲ್ಲಿ ತಿಳಿಸಲು ವ್ಯಾಪಕ ಸಂಶೋಧನೆ ಕೈಗೊಳ್ಳಲು ತ್ವರಿತವಾಗಿ ಅಗತ್ಯ ಕ್ರಮ ವಹಿಸಲು ಸರ್ಕಾರ ಈ ಕೂಡಲೇ ಕ್ರಮ ಕೈಗೊಳ್ಳುವುದೇ ?

## ಕಲಬುರಗಿ ನಗರ ವ್ಯಾಪ್ತಿಯಲ್ಲಿ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ಸಾರ್ವಜನಿಕರ ಆಸ್ತಿಯ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೫ (೧೪೭೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರ ವ್ಯಾಪ್ತಿಯಲ್ಲಿ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ಸಾರ್ವಜನಿಕರ ಆಸ್ತಿಗಳ ಸಂಖ್ಯೆ ಎಷ್ಟು; ಹಾಗೂ ಎಷ್ಟು ಕೋಟಿ ಪರಿಹಾರ ನೀಡಬೇಕಾಗುತ್ತದೆ ; (ವಿವರ ನೀಡುವುದು)

(ಆ) ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ಸಾರ್ವಜನಿಕರ ಆಸ್ತಿಗಳಿಗೆ ಸೂಕ್ತ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ, ಪರಿಹಾರದ ಮೊತ್ತ ಎಷ್ಟು ಹಾಗೂ ಯಾವ ಮಾನದಂಡವನ್ನು ಅನುಸರಿಸಿ ಪರಿಹಾರ ಮೊತ್ತವನ್ನು ನಿಗದಿ ಮಾಡಲಾಗಿದೆ ; (ಆದೇಶದ ಪ್ರತಿ ನೀಡುವುದು)

(ಇ) ಪರಿಹಾರ ನೀಡದೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಪ್ರಕರಣಗಳಿಗೆ ಪರಿಹಾರ ವಿತರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-186/500 ಪ್ರತಿಗಳು/02–03–2026